ಸಂಪುಟ: 14 Volume | ಸಂಚಿಕೆ: 32 Issue | ಪುಟಗಳು 08 Pages | ಗುರುವಾರ 07 ಮೇ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

**ಬೆಳಗು**
ಮತ್ತೆ ಮತ್ತೆ ಯಾವ ಪುಸ್ತಕ ಓದುತ್ತೇವೆಯೋ ಅದು ಉತ್ತಮವಾದ ಪುಸ್ತಕ.
–ಜಾನ್ ರಸ್ಕಿನ್

ಸಂಪಾದಕರು: ರಮೇಶ ರೆಡ್ಡಿ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ



ಮಾಜಿ ಸಚಿವ ರಾಜಶೇಖರ ಬಿ.ಪಾಟೀಲ ರವರು ಬೆಂಗಳೂರನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ರವರನ್ನು ಭೇಟಿ ಮಾಡಿ ಬೀದರ್ ಜಿಲ್ಲೆಯ ರಾಜಕೀಯ ವಿದ್ಯಾಮಾನಗಳ ಬಗ್ಗೆ ಚರ್ಚೆ ನಡೆಸಿದರು.

## ಪಚ್ಚ ಬಾಳೆ ಸಸಿ ಮಾರಾಟ

**ಬೆಂಗಳೂರು:** ತೋಟಗಾರಿಕೆ ಇಲಾಖೆ, ಜೈವಿಕ ಕೇಂದ್ರ ಹುಳಿಮಾವು, ಬನ್ನೇರುಘಟ್ಟ ರಸ್ತೆ, (ರಾಯಲ್ ಮೀನಾಕ್ಷಿ ಮಾಲ್ ಎದುರಿಗೆ), ಬೆಂಗಳೂರು ಇಲ್ಲಿ ಕಳೆದ 25 ವರ್ಷಗಳಿಂದ ಸುಧಾರಿತ ತಂತ್ರಜ್ಞಾನಗಳನ್ನು ಬಳಸಿ ಉತ್ತಮ ಅಂಗಾಂಶ ಗುಣಮಟ್ಟದ ಕೃಷಿ ಪಚ್ಚ ಬಾಳೆ (ಗ್ರ್ಯಾಂಡ್ ನೈನ್) ಸಸ್ಯೋತ್ಪಾದನೆ ಮಾಡಲಾಗುತ್ತಿದ್ದು, ಈ ಸಸಿಗಳನ್ನು ಸಾರ್ವಜನಿಕರ ಮಾರಾಟಕ್ಕೆ ವ್ಯವಸ್ಥೆ ಮಾಡಿದೆ. ಎಕ್ಸ್ ಅಗಾರ್ ಪ್ರತಿ ಸಸಿಗೆ 6 ರೂ., 98 ಕ್ಯಾವಿಟಿವುಳ್ಳ ಪ್ರೋಟ್ರೇ ಪ್ರತಿ ಸಸಿಗೆ 7 ರೂ. ಹಾಗೂ 4*6 ಪಾಲಿಬ್ಯಾಗ್ ಪ್ರತಿ ಸಸಿಗೆ ರೂ.12 ದರವನ್ನು ನಿಗದಿ ಮಾಡಲಾಗಿದೆ. ಹೆಚ್ಚಿನ ಮಾಹಿತಿಗಾಗಿ ತೋಟಗಾರಿಕಾ ಉಪನಿರ್ದೇಶಕರ ಮೊಬೈಲ್ ಸಂಖ್ಯೆ: 7975736459, ಸಹಾಯಕ ತೋಟಗಾರಿಕೆ ಅಧಿಕಾರಿಯ ಮೊಬೈಲ್ ಸಂಖ್ಯೆ 9880234281, 7026235854 ಹಾಗೂ ಇ–ಮೇಲ್: ddhbiotech3@gmail.comಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಅಭಿವೃದ್ಧಿ ಕಾಮಗಾರಿಗಳಲ್ಲಿ ಪ್ರಮಾಣ ಹಾಗೂ ಗುಣಮಟ್ಟಕ್ಕೆ ಹೆಚ್ಚಿನ ಆದ್ಯತೆ



**ಹಗರಿಬೊಮ್ಮನಹಳ್ಳಿ:** ನಾನು ಶಾಸಕನಾಗಿದ್ದಾಗಿನಿಂದಲೂ ಕೆಲಸ,ಕಾಮಗಾರಿಗಳಲ್ಲಿ ಗುಣಮಟ್ಟ ಹಾಗೂ ಪ್ರಮಾಣಕ್ಕೆ ಹೆಚ್ಚಿನ ಆದ್ಯತೆ ಕೊಡುತ್ತಾ ಬಂದಿದ್ದೇನೆ ಎಂದು ಶಾಸಕ ಕೆ.ನೇಮಿರಾಜ್ ನಾಯ್ಕ್ ಎಂದರು. ಅವರು ಮಾಲ್ವಿ ಜಲಾಶಯದ ಗೇಟ್ ಕೂಡಿಸುವ ಕಾಮಗಾರಿ ವೀಕ್ಷಣೆ ಮಾಡಿ,ಅಲ್ಲಿಯೇ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡುತ್ತಿದ್ದರು. ಮುಂದುವರಿದು ಮಾತನಾಡಿದ ಅವರು, ಮಾಜಿ ಶಾಸಕ ಭೀಮಾನಾಯ್ಕ ತಾನು ಅಧಿಕಾರದಲ್ಲಿದ್ದಾಗ ಮಾಡಿದ ಕಟ್ಟಡ ಕಾಮಗಾರಿಗಳಿಗೆ ಬರೀ ಸುಣ್ಣ ಬಣ್ಣ ಬಳಿಸಲಿ ಎಂಬ ಮಾತನ್ನು ನೆನಪಿಸಿಕೊಂಡ ಅವರು,ಅಷ್ಟೊಂದು ಕೆಲಸ ಕಾಮಗಾರಿಗಳು ಎಲ್ಲಿ ನಡೆದಿವೆ ತೋರಿಸಲಿ,ಸುಣ್ಣ,ಬಣ್ಣ ಆಮೇಲೆ ಬಳಿಸೋಣ ಎಂದು ನಗೆ ಚಟಾಕಿ ಹಾರಿಸಿದರು. ನಾನು ಎಲ್ಲಾ ಸಮಾಜಗಳಿಗೆ ಸಮಾನವಾಗಿ ಅನುದಾನ ನೀಡಿದ್ದೇನೆ.ಮಾಜಿ ಶಾಸಕ ಹಾಲು ಮತದವರಿಗೆ ತನ್ನ ಹತ್ತು ವರ್ಷಗಳ ಅವಧಿಯಲ್ಲಿ ಏನು ಮಾಡಿದ್ದಾರೆ ತೋರಿಸಲಿ ಎಂದು ಸವಾಲು ಹಾಕಿದರು. ಹೆಬಿಡೆಂಟ್ ಕಂಪನಿಯಿಂದ ನಾನು ನೂರು ಕೋಟಿ ಕಮಿಷನ್ ಹೊಡೆದಿದ್ದೇನೆ

# ಉದ್ಯೋಗಿಗಿಂತ ಅವಕಾಶದ ಸೃಷ್ಟಿಕರ್ತರಾಗಿ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು/ಶಿವಮೊಗ್ಗ

"ಕೇವಲ ಉದ್ಯೋಗಾಕಾಂಕ್ಷಿಯಾಗುವ ಬದಲು ಅವಕಾಶಗಳ ಸೃಷ್ಟಿಕರ್ತರಾಗಿ. ಸಂಸ್ಕೃತಿ, ನಾವೀನ್ಯತೆ ಮತ್ತು ಉದ್ಯಮಶೀಲತೆಯ ಮೂಲಕ ವೈಯಕ್ತಿಕವಾಗಿ ಮತ್ತು ಸಮಾಜಕ್ಕಾಗಿ ಹೊಸ ಸಾಧ್ಯತೆಗಳನ್ನು ಸೃಷ್ಟಿಸಲು ಶ್ರಮಿಸಿ" ಎಂದು ಗೌರವಾನ್ವಿತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಶಿವಮೊಗ್ಗದ ಕುವೆಂಪು ವಿಶ್ವವಿದ್ಯಾಲಯದ 35 ನೇ ಘಟಿಕೋತ್ಸವದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು "ವಿದ್ಯಾರ್ಥಿಗಳು ಜೀವನದಲ್ಲಿ ಯಶಸ್ಸಿನ ಹೊಸ ಎತ್ತರಗಳನ್ನು ಸಾಧಿಸಿ, ದೇಶದ ಅಭಿವೃದ್ಧಿಗೆ ತಮ್ಮ ಕೊಡುಗೆಯನ್ನು ನೀಡಬೇಕು. 'ಏಕೀಕೃತ ಭಾರತ, ಉತ್ತಮ ಭಾರತ, ಅಭಿವೃದ್ಧಿ ಹೊಂದಿದ ಭಾರತ' ಗುರಿಗಳ ಸಾಧನೆಗೆ 'ಮೇಕ್ ಇನ್ ಇಂಡಿಯಾ' ಹಾಗೂ 'ವೋಕಲ್ ಫಾರ್ ಲೋಕಲ್' ಅಭಿಯಾನಗಳಿಗೆ ಸಹಕಾರ ನೀಡಿ, ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡುವತ್ತ ಶ್ರಮಿಸಬೇಕು" ಎಂದರು.

"ನಿರಂತರವಾಗಿ ಬದಲಾಗುತ್ತಿರುವ ಮತ್ತು ಸ್ಪರ್ಧಾತ್ಮಕ ಯುಗದಲ್ಲಿ, ನಿರಂತರ ಕಲಿಕೆಯ ಮನೋಭಾವ, ನವೀನ



ಚಿಂತನೆ ಮತ್ತು ಸಮಾಜದ ಬಗ್ಗೆ ಜವಾಬ್ದಾರಿಯುತ ಪ್ರಜ್ಞೆ ಅತ್ಯಗತ್ಯ. ಆದ್ದರಿಂದ, ಕಲಿಯುವುದನ್ನು ಮುಂದುವರಿಸುವುದು, ಜ್ಞಾನ ಮತ್ತು ಕೌಶಲ್ಯಗಳನ್ನು ನವೀಕರಿಸುವುದು ಮತ್ತು ಕಾಲದ ಅಗತ್ಯಗಳನ್ನು ಪೂರೈಸಲು ನಿಮ್ಮನ್ನು ವಿಕಸಿತಗೊಳ್ಳುವುದು ಮುಖ್ಯ. ಗೌರವಾನ್ವಿತ ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ದೇಶವು ಹೊಸ ಯುಗದತ್ತ ಸಾಗುತ್ತಿದೆ. "ಅಭಿವೃದ್ಧಿ ಹೊಂದಿದ ಭಾರತ 2047" ಎಂಬ ದೃಷ್ಟಿಕೋನವನ್ನು ಸಾಕಾರಗೊಳಿಸಲು ನಾವು ಬದ್ಧರಾಗಿರುವ ಯುಗ. ಯುವಕರು ಈ ದೃಷ್ಟಿಕೋನವನ್ನು ಪೂರೈಸುವಲ್ಲಿ ನಿರ್ಣಾಯಕ ಪಾತ್ರ ವಹಿಸುತ್ತಾರೆ. ಭಾರತವನ್ನು ಸ್ವಾವಲಂಬಿಯನ್ನಾಗಿ, ಆರ್ಥಿಕವಾಗಿ ಸಬಲೀಕರಣಗೊಳಿಸುವ ಮತ್ತು ಜಾಗತಿಕ ನಾಯಕತ್ವದತ್ತ ಸಾಗುವ ಶಕ್ತಿಯನ್ನು ಹೊಂದಿದ್ದಾರೆ" ಎಂದು ಹೇಳಿದರು. "ಹೊಸ ಶಿಕ್ಷಣ ನೀತಿ 2020 ನಮ್ಮ ಶಿಕ್ಷಣ ವ್ಯವಸ್ಥೆಯನ್ನು ಹೆಚ್ಚು ಒಳಗೊಳ್ಳುವ, ಬಹು ಆಯಾಮದ ಮತ್ತು ಕೌಶಲ್ಯ ಆಧಾರಿತವಾಗಿಸಲು ದಾರಿ ಮಾಡಿಕೊಟ್ಟಿದೆ. ಶಿಕ್ಷಣವು ಇನ್ನು ಮುಂದೆ ಪದವಿ ಪಡೆಯುವ ಸಾಧನವಲ್ಲ; ಅದು ಜೀವನ ಕೌಶಲ್ಯ, ನೀತಿಶಾಸ್ತ್ರ ಮತ್ತು ಸಾಮಾಜಿಕ ಜವಾಬ್ದಾರಿಯ ಅಡಿಪಾಯವೂ ಆಗಿದೆ. ಜಾಗತಿಕ ತಾಪಮಾನ ಏರಿಕೆ, ಹವಾಮಾನ ಬದಲಾವಣೆ ಮತ್ತು ಪರಿಸರ ಮಾಲಿನ್ಯದಂತಹ ಜಾಗತಿಕ ಸವಾಲುಗಳ ಬಗ್ಗೆ ಗಮನ ಹರಿಸಬೇಕು. ಈ ದಿಕ್ಕಿನಲ್ಲಿ ಸಕಾರಾತ್ಮಕ ಪ್ರಯತ್ನಗಳು ಅಗತ್ಯವಿದೆ. ಈ ಜಾಗತಿಕ ಸವಾಲುಗಳನ್ನು ಪರಿಹರಿಸಲು ಮುಂದಾಗಬೇಕು. ಇಂದಿನ ಜಗತ್ತು ತ್ವರಿತ ಬದಲಾವಣೆಗೆ ಒಳಗಾಗುತ್ತಿದೆ. ವಿಜ್ಞಾನ, ತಂತ್ರಜ್ಞಾನ ಮತ್ತು ನಾವೀನ್ಯತೆಯ ನಿರಂತರ ಬೆಳವಣಿಗೆಗಳು ಜೀವನದ ಪ್ರತಿಯೊಂದು ಅಂಶಗಳ ಮೇಲೆ ಪರಿಣಾಮ ಬೀರಿವೆ ಎಂದು ತಿಳಿಸಿದರು.

"ಮಹಾನ್ ಸಾಹಿತಿ ಮತ್ತು ಚಿಂತಕ ಕುಪ್ಪಳ್ಳಿ ವೆಂಕಟಪ್ಪ ಪುಟ್ಟಪ್ಪ "ಕುವೆಂಪು" ಅವರ ಹೆಸರನ್ನು ಈ ವಿಶ್ವವಿದ್ಯಾಲಯಕ್ಕೆ ಇಡಲಾಗಿದೆ. ಈ ವಿಶ್ವವಿದ್ಯಾಲಯವು "ವಿಶ್ವಮಾನವೀಯತೆ"ಯ ಸಂದೇಶವನ್ನು ಬೋಧಿಸಿದ ಮತ್ತು ಅವರ ಸಾಹಿತ್ಯವು ಸಮಾಜದಲ್ಲಿ ಸಮಾನತೆ, ಮಾನವೀಯತೆ ಮತ್ತು ಪ್ರಗತಿಪರ ಚಿಂತನೆಯನ್ನು ಪ್ರೇರೇಪಿಸಿದ "ಕುವೆಂಪು" ಅವರ ಆದರ್ಶಗಳಿಂದ ಪ್ರೇರಿತವಾಗಿದೆ. "ಕುವೆಂಪು" ಅವರ ಆದರ್ಶಗಳು ಮತ್ತು ಆಲೋಚನೆಗಳಿಂದ ಪ್ರೇರಿತವಾದ ಈ ವಿಶ್ವವಿದ್ಯಾಲಯವು ಶಿಕ್ಷಣದ ಕೇಂದ್ರ ಮಾತ್ರವಲ್ಲದೆ ಮೌಲ್ಯಗಳು, ಸಂಸ್ಕೃತಿ ಮತ್ತು ಸಾಮಾಜಿಕ ಜವಾಬ್ದಾರಿಯ ಪ್ರವರ್ತಕವಾಗಿದೆ. ವಿದ್ಯಾರ್ಥಿಗಳೇ, ಕುವೆಂಪು ಅವರ ಆದರ್ಶಗಳನ್ನು ಅಳವಡಿಸಿಕೊಂಡು ವಿಶ್ವ ಮಾನವ ಸಂದೇಶವನ್ನು ಸಾಕಾರಗೊಳಿಸಿ" ಎಂದು ಸಲಹೆ ನೀಡಿದರು.

## ಇ–ಸ್ವತ್ತು ಅರ್ಜಿಗಳ ವಿಲೇವಾರಿಗೆ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಅವರ ನೇತೃತ್ವದಲ್ಲಿ ಇಂದು ನಡೆದ ಸಭೆಯಲ್ಲಿ, ಕರ್ನಾಟಕ ಸರ್ಕಾರ ಜಾರಿಗೊಳಿಸಿರುವ ಇ–ಸ್ವತ್ತು ಸೌಲಭ್ಯವನ್ನು ಮತ್ತಷ್ಟು ಸರಳಗೊಳಿಸುವ ಕುರಿತು ಮಹತ್ವದ ಚರ್ಚೆ ನಡೆಯಿತು. ರಾಜ್ಯದ ಇತರ ಜಿಲ್ಲೆಗಳಿಗೆ ಹೋಲಿಸಿದರೆ, ಬೆಂಗಳೂರು ನಗರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ಅತಿ ಹೆಚ್ಚು ಅರ್ಜಿಗಳು ಸ್ವೀಕೃತಗೊಂಡಿದ್ದು, ಕೆಲವು ತಾಂತ್ರಿಕ ತೊಂದರೆಗಳಿಂದ ಬಹಳಷ್ಟು ಅರ್ಜಿಗಳು ವಿಲೇವಾರಿ ಆಗದೆ ಉಳಿದಿವೆ, ತೊಡಕುಗಳನ್ನು ನಿವಾರಿಸುವ ಮೂಲಕ ಅರ್ಜಿಗಳನ್ನು ತ್ವರಿತ ಗತಿಯಲ್ಲಿ ವಿಲೇವಾರಿ ಮಾಡಲು ಕ್ರಮ ಕೈಗೊಳ್ಳಬೇಕೆಂದು ಸಭೆಯಲ್ಲಿ ಹಾಜರಿದ್ದ ಎರಡೂ ಜಿಲ್ಲೆಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಸಚಿವ ಪ್ರಿಯಾಂಕ್ ಖರ್ಗೆ ಸೂಚಿಸಿದರು.

ಸಾರ್ವಜನಿಕರು ಇ–ಸ್ವತ್ತು ಸೇವೆಯನ್ನು ಪಡೆಯುವ ಸಂದರ್ಭದಲ್ಲಿ ಎದುರಿಸುತ್ತಿರುವ ತಾಂತ್ರಿಕ ಮತ್ತು ಆಡಳಿತಾತ್ಮಕ ತೊಂದರೆಗಳ ಬಗ್ಗೆ ಗಮನ ಹರಿಸಿದ ಸಚಿವ ಪ್ರಿಯಾಂಕ್ ಖರ್ಗೆ, ಪ್ರಕ್ರಿಯೆಯನ್ನು ಜನಸ್ನೇಹಿಗೊಳಿಸಲು



ಅಧಿಕಾರಿಗಳಿಗೆ ಸ್ಪಷ್ಟ ನಿರ್ದೇಶನಗಳನ್ನು ನೀಡಿದರು. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಹಿರಿಯ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿ, ವಿವಿಧ ಸಮಸ್ಯೆಗಳ ಬಗ್ಗೆ ವಿವರಿಸಿದರು.

**ಸಭೆಯಲ್ಲಿ ಮುಖ್ಯವಾಗಿ ಕೆಳಗಿನ ಅಂಶಗಳ ಮೇಲೆ ಚರ್ಚೆ ನಡೆಯಿತು:**

- ಇ–ಸ್ವತ್ತು ಅರ್ಜಿಗಳ ಪ್ರಕ್ರಿಯೆಯನ್ನು ವೇಗಗೊಳಿಸುವುದು
- ದಾಖಲೆ ಪರಿಶೀಲನೆ ವಿಧಾನವನ್ನು ಸರಳೀಕರಿಸುವುದು
- ಸಾರ್ವಜನಿಕರಿಗೆ ತ್ವರಿತ ಸೇವೆ ಒದಗಿಸಲು ತಾಂತ್ರಿಕ ಸುಧಾರಣೆಗಳನ್ನು ತರಲು ಕ್ರಮ
- ಗ್ರಾಮ ಪಂಚಾಯತ್ ಮಟ್ಟದಲ್ಲಿ ಜಾಗೃತಿ ಮತ್ತು ಸಹಾಯ ಕೇಂದ್ರಗಳನ್ನು ಬಲಪಡಿಸುವುದು.

## ಹೈ ಹೇಳಿದರೆ 5 ವರ್ಷ ಪೂರ್ಣ

• ಮಲ್ಲಮ್ಮ ನುಡಿ ವಾರ್ತೆ ಮೈಸೂರು

ನಾಯಕತ್ವ ಬದಲಾವಣೆ ಸಂಬಂಧಪಟ್ಟಂತೆ ಹೈಕಮಾಂಡ್ ಹೇಳಿದಂತೆ ಕೇಳುತ್ತೇನೆ. ರಾಹುಲ್‌ಗಾಂಧಿ ಸಮಯ ಕೊಟ್ಟರೆ ದೆಹಲಿಗೆ ಹೋಗಿ ಭೇಟಿ ಮಾಡುತ್ತೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ಮೈಸೂರು ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪದೇ ಪದೇ ಕೇಳಲಾದ ಪ್ರಶ್ನೆಗಳಿಗೆ ಸಿಡಿಮಿಡಿಗೊಂಡರು. ತಿರುಗಿಸಿ, ಮುರುಗಿಸಿ ಯಾವ ರೀತಿ ಕೇಳಿದರೂ ತಮದು ಒಂದೇ ರೀತಿಯ ಉತ್ತರ. ಹೈಕಮಾಂಡ್ ಹೇಳಿದಂತೆ ನಡೆದುಕೊಳ್ಳುತ್ತೇನೆ. ಹೈಕಮಾಂಡ್ ಹೇಳಿದರೆ, 5 ವರ್ಷ ಪೂರೈಸುತ್ತೇನೆ. ಇಲ್ಲವಾದರೆ ಅವರು ಹೇಳಿದಂತೆ ಕೇಳುತ್ತೇನೆ ಎಂದರು.

ದೆಹಲಿಗೆ ಕರೆದರೆ ಹೋಗುತ್ತೇನೆ. ನಾನಾಗಿಯೇ ಹೋಗಬೇಕಾದರೆ ರಾಹುಲ್ ಗಾಂಧಿ ಸಮಯ ನೀಡಬೇಕು. ಆದರೆ ತಾವು ಈವರೆಗೂ ಅವರ ಸಮಯ ಕೇಳಲಿಲ್ಲ ಎಂದರು. ರಾಹುಲ್ ಗಾಂಧಿ ಸಮಯ ಕೊಟ್ಟು ದೆಹಲಿಗೆ ತಾವು ಭೇಟಿ ನೀಡಿದರೆ, ಸಚಿವ ಸಂಪುಟ ಪುನರ್ ರಚನೆ ಸೇರಿದಂತೆ ಇತರ ವಿಚಾರಗಳ ಬಗ್ಗೆ ಚರ್ಚೆ ನಡೆಸಲಾಗುವುದು ಎಂದರು.

5 ವರ್ಷ ಅವಧಿ ಪೂರ್ಣಗೊಳಿಸುವ ವಿಶ್ವಾಸ ಹೊಂದಿರುವ



ಬಗ್ಗೆ ಪ್ರಶ್ನಿಸುವಾಗ ಎಲ್ಲಾ ನಿರ್ಣಯಗಳನ್ನು ಹೈಕಮಾಂಡ್ ತೆಗೆದುಕೊಳ್ಳಬೇಕು. ಗೊಂದಲಗಳನ್ನು ಬಗೆಹರಿಸುವಂತೆ ಸಚಿವರು ಒತ್ತಾಯಿಸುತ್ತಿರುವುದು ಅವರ ವಯಕ್ತಿಕ ಅಭಿಪ್ರಾಯ ಎಂದರು. ಜನ ಮನ್ನಣೆ: ಕಾಂಗ್ರೆಸ್–ಸರ್ಕಾರದ ಯೋಜನೆಗಳು ಜನ ಮೆಚ್ಚುಗೆಗೆ ಪಾತ್ರವಾಗಿದ್ದು, ಜನಾಶೀರ್ವಾದದಿಂದ ರಾಜ್ಯದ ಉಪಚುನಾವಣೆಗಳಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಅಭೂತಪೂರ್ವ ಗೆಲುವು ಸಾಧಿಸಲು ಸಾಧ್ಯವಾಗಿದೆ. ಇದು ರಾಜ್ಯದ ಜನರು ಕಾಂಗ್ರೆಸ್ ಸರ್ಕಾರದ ಯೋಜನೆಗಳನ್ನು ಮೆಚ್ಚಿಕೊಂಡಿರುವುದನ್ನು ಸೂಚಿಸುತ್ತದೆ.

## ತೆರಿಗೆಪಾವತಿಸಿ,5%ರಿಯಾಯಿತಿ

• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ



ಸರ್ಕಾರದ ಆದೇಶದಂತೆ ಪಟ್ಟಣದ ಎಲ್ಲಾ ಸಾರ್ವಜನಿಕರು ಪ್ರಸ್ತುತ ವರ್ಷದ 2026–27ನೇ ಸಾಲಿನ ತಮ್ಮಗೆ ಸಂಬಂಧಿಸಿದ ಆಸ್ತಿಯ ತೆರಿಗೆಯನ್ನು ದಿನಾಂಕ: 30–04–2026ರ ಒಳಗೆ ಆಸ್ತಿ ತೆರಿಗೆ ಪಾವತಿಸಿದ್ದಲ್ಲಿ ಆಸ್ತಿ ತೆರಿಗೆಯಲ್ಲಿ ಶೇಕಡಾ 5%ರಷ್ಟು ಇರುತ್ತದೆ ಎಂದು ಸರ್ಕಾರ ಆದೇಶ ಹೊರಡಿಸಿತ್ತು. ಪಟ್ಟಣದ ಎಲ್ಲ ಸಾರ್ವಜನಿಕರು ಆಸ್ತಿ ತೆರಿಗೆಯಲ್ಲಿ ಶೇ.5%ರಷ್ಟು ರಿಯಾಯಿತಿಯ ಸದುಪಯೋಗ ಪಡೆದುಕೊಳ್ಳಬೇಕು. ಈ ಹಿಂದಿನ ವರ್ಷ ಆಸ್ತಿ, ನೀರಿನ ತೆರಿಗೆಯನ್ನು ಕೂಡ ಪಾವತಿಸಿ ಪಟ್ಟಣದ ಅಭಿವೃದ್ಧಿಗೆ ಸಹಕರಿಸಬೇಕೆಂದು ಸತೀಶ ಗುಡ್ಡೆ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಬಾಗಲಕೋಟೆ ವಿಧಾನಸಭೆ ಕ್ಷೇತ್ರದ ಉಪಚುನಾವಣೆಯಲ್ಲಿ ಗೆಲುವು ಸಾಧಿಸಿದ ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ ಅವರು ಡಿಸಿಎಂ ಡಿ.ಕೆ ಶಿವಕುಮಾರ್ ಅವರನ್ನು ಭೇಟಿ ಮಾಡಿ ಧನ್ಯವಾದ ಹೇಳಿದರು. ಡಿಸಿಎಂ ಶುಭ ಕೋರಿದರು. ಮಲ್ಲಿಕಾರ್ಜುನ ಮೇಟಿ ಜತೆಗಿದ್ದರು.

## 8 ರಂದು ಉದ್ಯೋಗ ಮೇಳ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಮೇ.8 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಜಿಲ್ಲಾಡಳಿತ ಭವನ, ನವನಗರ, ಬಾಗಲಕೋಟೆಯಲ್ಲಿ ನೇರ ಸಂದರ್ಶನ ಹಮ್ಮಿಕೊಳ್ಳಲಾಗಿದೆ. ನೇರ ಸಂದರ್ಶನದಲ್ಲಿ ಖಾಸಗಿ ಕಂಪನಿಗಳು ಭಾಗವಹಿಸಿ ಹಲವಾರು ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲಿದ್ದಾರೆ. ಸಂದರ್ಶನದಲ್ಲಿ 19 ರಿಂದ 35 ವಯೋಮಿತಿಯಲ್ಲಿರುವ ಎಸ್.ಎಸ್.ಎಲ್.ಸಿ, ಪಿಯುಸಿ, ಐಟಿಐ ಹಾಗೂ ಪದವಿ ಪಾಸಾದವರು ಭಾಗವಹಿಸಬಹುದಾಗಿದೆ. ಭಾಗವಹಿಸುವ ಅಭ್ಯರ್ಥಿಗಳು ಬಯೋಡೇಟಾ ಮತ್ತು ಅಂಕ ಪಟ್ಟಿಗಳ ಪ್ರತಿಗಳೊಂದಿಗೆ ಭಾಗವಹಿಸಿ ಸದುಪಯೋಗ ಪಡಿಸಿಕೊಳ್ಳಲು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜನಸೇವೆಯಲ್ಲಿ ಬಿಎಸ್‌ವೈ ಶತಾಯಿಷಿಗಳಾಗಲಿ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಕರ್ನಾಟಕದ ರೈತರ ಕಣ್ಮಣಿ, ದೇಶದಲ್ಲಿಯೇ ಕೃಷಿ ಬಜೆಟ್ ಮಂಡಿಸಿದ ಪ್ರಥಮ ಮುಖ್ಯಮಂತ್ರಿ ಬಿ.ಎಸ್ ಯಡಿಯೂರಪ್ಪನವರು ಜನ ಸೇವೆಯಲ್ಲಿ ಶತಾಯಿಷಿಗಳಾಗಿ ಬಾಳುವಂತಾಗಲಿ ಎಂದು ಮಾಜಿ ಶಾಸಕ ಪ್ರಕಾಶ ಖಂಡ್ರೆ ಅಭಿಪ್ರಾಯ ವ್ಯಕ್ತಪಡಿಸಿದರು.

ಪಟ್ಟಣದ ಬಿಜೆಪಿ ಕಚೇರಿಯಲ್ಲಿ ಬುಧವಾರ ನಡೆದ ಕರಪತ್ರ ಬಿಡುಗಡೆ ಸಮಾರಂಭ ಹಾಗೂ ಪತ್ರಿಕಾ ಗೋಷ್ಠಿ ಉದ್ದೇಶಿಸಿ ಅವರು ಮಾತನಾಡಿದರು. ಇದೇ ಮೆ. 9 ರಂದು ಚಿತ್ರದುರ್ಗದಲ್ಲಿ ನಡೆಯಲಿರುವ ಬಿ.ಎಸ್.ವೈ ಅಭಿಮಾನೋತ್ಸವದಲ್ಲಿ ಭಾಲ್ಕಿಯಿಂದ ಸುಮಾರು 1000 ಅಭಿಮಾನಿಗಳು ಹೊರಡುವ ನಿರೀಕ್ಷೆ ಇದೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ಚಿತ್ರದುರ್ಗದ ಸಂಸದ ಗೋವಿಂದ ಕಾರಜೋಳ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ, ಜ್ಯಾತ್ಯಾತೀತ ಮತ್ತು ಪಕ್ಷಾತೀತ ವಾಗಿ ನಡೆಯುವ ಕಾರ್ಯಕ್ರಮದಲ್ಲಿ ಭಾಲ್ಕಿ ತಾಲೂಕು ವತಿಯಿಂದ ಸಾವಿರಾರು ಜನ ಭಾಗವಹಿಸುವ ನಿರೀಕ್ಷೆ ಇದೆ ಎಂದು ಹೇಳಿದರು. ಬಿಜೆಪಿ ಮಂಡಲ ಅಧ್ಯಕ್ಷ ವೀರಣ್ಣ ಕಾರಬಾರಿ ಮಾತನಾಡಿ, ದಕ್ಷಿಣ ಭಾರತದಲ್ಲಿ ಮೊಟ್ಟ ಮೊದಲು ಬಿಜೆಪಿ ಸರ್ಕಾರ ರಚಿಸಿದ ಶ್ರೇಯ ಬಿ.ಎಸ್.ವೈ ರವರಿಗೆ ಸಲ್ಲುತ್ತದೆ. ಮುಖ್ಯ ಮಂತ್ರಿಯಾಗಿ ರೈತರಿಗೆ ಬಡ್ಡಿರಹಿತ ಸಾಲ ನೀಡಿ, ಕೃಷಿ ಬಜೆಟ್ ಮಂಡನೆ ಮಾಡಿದ ರಾಜ್ಯದ ಮೊದಲ ಮುಖ್ಯ ಮಂತ್ರಿ ಬಿಎಸ್ವೈ ಶಿಕ್ಷಣದಲ್ಲಿ ಮಕ್ಕಳಿಗೆ ಆಸಕ್ತಿ



ಮೂಡಿಸುವ ನಿಟ್ಟಿನಲ್ಲಿ ಉಚಿತ ಬೈಸಿಕಲ್ ಸೌಲಭ್ಯ, ಹೆಣ್ಣುಮಕ್ಕಳಿಗೆ ಭಾಗ್ಯಲಕ್ಷ್ಮಿ ಬಾಂಡ್ ಯೋಜನೆ ಸೇರಿದಂತೆ ಹಲವಾರು ಜನಪ್ರಿಯ ಯೋಜನೆ ತಂದ ಕರ್ನಾಟಕದ ಮುಖ್ಯಮಂತ್ರಿ ಅವರಾಗಿದ್ದರು. ಅಂತಹ ವ್ಯಕ್ತಿತ್ವ ಹೊಂದಿರುವ ಬಿಎಸ್ವೈ ರವರ ಅಭಿಮಾನೋತ್ಸವಕ್ಕೆ ಎಲ್ಲರೂ ಒಕ್ಕೊರಲಿನಿಂದ ಭಾಗವಹಿಸಬೇಕು ಎಂದು ಹೇಳಿದರು.

ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಶಿವರಾಜ್ ಗಂದಗೆ ಮಾತನಾಡಿ, ಭಾಲ್ಕಿಯಲ್ಲಿ ಜನತೆ ಪರಿವರ್ತನೆ ಬಯಸುತ್ತಿದ್ದಾರೆ ಮುಂಬರುವ ದಿನಗಳಲ್ಲಿ ಭಾಲ್ಕಿಯಲ್ಲಿ ಮತ್ತೆ ಬಿಜೆಪಿ ಎಂ.ಎಲ್. ಎ ಆಗುವುದು ಎಂದು ವಿಶ್ವಾಸ ವ್ಯಕ್ತಪಡಿಸಿದರು. ಬಿಜೆಪಿ ಮುಖಂಡ ರೇವಣಸಿದ್ದ ಜಾಡರ ಪ್ರಸ್ತಾವಿಕ ಮಾತನಾಡಿದರು.

ಈ ಸಂಧರ್ಭದಲ್ಲಿ ಗೋವಿಂದರಾವ್ ಬಿರಾದಾರ, ವಿಜಯಕುಮಾರ್ ಪಾಟೀಲ್, ಸುಭಾಷ ಬಿರಾದಾರ ಬೀರಿ(ಬಿ), ಸಂತೋಷ್ ಪಾಟೀಲ್, ಮನ್ಮಥ ಸ್ವಾಮಿ ಉಪಸ್ಥಿತರಿದ್ದರು.

## ಕರ್ತವ್ಯದ ಕಾಲು ದಾರಿ ಕೀರ್ತಿಯ ಹೆದ್ದಾರಿ

• ಮಲ್ಲಮ್ಮ ನುಡಿ ವಾರ್ತೆ ಶಿವಮೊಗ್ಗ

ಮನುಷ್ಯನ ಜೀವನ ಪುಸ್ತಕದಲ್ಲಿ ಮೊದಲ ಪುಟ ಜನನವಾದರೆ ಕೊನೆಯ ಪುಟ ಮರಣವಾಗಿರುತ್ತದೆ. ಈ ಮಧ್ಯದ ಪುಟಗಳನ್ನು ಸಾರ್ಥಕ ಜೀವನದಿಂದ ಪೂರ್ಣಗೊಳಿಸಿದಾಗ ಆದರ್ಶದ ಬದುಕು ನಡೆಸಲು ಸಾಧ್ಯವಾಗುತ್ತದೆ. ಕರ್ತವ್ಯದ ಕಾಲು ದಾರಿ ಕೀರ್ತಿಯ ಹೆದ್ದಾರಿಯಾಗಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಬುಧವಾರ ವೀರಶೈವ ಕಲ್ಯಾಣ ಮಂಟಪದಲ್ಲಿ ಜರುಗಿದ ಲಿಂ.ವೇ. ಟಿ.ವಿ.ಈಶ್ವರಯ್ಯನವರ ಗುರುಲಿಂಗ ಜಂಗಮಾರಾಧನೆ ಹಾಗೂ ಶ್ರದ್ಧಾಂಜಲಿ ಸಭೆಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಟಿ.ವಿ.ಈಶ್ವರಯ್ಯನವರು ತಮ್ಮ ಜೀವಿತಾವಧಿಯಲ್ಲಿ ಹಲವಾರು ಸಂಘ ಸಂಸ್ಥೆಗಳನ್ನು ಹುಟ್ಟು ಹಾಕಿ ಸಕ್ರಿಯವಾಗಿ ಸಮಾಜ ಮುಖಿಯಾಗಿ ಧರ್ಮ ಮುಖಿಯಾಗಿ ಕಾರ್ಯ ನಿರ್ವಹಿಸಿದರು. ಪಂಚ ಪೀಠಗಳ ಅಭಿಮಾನಿಯಾಗಿ, ಸಮಾಜದಲ್ಲಿ ಹಲವಾರು ರಚನಾತ್ಮಕ ಸಾಮಾಜಿಕ ಧಾರ್ಮಿಕ ಕಾರ್ಯಗಳ ರೂವಾರಿಯಗಿದ್ದರು. ಶ್ರೀ ಜಗದ್ಗುರು ರಂಭಾಪುರಿ ಪೀಠದೊಡನೆ ಅವಿನಾಭಾವ ಸಂಬಂಧ ಹೊಂದಿದವರಾಗಿದ್ದರು. ಈಶ್ವರಯ್ಯ ಸಹೋದರರು ಶಿವಮೊಗ್ಗೆಯ ಅತ್ಯಮೂಲ್ಯ ನಿವೇಶನವನ್ನು ಶ್ರೀ ರಂಭಾಪುರಿ ಪೀಠಕ್ಕೆ ನೀಡಿದ್ದುದನ್ನು ಮರೆಯುವಂತಿಲ್ಲ. ಈ ನಿವೇಶನದಲ್ಲಿ ಈಗಾಗಲೇ ಶ್ರೀ ರಂಭಾಪುರೀಶ



ನಿವಾಸ ನಿರ್ಮಾಣಗೊಂಡಿದ್ದು ಈಶ್ವರಯ್ಯನವರ ಆಶಯದಂತೆ ಶೈಕ್ಷಣಿಕ ಸಂಸ್ಥೆಯೊಂದನ್ನು ಹುಟ್ಟು ಹಾಕುವ ನಿಟ್ಟಿನಲ್ಲಿ ಈಗಾಗಲೇ ಕೆಲಸ ನಡೆದಿದೆ. ಅವರ ಆದರ್ಶದ ದಾರಿ ಇಂದಿನ ಪೀಳಿಗೆಗೆ ಮಾರ್ಗದರ್ಶಿಯಾಗಿದೆ. ಅವರ ಮಾಡಿದ ಸತ್ಕಾರ್ಯಗಳು ಸಮಾಜಕ್ಕೆ ದಿಕ್ಸೂಚಿಯಾಗಿವೆ. ಶಿವಮೊಗ್ಗ ನಗರಕ್ಕೆ ಅವರ ಸೇವೆಯನ್ನು ಪರಿಗಣಿಸಿ ನಗರಸಭೆಯವರು ಒಂದು ಬಡಾವಣೆ ಅಥವಾ ರಸ್ತೆಗೆ ಟಿ.ವಿ.ಈಶ್ವರಯ್ಯನವರ ಹೆಸರನ್ನು ನಾಮಕರಣ ಮಾಡಬೇಕು ಎಂದರು. ಇದೇ ಸಂದರ್ಭದಲ್ಲಿ ಎನ್.ಜೆ.ವೀರಣ್ಣ ಇವರ ಅಗಲಿಕೆಗೆ ಸಂತಾಪ ವ್ಯಕ್ತಪಡಿಸಿದರು. ನೇತೃತ್ವ ವಹಿಸಿದ ಬಿಳಿಕಿ ಹಿರೇಮಠದ ರಾಚೊಟೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಟಿ.ವಿ. ಈಶ್ವರಯ್ಯನವರಲ್ಲಿದ್ದ ಜೀವನದ ಉತ್ಸಾಹ ಮಾದರಿಯಾಗಿತ್ತು. ಶಿಸ್ತಿನ ಸಿಪಾಯಿಯಾಗಿ ಪೂಜಾ ನಿಷ್ಠರಾಗಿದ್ದ ಅವರು ಕೊಡುಗೈ ದಾನಗಳೆಂದು ಕರೆಸಿಕೊಂಡಿದ್ದರು. ಶ್ರೀ ರಂಭಾಪುರಿ ಪೀಠಕ್ಕೆ ಸಿರಿಗೆರೆ ಮಠಕ್ಕೆ ಅವರು ನೀಡಿದ ಭೂದಾನ ಮರೆಯುವಂತಿಲ್ಲ ಎಂದರು.

**ಹೈಕಮಾಂಡ್ ಹೇಳಿದಂತೆ ಕೇಳುವೆ, ಯಾವಾಗ ಕರೆಯುತ್ತಾರೆಯೋ ಗೊತ್ತಿಲ್ಲ: ಸಿದ್ದರಾಮಯ್ಯ, ಮುಖ್ಯಮಂತ್ರಿ**

## ಅರ್ಜಿ ಆಹ್ವಾನ

**ಬೀದರ:** ಬೀದರ ಮಹಾನಗರ ಪಾಲಿಕೆ ಕಛೇರಿಯಲ್ಲಿ ಸರ್ವಿಸ ಕಾಂಟ್ರಾಕ್ಟ್ ಆಧಾರದ ಮೇಲೆ ತಾತ್ಕಾಲಿಕವಾಗಿ ವಾಚಮೇನ್ (ಸೆಕ್ಯೂರಿಟಿ) –06 ಸೇವೆಗೆ 25 ರಿಂದ 50 ವರ್ಷ ವಯೋಮಿತಿಯೊಳಗಿನ ಆಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಬೀದರ ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಅರ್ಹರು ಎಸ್.ಎಸ್.ಎಲ್.ಸಿ./ಪಿಯುಸಿ ಅಥವಾ ಹೆಚ್ಚಿನ ವಿದ್ಯಾಭ್ಯಾಸ ಹೊಂದಿದ ಪ್ರಮಾಣ ಪತ್ರ, ಅನುಭವ ಪ್ರಮಾಣ ಪತ್ರ, ಪೊಲೀಸ್ ಪರಿಶೀಲನೆ ಪ್ರಮಾಣ ಪತ್ರದೊಂದಿಗೆ ಅರ್ಜಿ ಭರ್ತಿ ಮಾಡಿ ದಿನಾಂಕ: 21–05–2026 ರೊಳಗಾಗಿ ಬೀದರ ಮಹಾನಗರ ಪಾಲಿಕೆ ಕಛೇರಿಗೆ ಸಲ್ಲಿಸಬೇಕೆಂದು ಅವರು ತಿಳಿಸಿದ್ದಾರೆ.

## ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

**ಬೀದರ:** ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1ರ ಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳಿಂದ, 2025–26ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ "ಶುಲ್ಕಮರುಪಾವತಿ"ಕಾರ್ಯಕ್ರಮದ ಸೌಲಭ್ಯಕ್ಕಾಗಿ ಅನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು 16–05–2026 ರವರೆಗೆ ವಿಸ್ತರಿಸಲಾಗಿದೆ ಎಂದು ಬೀದರ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅರ್ಹರು ಅನ್‌ಲೈನ್ https://ssp.postmatric.karnataka.gov.in/ ಮೂಲಕ ದಿನಾಂಕ: 16–05–2026 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ವಿದ್ಯಾರ್ಥಿ ವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳಿಗಾಗಿ https://bcwd.karnataka.gov.in/ಭೇಟಿ ನೀಡುವುದು, ಇಲಾಖಾ ಸಹಾಯವಾಣಿ 8050770005 ಅಥವಾ ಇಮೇಲ್ bcwdhelpline@gmail.com ವಿಳಾಸಕ್ಕೆ, ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದ ಸಹಾಯವಾಣಿ 1902 ಅಥವಾ ಇಮೇಲೆ post-metrichelp@karnataka.gov.in ಗೆ ಭೇಟಿ ನೀಡಬಹುದಾಗಿದೆ.

ಕಾರಣ ಅರ್ಹ ವಿದ್ಯಾರ್ಥಿಗಳು ಈ ಸೌಲಭ್ಯಗಳನ್ನು ಸದುಪಯೋಗ ಪಡಿಸಿಕೊಳ್ಳಬೇಕೆಂದು ಅವರು ತಿಳಿಸಿದ್ದಾರೆ.

## ತಾರಾನಾಥ ಆಸ್ಪತ್ರೆಯಿಂದ ಮೂವರು ಸಿಬ್ಬಂದಿ ವರ್ಗಾವಣೆ



**ಬಳ್ಳಾರಿ:** ನಗರದ ಸರ್ಕಾರಿ ತಾರಾನಾಥ ಆಯುರ್ವೇದ ಆಸ್ಪತ್ರೆಯ ನೌಕರರುಗಳಾದ ಶುಶ್ರೂಷಧಿಕಾರಿ ಗುರುಸ್ವಾಮಿ, ಕುಕ್ ಪ್ರಮೀಳಾ, ಮಸಾಜಿಷ್ಟ್ ಚಂದ್ರಪ್ಪ ವರ್ಗಾವಣೆಯಾಗಿದ್ದಾರೆ.

ಆಸ್ಪತ್ರೆಯ ಸಿಬ್ಬಂದಿ ಅವರನ್ನು ನಿನ್ನೆ ಬೀಳ್ಕೊಟ್ಟರು. ಈ ವೇಳೆ ತಾರಾನಾಥ ಆಸ್ಪತ್ರೆಯ ಸ್ಥಾಯಿ ವೈದ್ಯಾಧಿಕಾರಿ ಡಾ.ಕೊಟ್ರೇಶ ಮಾತನಾಡಿ ಈ ಮೂರು ಜನ ನೌಕರರು ವರ್ಗಾವಣೆಯಾಗಿರುವುದರಿಂದ ಸಿಬ್ಬಂದಿಗಳ ಕೊರತೆಯನ್ನು ಆಸ್ಪತ್ರೆ ಎದುರಿಸುತ್ತಿರುವಾಗ ಇವರ ವರ್ಗಾವಣೆ ಮತ್ತಷ್ಟು ಸಂಕಷ್ಟಕ್ಕೆ ದೂಡಲಿದೆಂದರು.

ಆಸ್ಪತ್ರೆವೈದ್ಯಾಧಿಕಾರಿಗಳಾದ ಡಾ. ತಮಿಮ್ ಅನ್ಸಾರಿ, ಡಾ. ರತ್ನಶ್ರೀ, ಡಾ.ಪ್ರಭಾವತಿ, ಆಸ್ಪತ್ರೆಯ ಶುಶ್ರೂಷಾ ಧೀಕ್ಷಕಿ ನಿರ್ಮಲ, ಮೂಗಪ್ಪ, ಮಲ್ಲಿಕಾರ್ಜುನ, ಟಿ ರಾಧ,ದೇವರಾಜ, ಬಸವರಾಜ, ವಾಜಿದ್ ಅಲಿ ಫಾರ್ಮಸಿ ಅಧಿಕಾರಿ ರಂಜಿತ್, ಮುಬಿನಾವಾಜ್ ಕಾರ್ಯಕ್ರಮ ನಿರೂಪಿಸಿದರು ಫಾರ್ಮಸಿ ಅಧಿಕಾರಿ ಸೀಮಾ ವಂದಿಸಿದರು.

## ಅನಾಮಧೇಯ ಶವ ಪತ್ತೆ: ವಾರಸುದಾರರ ಗುರುತಿಗೆ ಮನವಿ

**ವಿಜಯನಗರ(ಹೊಸಪೇಟೆ):** ತಾಲೂಕಿನ ಬಿಡಿಸಿಸಿ ಬ್ಯಾಂಕ್ ಕಾಂಪೌಂಡ್ ಪಕ್ಕದಲ್ಲಿ ಸುಮಾರು 35 ರಿಂದ 40 ವರ್ಷದ ಅನಾಮಧೇಯ ವ್ಯಕ್ತಿಯ ಶವ ಪತ್ತೆಯಾಗಿದ್ದು, ಈ ಘಟನೆ ಕುರಿತು ಹೊಸಪೇಟೆ ಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮೃತ ವ್ಯಕ್ತಿಯು ಸುಮಾರು 5.5 ಅಡಿ ಎತ್ತರ, ಗೋಧಿ ಮೈ ಬಣ್ಣ , ಕೋಲು ಮುಖ, ಎರಡು ಕಣ್ಣು ಮುಚ್ಚಿದ್ದು, ಕಪ್ಪು ಬಿಳಿ ಮಿಶ್ರಿತ ಕುರುಚಲು ಗಡ್ಡ ಮೀಸೆ ಮತ್ತು ಗುಂಗುರು ತಲೆಕೂದಲಿನಿಂದ ಕೂಡಿರುತ್ತಾನೆ. ತನ್ನ ಎಡಗೈಯಲ್ಲಿ ಟವಲ್ ಇದ್ದು ಮೈ ಮೇಲೆ ನೀಲಿ, ಕಪ್ಪು, ಬಿಳಿ, ಪಿಂಕ್ ಬಣ್ಣದ ಮಿಶ್ರಿತ ಅಡ್ಡ ಗೆರೆಯುಳ್ಳ ಕಲರ್ ಸಹಿತ ಆಪ್ ಟೀ ಶರ್ಟ್, ಬೂದು ಬಣ್ಣದ ಜೀನ್ಸ್ ಪ್ಯಾಂಟ್ ಧರಿಸಿದ್ದಾನೆ.

ಈ ಬಗ್ಗೆ ಮಾಹಿತಿ ತಿಳಿದುಬಂದಲ್ಲಿ ಪಿ.ಐ ಪಟ್ಟಣ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ: 08394224033, 9480805745, ಡಿ.ಎಸ್.ಪಿ. ಹೊಸಪೇಟೆ ದೂ.ಸಂ: 08394224204,9480805720, ಎಸ್.ಪಿ. ವಿಜಯನಗರ ದೂ.ಸಂ: 9480805700 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪುರಸಭೆ ಕಾರ್ಯಾಲಯ ಚಿಟಗುಪ್ಪ ಸಾರ್ವಜನಿಕ ಪ್ರಕಟಣೆ

**ಚಿಟಗುಪ್ಪ:** ಪಟ್ಟಣದ ಆಸ್ತಿ ಸಂಖ್ಯೆ 8–124ರ ಆಸ್ತಿಯ ಅಕ್ಕ–ಪಕ್ಕದ ಮಾಲೀಕರಿಗೆ ತಿಳಿಯಪಡಿಸುವುದೇನೆಂದರೆ, ವೀರಣ್ಣಾ ತಂದೆ ಸಂಗಪ್ಪಾ ಕಾಳಗಿ ಚಿಟಗುಪ್ಪ ಇವರ ಹೆಸರಿನಲ್ಲಿರುವ **ಆಸ್ತಿ ಸಂಖ್ಯೆ: 8–124**ರ ಆಸ್ತಿ ವಿಸ್ತೀರ್ಣ ಪುರಸಭೆ ದಾಖಲಾತಿ ಪ್ರಕಾರ 3924. ಚ.ಅಡಿ ನೋಂದಣೆ ಇದ್ದು ಆದರೆ ವಾಸ್ತವಿಕವಾಗಿ ಆಸ್ತಿಯ ವಿಸ್ತೀರ್ಣ **19683.ಚ.ಅಡಿ** ಇದ್ದು ನೋಂದಣೆ ಮಾಡಿಕೊಡಬೇಕೆಂದು ಶಪಥ ಪತ್ರದೊಂದಿಗೆ ನಕಾಶೆ ಸಲ್ಲಿಸಿರುತ್ತಾರೆ. ಸದರಿ ವಿಷಯದ ಕುರಿತು ಈಗಾಗಲೇ ಪುರಸಭೆ ಸಾಮಾನ್ಯ ಸಭೆಯಲ್ಲಿ ದಿನಾಂಕ: 25–03–2025 ರಂದು ಠರಾವು ಸಂಖ್ಯೆ: 269ರ ಅನುಸಾರ ಬಿಟ್ಟಿರುವ ವಿಸ್ತೀರ್ಣವನ್ನು ನೋಂದಣೆ ಮಾಡಲು ಸರ್ವಾನುಮತದಿಂದ ಠರಾವು ಪಾಸ್ ಮಾಡಲಾಗಿರುತ್ತದೆ. ಆದ ಕಾರಣ ಆಸ್ತಿ ಸಂಖ್ಯೆ: 8–124ರ ಆಸ್ತಿಯಲ್ಲಿ ಬಿಟ್ಟಿರುವ ವಿಸ್ತೀರ್ಣ 19683. ಚ.ಅಡಿ ನೋಂದಣೆ ಮಾಡುವ ಸಂಬಂಧ ಅಕ್ಕ ಪಕ್ಕದ ಆಸ್ತಿಯ ಮಾಲೀಕರು ಈ ಪ್ರಕಟಣೆ ಹೊರಡಿಸಿದ (07) ದಿವಸದೊಳಗಾಗಿ ಸದರಿ ವಿಷಯದ ಬಗ್ಗೆ ಏನಾದರೂ ಆಕ್ಷೇಪಣೆ / ಸಲಹೆ ಇದ್ದಲ್ಲಿ ಪುರಸಭೆ ಕಾರ್ಯಾಲಯಕ್ಕೆ ಲಿಖಿತ ರೂಪದಲ್ಲಿ ಕಛೇರಿಯ ಸಮಯದಲ್ಲಿ ಸಲ್ಲಿಸಲು ಈ ಪ್ರಕಟಣೆ ಮೂಲಕ ತಿಳಿಯಪಡಿಸಿದೆ. ನಂತರ ಬಂದ ಸಲಹೆ, ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಮುಖ್ಯಾಧಿಕಾರಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಅಭಿನಂದನೆ





• ಮಲ್ಲಮ್ಮ ನುಡಿ ವಾರ್ತೆ ಬೀದರ

ತಾಲೂಕಿನ ರಂಜೋಳ ಖೇಣಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ 2025–26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆ–1ರಲ್ಲಿ ಉತ್ತಮ ಅಂಕಗಳೊಂದಿಗೆ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಅಭಿನಂದನಾ ಸಮಾರಂಭ ಹಾಗೂ ಶಾಲಾ ಉದ್ಯಾನವನದ ಉದ್ಘಾಟನಾ ಕಾರ್ಯಕ್ರಮವನ್ನು ಭವ್ಯವಾಗಿ ಆಯೋಜಿಸಲಾಯಿತು.

ಕಾರ್ಯಕ್ರಮಕ್ಕೆ ಬೀದರ ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕ ಶೈಲೇಂದ್ರ ಬೆಲ್ದಾಳೆ ಮುಖ್ಯ ಅತಿಥಿಗಳಾಗಿ ಆಗಮಿಸಿ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಶಾಲೆಯೊಳಗೆ ಪ್ರವೇಶಿಸಿದಾಗ ಉದ್ಯಾನವನದಂತೆ ಭಾಸವಾಗುತ್ತದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಹಳೆಯ ಗೋಡೆಗಳಿಗೆ ಹೊಸ ಜೀವ ತುಂಬಿದ ಚಿತ್ರಕಲಾ ಶಿಕ್ಷಕ ವಿಷ್ಣುಕಾಂತ ಠಾಕುರ್ ಅವರ ಕಾರ್ಯವನ್ನು ಶ್ಲಾಘಿಸಿದರು. ಶಾಲೆಯ ಸುಂದರ ವಾತಾವರಣ ನಿರ್ಮಾಣಕ್ಕೆ ಶ್ರಮಿಸಿದ ಮುಖ್ಯಗುರು ಮಂಜುನಾಥ ಎನ್.ಆರ್. ಅವರ ಸೇವೆಯನ್ನು ಪ್ರಶಂಸಿಸಿದರು.

ವಿದ್ಯಾರ್ಥಿಗಳು ಕಠಿಣ ಪರಿಶ್ರಮ, ಶಿಸ್ತು ಹಾಗೂ ಸ್ಪಷ್ಟ ಗುರಿಯೊಂದಿಗೆ ಮುಂದುವರಿದರೆ ಉನ್ನತ ಸಾಧನೆ ಸಾಧ್ಯವೆಂದು ತಿಳಿಸಿದ ಅವರು, ಭವಿಷ್ಯದ ಗುರಿಗಳನ್ನು ನಿಗದಿಪಡಿಸಿಕೊಂಡು ನಿರಂತರವಾಗಿ ಶ್ರಮಿಸಬೇಕೆಂದು ಸಲಹೆ ನೀಡಿದರು. ಶಾಲೆಗೆ ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ವಿದ್ಯಾರ್ಥಿಗಳ ಸಾಧನೆಗೆ ಶಿಕ್ಷಕರ ಪರಿಶ್ರಮ ಹಾಗೂ ಪಾಲಕರ ಬೆಂಬಲ ಪ್ರಮುಖ ಕಾರಣವೆಂದು ತಿಳಿಸಲಾಯಿತು.

ಇದೇ ವೇಳೆ ಶಾಲೆಯ ಸುಂದರೀಕರಣ ಮತ್ತು ಉದ್ಯಾನವನ ನಿರ್ಮಾಣಕ್ಕೆ ಸಹಕರಿಸಿದ ದಾನಿಗಳು, ಹಳೆಯ ವಿದ್ಯಾರ್ಥಿಗಳು ಹಾಗೂ ಗ್ರಾಮಸ್ಥರನ್ನು ಗೌರವಿಸಲಾಯಿತು. ಅವರ ಸಹಕಾರದಿಂದ ಶಾಲೆಯ ವಾತಾವರಣ ಇನ್ನಷ್ಟು ಆಕರ್ಷಕವಾಗಿದ್ದು, ವಿದ್ಯಾರ್ಥಿಗಳಿಗೆ ಉತ್ತಮ ಅಧ್ಯಯನ ವಾತಾವರಣ ಸೃಷ್ಟಿಯಾಗಿದೆ ಎಂದು ಅಭಿಪ್ರಾಯ ವ್ಯಕ್ತವಾಯಿತು.

ಮುಖ್ಯಗುರು ಮಂಜುನಾಥ ಎನ್.ಆರ್. ಮಾತನಾಡಿ, ಶಾಲೆಯ ಸಾಧನೆಗೆ ಶಿಕ್ಷಕರ ಸಮರ್ಪಿತ ಸೇವೆ ಹಾಗೂ ಪಾಲಕರ ಸಹಕಾರ ಕಾರಣವಾಗಿದ್ದು, ಮುಂದಿನ ವರ್ಷಗಳಲ್ಲಿ ಇನ್ನಷ್ಟು ಉತ್ತಮ ಫಲಿತಾಂಶ ತರುವ ದಿಟ್ಟ ನಿಲುವು ನಮ್ಮದು ಎಂದು ತಿಳಿಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಮದರ್ ಖಾನ್ ಅವರು ಮಾತನಾಡಿ, ಶಿಕ್ಷಕರ ಕೊರತೆಯ ನಡುವೆಯೂ ಶಾಲೆ ಅತ್ಯುತ್ತಮ ಫಲಿತಾಂಶ ಸಾಧಿಸಿರುವುದನ್ನು ಶ್ಲಾಘಿಸಿ, ಮುಂದೆಯೂ ಇದೇ ರೀತಿಯ ಶ್ರಮ ಮುಂದುವರಿಸಲು ಸೂಚಿಸಿದರು.

ಕಾರ್ಯಕ್ರಮದಲ್ಲಿ ಪಿಎಂ ಪೋಷಣ್ ಅಭಿಯಾನದ ಸಹಾಯಕ ನಿರ್ದೇಶಕ ಝಾಕೀರ್ ಹುಸೇನ್, ಡಯಟ್ ಉಪನ್ಯಾಸಕರಾದ ಸಂತೋಷ್ ಪುಜಾರಿ, ಗೀತಾ ಗಡ್ಡಿ, ಎಸ್‌ಡಿಎಂಸಿ ಅಧ್ಯಕ್ಷರು ಮತ್ತು ಸದಸ್ಯರು, ಶಿಕ್ಷಕರು, ಪಾಲಕರು, ಹಳೆಯ ವಿದ್ಯಾರ್ಥಿಗಳು ಹಾಗೂ ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

ಸತ್ಯನಾರಾಯಣ ಹಾಗೂ ರೇಖಾ ಕಾರ್ಯಕ್ರಮ ನಿರ್ವಹಣೆ ಮಾಡಿದರು. ವಿಷ್ಣುಕಾಂತ ಠಾಕುರ್ ಸ್ವಾಗತಿಸಿದರು. ಸಚಿನ್ ವಂದನಾರ್ಪಣೆ ಸಲ್ಲಿಸಿದರು.

## ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಜಯಂತ್ಯುತ್ಸವ

• ಮಲ್ಲಮ್ಮ ನುಡಿ ವಾರ್ತೆ ಬೀದರ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮಹಾನಗರ ಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೀದರ ಇವರ ಸಂಯುಕ್ತಾಶ್ರಯದಲ್ಲಿ ದಿನಾಂಕ: 10–05–2026 ರಂದು ಮಧ್ಯಾಹ್ನ 12 ಗಂಟೆಗೆ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಸಮುದಾಯ ಭವನ ಅಮಲಾಪೂರ ರಸ್ತೆ, ಬೀದರದಲ್ಲಿ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಜಯಂತ್ಯುತ್ಸವ ಕಾರ್ಯಕ್ರಮ ಆಯೋಜಿಸಲಾಗಿದೆ.

ಕಾರ್ಯಕ್ರಮ ಉದ್ಘಾಟನೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಮಾಡಲಿದ್ದಾರೆ.

ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಂ ಖಾನ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಬೀದರ ಲೋಕಸಭಾ ಸದಸ್ಯರಾದ ಸಾಗರ ಈಶ್ವರ ಖಂಡ್ರೆ, ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷ ಮಾಲಾ ನಾರಾಯಣರಾವ್, ಔರಾದ(ಬಿ) ಶಾಸಕ ಪ್ರಭು ಬಿ.ಚವ್ಹಾಣ್, ಬಸವಕಲ್ಯಾಣ ಶಾಸಕ ಶರಣು ಸಲಗರ, ಬೀದರ ದಕ್ಷಿಣ ಶಾಸಕ ಡಾ.ಶೈಲೇಂದ್ರ ಕೆ.ಬೆಲ್ದಾಳೆ, ಹುಮನಾಬಾದ ಶಾಸಕ ಡಾ.ಸಿದ್ದು ಪಾಟೀಲ, ವಿಧಾನ ಪರಿಷತ್ ಶಾಸಕರುಗಳಾದ ಡಾ.ಚಂದ್ರಶೇಖರ ಬಿ.ಪಾಟೀಲ್, ಶಶೀಲ ಜಿ.ನಮೋಶಿ, ಭೀಮರಾವ ಪಾಟೀಲ್, ಡಾ.ಎಂ.ಜಿ.ಮೂಳೆ ಹಾಗೂ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಕೃಷ್ಣಾ ಮೇಲ್ದಂಡೆ ಯೋಜನೆ (ಕಾಡಾ) ಭೀಮರಾಯನಗುಡಿ ಕಲಬುರಗಿಯ ಅಧ್ಯಕ್ಷ ಬಾಬು ಹೊನ್ನನಾಯ್ಕ, ಬೀದರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ ಅವರುಗಳು ಭಾಗವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಅತಿಥಿ ಉಪನ್ಯಾಸವನ್ನು ಬೀದರ ಅಕ್ಕಮಹಾದೇವಿ ಮಹಾವಿದ್ಯಾಲಯದ ರಸಾಯನಶಾಸ್ತ್ರ ವಿಭಾಗದ ಹಿರಿಯ ಉಪನ್ಯಾಸಕರಾದ ಶಿವಶರಣಪ್ಪಾ ಹುಗ್ಗಿ ಪಾಟೀಲ ಅವರು ನೀಡಲಿದ್ದಾರೆ.

## ಲಂಚ ಸ್ವೀಕಾರ ವೇಳೆ ವಿಎ ಲೋಕಾ ಬಲೆಗೆ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಜಿಲ್ಲೆಯ ಮರಕುಂದಾ ಗ್ರಾಮದ ಗ್ರಾಮ ಆಡಳಿತಾಧಿಕಾರಿ (ವಿಎ) ಮತ್ತು ಆತನ ಸಹಚರ ಮನೆಯ ಮ್ಯೂಟೇಷನ್ ಮಾಡಿಕೊಡಲು ಲಂಚ ಪಡೆಯುತ್ತಿದ್ದಾಗ ಲೋಕಾಯುಕ್ತ ಪೊಲೀಸರ ಬಲೆಗೆ ಬಿದ್ದಿರುವ ಘಟನೆ ನಡೆದಿದೆ.

ಮರಕುಂದಾ ಗ್ರಾಮದ ನಿವಾಸಿ ಮಹಾದೇವ್ ಶಾಂತಪ್ಪ ಎಂಬುವವರು ತಮ್ಮ ಮನೆಯ ಮ್ಯೂಟೇಷನ್ ಕಾರ್ಯಕ್ಕಾಗಿ ಗ್ರಾಮ ಆಡಳಿತಾಧಿಕಾರಿ ಶಿವಕುಮಾರ ಅವರನ್ನು ಸಂಪರ್ಕಿಸಿದ್ದರು. ಈ ಕೆಲಸ ಮಾಡಿಕೊಡಲು ವಿಎ ಶಿವಕುಮಾರ ಮತ್ತು ಆತನ ಸಹಚರ ಶರಣಯ್ಯಾ ಸ್ವಾಮಿ ಒಟ್ಟು 5 ಲಕ್ಷ ರೂ. ಲಂಚಕ್ಕೆ ಬೇಡಿಕೆಯಿಟ್ಟಿದ್ದರು ಎನ್ನ ಲಾಗಿದೆ. ಲಂಚದ ಬೇಡಿಕೆ ಯಿಂದ ಬೇಸತ್ತ ಮಹಾದೇವ್ ಅವರು ಬೀದರ್ ಲೋಕಾಯುಕ್ತ ಪೊಲೀಸರಿಗೆ ದೂರು ನೀಡಿದ್ದರು. ದೂರಿನ ಅನ್ವಯ ಇಂದು ಕಾರ್ಯಾ ಚರಣೆ ನಡೆಸಿದ ಲೋಕಾಯುಕ್ತ ತಂಡ, ಮರಕುಂದಾ ಗ್ರಾಮದ ಹೊರವಲಯದ ಧಾಬಾ ಒಂದರಲ್ಲಿ ಮಹಾದೇವ್ ಅವರಿಂದ ಮುಂಗಡವಾಗಿ



2.5 ಲಕ್ಷ ರೂಪಾಯಿ ಲಂಚ ಪಡೆಯುತ್ತಿದ್ದ ವೇಳೆ ದಾಳಿ ನಡೆಸಿ ಆರೋಪಿಗಳನ್ನು ರೆಡ್ ಹ್ಯಾಂಡ್ ಆಗಿ ಹಿಡಿದಿದ್ದಾರೆ. ಬೀದರ್ ಲೋಕಾಯುಕ್ತ ಡಿಎಸ್ಪಿ ಹಣಮಂತರಾಯ್ ಅವರ ನೇತೃತ್ವದಲ್ಲಿ ನಡೆದ ಈ ಕಾರ್ಯಾಚರಣೆಯಲ್ಲಿ ಪಿಐ ಅರ್ಜುನಪ್ಪ ಹಾಗೂ ಸಿಬ್ಬಂದಿಗಳ ತಂಡ ಪಾಲ್ಗೊಂಡಿತ್ತು. ದಾಳಿಯ ವೇಳೆ ಲಂಚದ ಹಣದೊಂದಿಗೆ ಸಿಕ್ಕಿಬಿದ್ದ ವಿಎ ಶಿವಕುಮಾರ ಮತ್ತು ಶರಣಯ್ಯಾ ಸ್ವಾಮಿ ಅವರನ್ನು ಪೊಲೀಸರು ಬಂಧಿಸಿ, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ. ಸಾರ್ವಜನಿಕ ಕೆಲಸಗಳಿಗಾಗಿ ಲಂಚಕ್ಕೆ ಬೇಡಿಕೆಯಿಡುವ ಭ್ರಷ್ಟ ಅಧಿಕಾರಿಗಳ ವಿರುದ್ಧ ಲೋಕಾಯುಕ್ತ ಹೂಡಿರುವ ಈ ದಾಳಿ ಜಿಲ್ಲೆಯಲ್ಲಿ ಸಂಚಲನ ಮೂಡಿಸಿದೆ.

## ಕನ್ನಡ ಭಾಷೆ ನಾಶವಾದರೆ ಸಂಸ್ಕೃತಿಯು ನಾಶ: ಹೊನ್ನಮ್ಮ ನಾಯಕ

• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ಭಾಷೆ, ಸಾಹಿತ್ಯ, ಸಂಸ್ಕೃತಿ, ಬದುಕು ಒಂದ–ಕ್ಕೊಂದು ಪೂರಕವಾಗಿದ್ದು, ಅದರಲ್ಲಿ ಭಾಷೆ ಉಳಿದವುಗಳನ್ನೆಲ್ಲವನ್ನೂ ಸುಸೂತ್ರವಾಗಿ ನಡೆಸಿಕೊಂಡು ಹೋಗಲು ಅವಶ್ಯಕವಾಗಿದೆ. ಭಾಷೆಯು ನಾಶವಾದರೆ ಸಂಸ್ಕೃತಿಯೂ ನಾಶವಾದಂತೆ. ಆದ್ದರಿಂದ ಕನ್ನಡ ಭಾಷೆಯನ್ನು ಉಳಿಸಿ, ಬೆಳೆಸಿಕೊಂಡು ಹೋಗುವ ಜವಾಬ್ದಾರಿ ನಮ್ಮೆಲ್ಲರದ್ದಾಗಿದೆ ಎಂದು ಹಿರಿಯ ಸಾಹಿತಿ ಹೊನ್ನಮ್ಮ ನಾಯಕ ಹೇಳಿದರು.



ಪಟ್ಟಣದ ಕೆ.ಎಲ್.ಇ. ಸಂಸ್ಥೆಯ ಶೇಷಗಿರಿ ಪಿಕಳೆ ಶಿಕ್ಷಣ ಮಹಾವಿದ್ಯಾಲಯದಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ಆಯೋಜಿಸಿದ್ದ ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನಾಚರಣೆ ಉದ್ಘಾಟಿಸಿ ಅವರು ಮಾತನಾಡಿದರು.

ನಾಲ್ವಡಿ ಕೃಷ್ಣರಾಜ ಒಡೆಯರ್, ಸರ್ ಎಂ. ವಿಶ್ವೇಶ್ವರಯ್ಯ ಹಾಗೂ ಸರ್ ಮಿರ್ಜಾ ಇಸ್ಮಾಯಿಲ್ ಅವರ ಆಶಯ ಈಡೇರುವಂತೆ, ವಿಧಾಯಕ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಕನ್ನಡ ನಾಡು–ನುಡಿಯನ್ನು ಬೆಳೆಸಬೇಕು. ಕನ್ನಡ ನೆಲದಲ್ಲಿಯೇ ಅನ್ಯ ಭಾಷಿಕರ ಸಂಖ್ಯೆ ಹೆಚ್ಚಾಗುತ್ತಿರುವುದು ಕಳವಳಕಾರಿ. ಹಾಗೇ ವಿದ್ಯಾರ್ಥಿಗಳು ಕೂಡ ಸಾಹಿತ್ಯಾಸಕ್ತಿ ಬೆಳೆಸಿಕೊಳ್ಳಬೇಕು ಎಂದು ಹೊನ್ನಮ್ಮ ನಾಯಕ ವಿವರಿಸಿದರು.

ಪ್ರಾಚಾರ್ಯ ಡಾ. ವಿನಾಯಕ ಜಿ. ಹೆಗಡೆ 'ಕರ್ನಾಟಕದಲ್ಲಿ ಕನ್ನಡವೇ ಸತ್ಯ, ನಿತ್ಯ' ಎಂಬ ವಿಷಯದ ಕುರಿತು ಮಾತನಾಡಿ, ಆಧುನಿಕ ಜಗತ್ತಿನಲ್ಲಿ ಕನ್ನಡ ಭಾಷೆಯು ಕೇವಲ ಭಾವನಾತ್ಮಕ ವಿಷಯವಾಗಿ ಉಳಿಯದೆ, ಆರ್ಥಿಕ ಮತ್ತು ತಾಂತ್ರಿಕ ಶಕ್ತಿಯಾಗಿ ಹೊರಹೊಮ್ಮುತ್ತಿದೆ. ನ್ಯಾಯಾಲಯದ ಕಲಾಪಗಳಿಂದ ಹಿಡಿದು, ಬ್ಯಾಂಕಿಂಗ್ ಸೇವೆಗಳವರೆಗೆ ಕನ್ನಡ ಲಭ್ಯವಾಗುತ್ತಿರುವುದು ಭಾಷೆಯ ಸಾರ್ವಭೌಮತ್ವಕ್ಕೆ ಸಾಕ್ಷಿಯಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ ಕಸಾಪ ತಾಲೂಕು ಘಟಕದ ಅಧ್ಯಕ್ಷ ಗೋಪಾಲಕೃಷ್ಣ ನಾಯಕ ಮಾತನಾಡಿ, ಕರ್ನಾಟಕದ ಕೆಲವು ನಗರಗಳಲ್ಲಿ ಕನ್ನಡವನ್ನು ಹುಡುಕುವ ಸ್ಥಿತಿ ಎದುರಾಗಿದೆ. ಕನ್ನಡ ನಮ್ಮ ಹೃದಯ ಭಾಷೆ. ಅದನ್ನು ಯಾವ ಕಾರಣಕ್ಕೂ ಮರೆಯಬಾರದು ಎಂದರು.

ಪತ್ರಕರ್ತ ರಾಘು ಕಾಕರಮಠ, ಉಪನ್ಯಾಸಕಿ ಡಾ. ಪುಷ್ಪಾ ನಾಯ್ಕ, ಕವಿ ಸಾತು ಗೌಡ ಬಡಗೇರಿ, ಜಿಲ್ಲಾ ಕಸಾಪ ಸದಸ್ಯರಾದ ಜಯಶೀಲ ಆಗೇರ ಮಾತನಾಡಿದರು. ಸುವಿಧಾ ಸಂಗಡಿಗರು ಪ್ರಾರ್ಥಿಸಿದರು. ಕಸಾಪ ಸಂಘಟನಾ ಕಾರ್ಯದರ್ಶಿ ಸುಜಿತ ನಾಯ್ಕ ಸ್ವಾಗತಿಸಿದರು. ಕಸಾಪ ಖಜಾಂಚಿ ಡಾ. ಎಸ್.ವಿ. ವಸ್ತ್ರದ ಪ್ರಾಸ್ತಾವಿಕವಾಗಿ ಮಾತನಾಡಿದರು. ಮಹಾಂತೇಶ ರೇವಡಿ ನಿರೂಪಿಸಿದರು. ಸದಸ್ಯ ಎಂ.ಬಿ. ಆಗೇರ ವಂದಿಸಿದರು.

# 1183 ಕುಟುಂಬಗಳಿಗೆ ಸುಸಜ್ಜಿತ ವಸತಿ ಭಾಗ್ಯ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ

ಗಣಿ ಬಾಧಿತ ಪ್ರದೇಶಗಳ ಸಮಗ್ರ ಅಭಿವೃದ್ಧಿ ಹಾಗೂ ಅಲ್ಲಿನ ನಿವಾಸಿಗಳ ಪುನಶ್ಚೇತನಕ್ಕಾಗಿ ಕರ್ನಾಟಕ ಗಣಿ ಪರಿಸರ ಪುನಶ್ಚೇತನ ನಿಗಮ (Kmerc) ವತಿಯಿಂದ ಸುಮಾರು 1,146 ಕೋಟಿ ರೂಪಾಯಿ ವೆಚ್ಚದಲ್ಲಿ ಅರ್ಹ ಫಲಾನುಭವಿಗಳಿಗೆ ಎಲ್ಲಾ ಮೂಲಭೂತ ಸೌಕರ್ಯಗಳನ್ನೊಳಗೊಂಡ ಸುಸಜ್ಜಿತ ವಸತಿ ಸೌಲಭ್ಯ ಕಲ್ಪಿಸಿಕೊಡಲಾಗುವುದು ಎಂದು ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ವಿ.ಸಿ ಹಾಲ್‌ನಲ್ಲಿ ಕರ್ನಾಟಕ ಗಣಿ ಪರಿಸರ ಪುನಶ್ಚೇತನ ನಿಗಮ (ಏಟಜಡಿಛಿ) ಯೋಜನೆಯಡಿ ಗಣಿಭಾದಿತ ಪ್ರದೇಶಗಳ ಅಭಿವೃದ್ಧಿ ಕುರಿತ ಆಯೋಜಿಸಲಾಗಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗಣಿ ಬಾಧಿತ ಪ್ರದೇಶಗಳ ಪುನಶ್ಚೇತನ ಯೋಜನೆಯು ಅತ್ಯಂತ ಮಹತ್ವದ್ದಾಗಿದ್ದು, ಇದರಲ್ಲಿ ಯಾವುದೇ ರೀತಿಯ ವಿಳಂಬ ಅಥವಾ ಸಮನ್ವಯತೆಯ ಕೊರತೆಯನ್ನು ಸಹಿಸುವುದಿಲ್ಲ ಎಂದು ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದ್ದಾರೆ. ವಸತಿ ಸಂಕೀರ್ಣಗಳ ನಿರ್ಮಾಣದ ವೇಳೆ ವಿವಿಧ ಇಲಾಖೆಗಳ ನಡುವೆ ಸಮನ್ವಯತೆ ಇರಬೇಕು. ರಸ್ತೆ ನಿರ್ಮಾಣವಾದ ನಂತರ ಪೈಪ್‌ಲೈನ್‌ಗಾಗಿ ರಸ್ತೆ ಅಗೆಯುವಂತಹ ತಪ್ಪುಗಳು ಮರುಕಳಿಸಬಾರದು.

1146 ಕೋಟಿಗಳ ಬೃಹತ್ ಮೊತ್ತದ ಯೋಜನೆಯಾಗಿರುವುದರಿಂದ, ಪ್ರತಿ ಹಂತದಲ್ಲೂ ಕಾಮಗಾರಿಯ ಗುಣಮಟ್ಟ ಪರಿಶೀಲಿಸಬೇಕು. ಕೇವಲ




ಮನೆ ಕಟ್ಟುವುದಷ್ಟೇ ನಮ್ಮ ಗುರಿಯಲ್ಲ. ಮನೆಗಳು ವಾಸಕ್ಕೆ ಸಿದ್ಧವಾಗುವ ಮುನ್ನವೇ ಕುಡಿಯುವ ನೀರು, ಒಳಚರಂಡಿ ಮತ್ತು ವಿದ್ಯುತ್ ವ್ಯವಸ್ಥೆ ಸಂಪೂರ್ಣವಾಗಿ ಸಿದ್ಧವಿರಬೇಕು.

1183 ಫಲಾನುಭವಿಗಳ ಆಯ್ಕೆ ಪ್ರಕ್ರಿಯೆಯಲ್ಲಿ ಯಾವುದೇ ಲೋಪವಾಗಬಾರದು. ಅರ್ಹ ಗಣಿ ಬಾಧಿತ ಕುಟುಂಬಗಳಿಗೆ ಮಾತ್ರ ಈ ಸೌಲಭ್ಯ ತಲುಪುವಂತೆ ಹಾಗೂ ಯಾವೊಬ್ಬ ಅರ್ಹ ಫಲಾನುಭವಿಯೂ ಯೋಜನೆಯಿಂದ ಹೊರಗುಳಿಯಬಾರದು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು. ಡಿಪಿಆರ್ ಅನುಮೋದನೆಗೊಂಡಿರುವುದರಿಂದ, ನಿಗದಿತ ಕಾಲಮಿತಿಯೊಳಗೆ ಟೆಂಡರ್ ಪ್ರಕ್ರಿಯೆ ಮುಗಿಸಿ ಕಾಮಗಾರಿ ಆರಂಭಿಸಬೇಕು. ಗಣಿ ಪ್ರದೇಶಗಳಲ್ಲಿ ದಶಕಗಳಿಂದ ಕಷ್ಟ ಅನುಭವಿಸುತ್ತಿರುವ ಜನರಿಗೆ ಈ ಯೋಜನೆ ಮೂಲಕ ನ್ಯಾಯ ಒದಗಿಸುವುದು ನಮ್ಮ ಆದ್ಯತೆಯಾಗಿದೆ. ಇಂತಹ ಮಹತ್ವಾಕಾಂಕ್ಷಿ ಯೋಜನೆಯ ಮೂಲಕ ಗಣಿ ಬಾಧಿತ ಪ್ರದೇಶಗಳ ಚಿತ್ರಣವನ್ನೇ ಬದಲಿಸಲು ಆಡಳಿತ ಮಂಡಳಿ ಮುಂದಾಗಿರುವುದು ಶ್ಲಾಘನೀಯ. ಈ ನಿಟ್ಟಿನಲ್ಲಿ ನಿರ್ಲಕ್ಷ್ಯ ವಹಿಸುವ, ವಿಳಂಬ ಮಾಡುವ ಅಧಿಕಾರಿಗಳ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಲಾಗುವುದು ಎಂದರು.

ಜಿಲ್ಲಾ ನಗರಾಭಿವೃದ್ಧಿ ಯೋಜನಾ ನಿರ್ದೇಶಕ ಮನೋಹರ್ ಮಾತನಾಡಿ, ಈ ಯೋಜನೆಗೆ ಸಂಬಂಧಪಟ್ಟಂತೆ ಸಂಪೂರ್ಣ ನೀಲನಕ್ಷೆ (ಡಿಪಿಆರ್) ಈಗಾಗಲೇ ಸಿದ್ಧವಾಗಿದ್ದು, ಅದಕ್ಕೆ ಸಂಬಂಧಪಟ್ಟ ಇಲಾಖೆಗಳಿಂದ ಅಧಿಕೃತ ಅನುಮೋದನೆ ಸಹ ದೊರೆತಿದೆ. ಜಿಲ್ಲೆಯ ಗಣಿ ಬಾಧಿತ ಪ್ರದೇಶಗಳಾದ ಜಂಬುನಾಥ ಹಳ್ಳಿ ಕ್ಯಾಂಪ್‌ನಲ್ಲಿ 52 ಕುಟುಂಬ, ಕೆ.ಎಂ.ಎಂ.ಐ ಕ್ಯಾಂಪ್‌ನಲ್ಲಿ 94, ಬೊಂಬೆ ಕ್ಯಾಂಪ್‌ನಲ್ಲಿ 90, ಹಂಪಿನಕಟ್ಟೆಯಲ್ಲಿ 83, ಅಂಬೇಡ್ಕರ್ ನಗರದಲ್ಲಿ 84, ಕಾರಿಗನೂರು 139, ಕೊಟ್ರೇಶ್ವರ ನಗರ ಕ್ಯಾಂಪ್‌ನಲ್ಲಿ 113 ಕುಟುಂಬಗಳು ವಾಸವಾಗಿದ್ದು ಅರ್ಹ ಫಲಾನುಭವಿಗಳಿಗೆ ಈಗಾಗಲೇ ನಿವೇಶನ ಕಲ್ಪಿಸಲಾಗಿದೆ. ಶಿಕಾರಿ ಕ್ಯಾಂಪ್ ನಲ್ಲಿ 73 ಕುಟುಂಬಗಳು ವಾಸವಾಗಿದ್ದು ಅದರಲ್ಲಿ 60 ಫಲಾನುಭವಿಗಳಿಗೆ ನಿವೇಶನ, ಹಕ್ಕುಪತ್ರ ವಿತರಿಸಲಾಗಿದೆ. ಇನ್ನುಳಿದ 10 ಫಲಾನುಭವಿಗಳಿಗೆ ನಿವೇಶನ ಕೊರತೆಯಿಂದ ಬಾಕಿ ಉಳಿದಿವೆ. ನಿವೇಶನ ಕಲ್ಪಿಸುವುದರ ಜತೆಗೆ ರಾಜೀವ್ ಗಾಂಧಿ, ಇನ್ನಿತರೆ ವಸತಿ ಯೋಜನೆಯಡಿ ಇಲ್ಲಿನ ಸುಮಾರು 1,183 ಅರ್ಹ ಫಲಾನುಭವಿಗಳಿಗೆ ನೀರು, ರಸ್ತೆ, ಬೀದಿ ದೀಪ ಅಗತ್ಯ ಮೂಲ ಸೌಕರ್ಯಗಳನ್ನೊಳಗೊಂಡ ವಸತಿ ನಿರ್ಮಿಸಿ ಕೊಡಲಾಗುವುದು ಎಂದು ಸಭೆಗೆ ಮಾಹಿತಿ ನೀಡಿದರು.

ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿ ಇನ್ನುಳಿದ ಫಲಾನುಭವಿಗಳಿಗೆ ನಿವೇಶನ ನೀಡಲು ಬೇಕಾದ ಅಗತ್ಯ ಕ್ರಮವಹಿಸಬೇಕು. ಯೋಜನೆಯು ವಿಳಂಬವಾಗದಂತೆ ಮತ್ತು ಗುಣಮಟ್ಟದಿಂದ ಕೂಡಿರುವಂತೆ ನೋಡಿಕೊಳ್ಳಲು ಅಧಿಕಾರಿಗಳ ಸಮನ್ವಯತೆ ಅತ್ಯಗತ್ಯ. ಂ ಅಧಿಕಾರಿಗಳು ಪರಸ್ಪರ ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು ಹಾಗೂ ನಿಗದಿತ ಅವಧಿಯೊಳಗೆ ರಸ್ತೆ, ನೀರು, ವಿದ್ಯುತ್ ಸೇರಿದಂತೆ ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಿಕೊಡಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶಿಸಿದರು. ಈ ಯೋಜನೆಯು ಗಣಿಗಾರಿಕೆಯಿಂದ ಬಾಧಿತವಾದ ಕುಟುಂಬಗಳಿಗೆ ನೆಮ್ಮದಿಯ ಬದುಕು ಕಟ್ಟಿಕೊಡುವ ನಿಟ್ಟಿನಲ್ಲಿ ಕೆ.ಎಂ.ಇ.ಆರ್.ಸಿ ನಿಧಿಯ ಅಡಿಯಲ್ಲಿ ಕೈಗೊಳ್ಳಲಾಗಿರುವ ಈ ಕ್ರಮವು ಪ್ರಮುಖ ಮೈಲಿಗಲ್ಲಾಗಲಿದೆ ಎಂದು ತಿಳಿಸಿದರು.

ಸಭೆಯಲ್ಲಿ ಉಪವಿಭಾಗಾಧಿಕಾರಿ ವಿವೇಕ್, ತಹಶೀಲ್ದಾರ್ ಶೃತಿ.ಎಂ, ನಗರಸಭೆ ಪೌರಾಯುಕ್ತ ಶಿವಕುಮಾರ್ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಇದ್ದರು.

# ಸಾರ್ವಜನಿಕರ ಬಿಸಿಲಿನ ರಕ್ಷಣೆಗಾಗಿ ಗ್ರೀನ್ ಮ್ಯಾಟ್ ಅಳವಡಿಕೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಮೇ.6: ನಗರದ ಕಂಟೋನ್ಮೆಂಟ್ ಪ್ರದೇಶದಲ್ಲಿರುವ ರೈಲ್ವೆ ಗೇಟ್ ಬಳಿ ಸಾರ್ವಜನಿಕರು ತೀವ್ರ ಬಿಸಿಲಿನಿಂದ ತೊಂದರೆ ಅನುಭವಿಸುತ್ತಿರುವ ಹಿನ್ನೆಲೆ, ಮಹಾನಗರ ಪಾಲಿಕೆ ಅಧಿಕಾರಿಗಳು ಗ್ರೀನ್ ಮ್ಯಾಟ್ ಅಳವಡಿಸುವ ಕಾರ್ಯ ಕೈಗೊಂಡಿದ್ದಾರೆ.

ಕಂಟೋನ್ಮೆಂಟ್ ರೈಲ್ವೆ ಗೇಟ್ ಪ್ರದೇಶದಲ್ಲಿ ದಿನನಿತ್ಯ ಹೆಚ್ಚಿನ ಜನಸಂಚಾರ ಇರುವುದರಿಂದ, ಗೇಟ್ ಮುಚ್ಚಿದಾಗ ಜನರು ದೀರ್ಘ ಸಮಯ ಬಿಸಿಲಿನಲ್ಲಿ ನಿಲ್ಲಬೇಕಾಗುತ್ತದೆ. ಮಾಜಿ ಮಹಾಪೌರರು, ಹಾಲಿ ಸದಸ್ಯರು ರಾಜೇಶ್ವರಿ ಸುಬ್ಬರಾಯುಡು ಸಂಬಂಧಪಟ್ಟ ಅಧಿಕಾರಿಗಳಿಗೆ ಒತ್ತಾಯದ ಮೇರೆಗೆ ಈ ಒಳ್ಳೆಯ ಕಾರ್ಯ ನಡೆದಿದೆ ಎಂದು ಸಾರ್ವಜನಿಕರು ಸಂತೋಷ ವ್ಯಕ್ತಪಾಗಿದ್ದರೆ.

ವೃದ್ಧರು ಮಕ್ಕಳು ದೈನಂದಿನ ಪ್ರಯಾಣಿಕರು ಇವರಿಗೆ ಬಿಸಿಲಿನ ತಾಪಮಾನದಿಂದ ಆರೋಗ್ಯ ಸಮಸ್ಯೆಗಳು ಉಂಟಾಗುತ್ತಿರುವುದು ಗಮನಕ್ಕೆ ಬಂದಿದೆ.


ಈ ಹಿನ್ನೆಲೆಯಲ್ಲಿ, ಬಳ್ಳಾರಿ ಮಹಾನಗರ ಪಾಲಿಕೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಸ್ಥಿತಿಯನ್ನು ಪರಿಶೀಲಿಸಿ, ತಾತ್ಕಾಲಿಕವಾಗಿ ಗೇಟ್ ಬಳಿ ಗ್ರೀನ್ ಮ್ಯಾಟ್ ಅಳವಡಿಕೆ ನೆರಳು ವ್ಯವಸ್ಥೆ ಕಲ್ಪಿಸಿ ಜನರಿಗೆ ತಕ್ಷಣದ ಸೌಕರ್ಯ ಒದಗಿಸುವ ಕ್ರಮಗಳನ್ನು ಜಾರಿಗೆ ತಂದಿದ್ದಾರೆ. ಸ್ಥಳದ ಸಮಸ್ಯೆಗಳು ಸುತ್ತಮುತ್ತ ಮೂಲಸೌಕರ್ಯಗಳ ಕೊರತೆ ಇರುವುದಾಗಿ ತಿಳಿದುಬಂದಿದ್ದು: ಹೆಚ್ಚಿನ ಬಿಸಿಲು ಮತ್ತು ಧೂಳು

ಇವು ಜನರಿಗೆ ತೊಂದರೆ ಉಂಟುಮಾಡುತ್ತಿವೆ ಸಾರ್ವಜನಿಕರ ಪ್ರತಿಕ್ರಿಯೆ ಸ್ಥಳೀಯ ನಿವಾಸಿಗಳು ಮತ್ತು ಪ್ರಯಾಣಿಕರು ಈ ಕ್ರಮವನ್ನು ಸ್ವಾಗತಿಸಿದ್ದು: ತಾತ್ಕಾಲಿಕವಾಗಿ ಬಿಸಿಲಿನಿಂದ ರಕ್ಷಣೆ ಸಿಗುತ್ತದೆ ದೈನಂದಿನ ಪ್ರಯಾಣ ಸುಲಭವಾಗುತ್ತದೆ ಎಂದು ತಿಳಿಸಿದ್ದಾರೆ.

ಮೂಲಭೂತ ಸೌಲಭ್ಯಗಳ ಅಭಿವೃದ್ಧಿ ಮೇಲೆ ಗಮನ ಹರಿಸುವ ಸಾಧ್ಯತೆ ಇದೆ.

# ಸುಲ್ತಾನಾಪುರದಲ್ಲಿ ಎರಡು ಕರಡಿ ಪ್ರತ್ಯಕ್ಷ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಮೇ.6: ಜಿಲ್ಲೆಯ ಸಂಡೂರು ತಾಲೂಕಿನ ಸುಲ್ತಾನಾಪುರದಲ್ಲಿ ರಾತ್ರಿವೇಳೆ ಗ್ರಾಮದೊಳಗೆ ಎರಡು ಕರಡಿಗಳು ನುಗ್ಗಿವೆ.

ಗ್ರಾಮದ ಆಂಜನೇಯ ದೇವಸ್ಥಾನ ಸುತ್ತಮುತ್ತ ಕರಡಿಗಳ ಸಂಚರಿಸಿವೆ. ಮೊಬೈಲ್ ಕ್ಯಾಮರಾದಲ್ಲಿ ಕರಡಿಗಳ ಓಡಾಟದ ದೃಶ್ಯ ಸೆರೆಯಾಗಿದೆ.

ಕಳೆದ ಕೆಲ ತಿಂಗಳುಗಳಿಂದ ಗ್ರಾಮದಲ್ಲಿ ಹೆಚ್ಚುತ್ತಿದೆ ಕರಡಿಗಳ ಹಾವಳಿ. ರೈತರು, ಕಾರ್ಮಿಕರು, ಕುರಿಗಾಹಿಗಳು ಗ್ರಾಮಸ್ಥರ ಸುರಕ್ಷತೆ ಬಗ್ಗೆ ಆತಂಕ ಹೆಚ್ಚಾಗಿದೆ. ಜಮೀನು, ಗೋಮಾಳ, ನಾಲೆ ಪ್ರದೇಶಗಳಲ್ಲಿ ಕರಡಿಗಳ ಓಡಾಟ ನಡೆದಿದೆ.

ಕರಡಿಗಳನ್ನು ಹಿಡಿಯಲು ಗ್ರಾಮಸ್ಥರ ಅರಣ್ಯ ಇಲಾಖೆಗೆ ಆಗ್ರಹಿಸಿದ್ದಾರೆ.

# ಮಣ್ಣಿನ ಆರೋಗ್ಯ ರಕ್ಷಣೆಗೆ ವೈವಿಧ್ಯಮಯ ಬೆಳೆ ಪದ್ಧತಿ ಅನಿವಾರ್ಯ: ಡಾ.ರಮೇಶ ಎಂ.ಎನ್

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಮೇ06:ಸುಸ್ಥಿರ ಕೃಷಿ ಮತ್ತು ಮಣ್ಣಿನ ಫಲವತ್ತತೆಯನ್ನು ಕಾಪಾಡಿಕೊಳ್ಳಲು ರೈತರು ಸಾಂಪ್ರದಾಯಿಕ ಏಕಬೆಳೆ ಪದ್ಧತಿಯಿಂದ ಹೊರಬಂದು ವೈವಿಧ್ಯಮಯ ಬೆಳೆ ವ್ಯವಸ್ಥೆಗಳನ್ನು ಅಳವಡಿಸಿಕೊಳ್ಳಬೇಕು ಎಂದು ಐಸಿಎಆರ್–ಭಾರತೀಯ ಮಣ್ಣು ಮತ್ತು ನೀರು ಸಂರಕ್ಷಣಾ ಸಂಸ್ಥೆಯ ಹಿರಿಯ ವಿಜ್ಞಾನಿ ಡಾ.ರಮೇಶ ಎಂ.ಎನ್ ಅವರು ಹೇಳಿದರು.

ಬಳ್ಳಾರಿಯ ಪ್ರಾದೇಶಿಕ ಕೇಂದ್ರದ ಐಸಿಎಆರ್–ಐಐಎಸ್‌ಡಬ್ಲ್ಯೂಸಿ ವತಿಯಿಂದ ಬುಡಕಟ್ಟು ಉಪ ಯೋಜನೆ ಅಡಿ ಮಂಗಳವಾರ ಸಂಡೂರು ತಾಲ್ಲೂಕಿನ ಮಟ್ಟಜನಹಳ್ಳಿ ಗ್ರಾಮದಲ್ಲಿ ಆಯೋಜಿಸಲಾಗಿದ್ದ "ಮಣ್ಣಿನ ಆರೋಗ್ಯ ಚೇತನಕ್ಕಾಗಿ ವೈವಿಧ್ಯಮಯ ಬೆಳೆ ವ್ಯವಸ್ಥೆಗಳು" ಜಾಗೃತಿ ಅಭಿಯಾನದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಸ್ಥಳೀಯವಾಗಿ ಲಭ್ಯವಿರುವ ಸಂಪನ್ಮೂಲಗಳನ್ನು ಬಳಸಿ ಸಾವಯವ ಗೊಬ್ಬರ ತಯಾರಿಸುವುದು ಮತ್ತು ಬೆಳೆ ಅವಶೇಷಗಳನ್ನು ಸುಡದೆ ಮಣ್ಣಿನಲ್ಲಿ ಸೇರಿಸುವುದು ಮಣ್ಣಿನ ಆರೋಗ್ಯಕ್ಕೆ ಪೂರಕ. ಪಶುಪಾಲನೆ, ಹಸಿರು ಎಲೆ ಗೊಬ್ಬರ ಮತ್ತು ಕೃಷಿ ಅರಣ್ಯ ವ್ಯವಸ್ಥೆಗಳು ರೈತರಿಗೆ ಹೆಚ್ಚುವರಿ ಆದಾಯ ನೀಡುವುದಲ್ಲದೆ, ಹವಾಮಾನ ವೈಪರೀತ್ಯ ಎದುರಿಸಲು ಶಕ್ತಿ ನೀಡುತ್ತವೆ ಎಂದು ತಿಳಿಸಿದರು.

ಮಣ್ಣು ಪರೀಕ್ಷೆಯ ಮಹತ್ವದ ಕುರಿತು ಮಾತನಾಡಿದ ಹಿರಿಯ ವಿಜ್ಞಾನಿ ಡಾ.ಮಹಿಪಾಲ್ ಚೌಧರಿ ಅವರು, ರೈತರು ಸರಿಯಾದ ಮೂಲ, ಸರಿಯಾದ ದರ, ಸರಿಯಾದ ಸಮಯ ಮತ್ತು ಸರಿಯಾದ ಸ್ಥಳ (4ಆರ್ ವಿಧಾನ) ಎಂಬ ಸೂತ್ರದಡಿ ರಸಗೊಬ್ಬರ ಬಳಸಬೇಕು. ಮಟ್ಟಜನಹಳ್ಳಿಯ ಕಬ್ಬಿಣ ಸಮೃದ್ಧ ಕೆಂಪು ಮಣ್ಣಿಗೆ ಜಿಪ್ಸಮ್ ಬಳಸುವುದರಿಂದ ಮಣ್ಣಿನ ರಚನೆ ಸುಧಾರಿಸಿ, ನೀರು ಹಿಡಿದಿಟ್ಟುಕೊಳ್ಳುವ ಸಾಮರ್ಥ್ಯ ಹೆಚ್ಚುತ್ತದೆ ಎಂದು ಮಾಹಿತಿ ನೀಡಿದರು.

ಹಿರಿಯ ವಿಜ್ಞಾನಿ ಡಾ.ರವಿ ಡುಪ್ಡಾಲ್ ಅವರು ಮಾತನಾಡಿ, ಬೆಳೆ ವೈವಿಧ್ಯೀಕರಣ ಮತ್ತು ಎಫ್‌ವೈಎಂ, ಹಸಿರು ಗೊಬ್ಬರ, ಕಾಂಪೋಸ್ಟ್, ವರ್ಮಿಕಾಂಪೋಸ್ಟ್, ಒಳಚರಂಡಿ ಕೆಸರು ಮತ್ತು ಪ್ರೆಸ್‌ಮಡ್‌ನಂತಹ ಪರ್ಯಾಯ ಪೋಷಕಾಂಶ ಮೂಲಗಳ ಬಳಕೆಯಿಂದ ಇನ್‌ಪುಟ್ ವೆಚ್ಚವನ್ನು ಕಡಿಮೆ ಮಾಡುತ್ತದೆ, ಲಾಭದಾಯಕತೆಯನ್ನು ಸುಧಾರಿಸುತ್ತದೆ ಮತ್ತು ಪೋಷಕಾಂಶಗಳ ಬಳಕೆ–ಯ ದಕ್ಷತೆಯನ್ನು ಹೆಚ್ಚಿಸುತ್ತದೆ ಎಂದು ಅವರು ಒತ್ತಿ ಹೇಳಿದರು.

ಬದಲಾಗುತ್ತಿರುವ ಹವಾಮಾನ ಪರಿಸ್ಥಿತಿಗಳಲ್ಲಿ ಬೆಳೆ ಸ್ಥಿತಿಸ್ಥಾಪಕತ್ವವನ್ನು ಸುಧಾರಿಸುವಲ್ಲಿ ಮತ್ತು ಇಳುವರಿಯನ್ನು ಸ್ಥಿರಗೊಳಿಸುವಲ್ಲಿ ಅವುಗಳ ಪಾತ್ರ ಬಹುಮುಖ್ಯವಾಗಿದೆ. ವರ್ಮಿಕಾಂಪೋಸ್ಟ್, ಕಾಂಪೋಸ್ಟ್ ಮತ್ತು ಹಸಿರು ಗೊಬ್ಬರದ ಬಳಕೆಯಿಂದ ಕೃಷಿ ವೆಚ್ಚ ತಗ್ಗಿಸಿ ಲಾಭದಾಯಕತೆಯನ್ನು ಹೆಚ್ಚಿಸಿಕೊಳ್ಳುವ ವಿಧಾನಗಳನ್ನು ವಿವರಿಸಿದರು.

ಇನ್ನೋರ್ವ ವಿಜ್ಞಾನಿ ಡಾ.ಕವಿತಾ ಪಿ. ಜಾಧವ್ ಅವರು ಮಾತನಾಡಿ, ಜೀವಾಮೃತ, ಬೀಜಾಮೃತ ಮತ್ತು ಮಲ್ಚಿಂಗ್ (ಹೊದಿಕೆ) ಅಳವಡಿಕೆಯಿಂದ ಪರಿಸರ ಸ್ನೇಹಿ ಕೃಷಿ ಸಾಧ್ಯ. ಸೂಕ್ಷ್ಮ ಪೋಷಕಾಂಶಗಳ ಕೊರತೆಯನ್ನು ನೀಗಿಸುವ ಮೂಲಕ ಸುಸ್ಥಿರ ಇಳುವರಿ ಪಡೆಯಬಹುದು ಎಂದು ರೈತರಿಗೆ ಪ್ರೋತ್ಸಾಹಿಸಿದರು. ಕಾರ್ಯಕ್ರಮದಲ್ಲಿ ರೈತರಿಗೆ ಸುಧಾರಿತ ತಳಿಯ ತೊಗರಿ ಬೀಜಗಳನ್ನು (ಪಿಆರ್‌ಜಿ–176) ವಿತರಿಸಲಾಯಿತು. ಜಿಪ್ಸಮ್ ಮತ್ತು ಸೂಕ್ಷ್ಮ ಪೋಷಕಾಂಶಗಳನ್ನು ಜಮೀನಿನಲ್ಲಿ ಬಳಸುವ ಕುರಿತು ಪ್ರಾತ್ಯಕ್ಷಿಕೆ ನೀಡಲಾಯಿತು.

ಈ ವೇಳೆ ಗ್ರಾಮದ ಸುಮಾರು 40ಕ್ಕೂ ಹೆಚ್ಚು ರೈತರು ಈ ಅಭಿಯಾನದಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಮಾಹಿತಿ ಪಡೆದರು.

# ನನ್ನ ಕಾರ್ಯ ಅಲ್ಪವಾದರೆ ಭಕ್ತರ ಸಂಕಲ್ಪದ ಕಾರ್ಯ ಏನಗಿಂತ ಮೇಲು:ಪೂಜ್ಯ ಸರಡಗಿ ಶ್ರೀಗಳು



• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.6:ಮೌಲ್ಯಗಳ, ಧರ್ಮದ, ಸೇವಾಭಾವದ ಮತ್ತು ಸಮಾಜಮುಖಿ ಚಿಂತನೆಯ ಹಬ್ಬವಾಗಿದೆ, ಪೂಜ್ಯರ ಜನ್ಮ ದಿನ ನೆಪ ಮಾತ್ರ ಎಂದು ಶಿಕ್ಷಣ ಪ್ರೇಮಿ ಶಿವಾನಂದ ಖಜ್ಜುರಗಿ ಹೇಳಿದರು.ನಿನ್ನೆ ತಾಜ ಸುಲ್ತಾನಪುರದ ಚಿನ್ನದಕಂತಿ ಚಿಕ್ಕವಿಕ್ಕವೀರೇಶ್ವರ ಸಂಸ್ಥಾನ ಹಿರೇಮಠದಲ್ಲಿ ಶ್ರೀ ಮಠದ ಪೀಠಾ ಧಿಪತಿಯಾದ ಪೂಜ್ಯ ಡಾ. ರೇವಣಸಿದ್ಧ ಶಿವಾಚಾರ್ಯರ ಜನ್ಮ ದಿನದ ನಿಮಿತ್ಯ ವಿವಿಧ ಕ್ಷೇತ್ರದ ಸಾಧಕರಿಗೆ ಸನ್ಮಾನಿಸಿ ಮಾತನಾಡುತ್ತ ಪೀಠಾಧಿಪತಿಗಳು ಸಮಾಜಕ್ಕೆ ನೀಡಿರುವ ಮಾರ್ಗದರ್ಶನ ಅಪಾರ. ಅವರು ಕೇವಲ ಆಧ್ಯಾತ್ಮಿಕ ನಾಯಕರಲ್ಲ, ಸಮಾಜವನ್ನು ಸರಿಯಾದ ದಾರಿಯಲ್ಲಿ ನಡೆಸುವ ಆಧಾರ ಸ್ತಂಭವಾಗಿದ್ದಾರೆ .ಅವರ ಉಪದೇಶಗಳು ನಮ್ಮ ಬದುಕಿಗೆ ನೈತಿಕತೆ, ಶಾಂತಿ ಮತ್ತು ಸಹಾನುಭೂತಿ ತುಂಬಿಸುತ್ತವೆ ಎನ್ನುತ್ತಾ ಶ್ರೀ ಮಠದ ಸರ್ವ ಕಾರ್ಯಕ್ಕೆ ಎಲ್ಲರೂ ಕೈ ಜೋಡಿಸೋಣ ಎಂದು ಮಾರ್ಮಿಕವಾಗಿ ನುಡಿದರು. ಶ್ರೀ ಮಠದ ಪೀಠಧಿಪತಿಯಾದ ಪೂಜ್ಯ ಡಾ. ರೇವಣಸಿದ್ಧ ಶಿವಾಚಾರ್ಯರು ಆಶೀರ್ವಚನ ನೀಡುತ್ತ ಜನ್ಮ ದಿನ ನೆಪವಾದರೆ ಸರ್ವ ಭಕ್ತರ ಕೂಡಿ ವಿವಿಧ ಕ್ಷೇತ್ರಡ ಸಾಧಕರಿಗೆ ಗೌರವಿಸಿ, ಸಮಾಜಕ್ಕೆ ಪರಿಚಯ ಗೊಳಿಸಿ ಅವರ ಸೇವಾ ಭಾವನೆ ಇಮ್ಮಡಿ ಗೊಳಿಸುತ್ತಿರುವದು ಹೆಮ್ಮೆಯ ವಿಷಯ. ಇದುವರೆಗೂ ಮಠಕ್ಕೆ ನಾನು ಮಾಡಿದ್ದೂ ಕಾರ್ಯ ಅಲ್ಪವಾದರೆ ಆದರೆ ಭಕ್ತರೇ ನಮ್ಮ ಮೂರು ಮಠಗಳಾದ ಶ್ರೀನಿವಾಸ ಸರಡಗಿ, ಕುರಕೋಟಿ, ತಾಜ ಸುಲ್ತಾನಪುರ ಮಠದ ಭಕ್ತರಿಂದಲೇ ಮಠ ಬೆಳಕಿಗೆ ಬಂದಿದೆ. ನಿಮ್ಮ ಕಾರ್ಯವೇ ಉನ್ನತವಾಗಿದೆ, ನಿಮ್ಮೆಲ್ಲರ ಸಹಕಾರ ಹೀಗಿಯೇ ಮುಂದುವರಿಯಲೆಂದು ಹಾರೈಸಿದರು. ಇದೆ ಸಂಧರ್ಭದಲ್ಲಿ ವಿವಿಧ ಕ್ಷೇತ್ರದ ಸಾಧಕರಾದ ಸಾಹಿತಿ, ಶಿಕ್ಷಣ ಪ್ರೇಮಿ ಬಿ ಎಚ್ ನಿರಗುಡಿ,ಶಿಕ್ಷಣ ಪ್ರೇಮಿ ಶಿವಾನಂದ ಖಜುರ್ಗಿ, ಆನಂದ ಪೂಜಾರಿ, ಸುಭಾಷ ಓಗಿ, ಸಂಗೀತ ಕಲಾವಿದರಾದ ಸೂರ್ಯಕಾಂತ ಡುಮ್ಮಾ, ಶಿವಶಂಕರ ಬಿರಾದಾರ ಕೋಟನೂರ, ಶಿವಕುಮಾರ ಜಾಲಹಳ್ಳಿ, ರವಿಸ್ವಾಮಿ ಗೊಟೂರ ಅವರಿಗೆ ವಿಶೇಷವಾಗಿ ಗೌರವಿಸಲಾಯಿತು. ಕಲಬುರಗಿ ಉಪ ತಹಸೀಲ್ದಾರರಾದ ವೀರಯ್ಯಹೊಸಮಠ, ಗ್ರಾಮ ಪಂಚಾಯತ ಮಾಜಿ ಅಧ್ಯಕ್ಷರಾದ ಚಂದ್ರಶೇಖರ ಜಿ. ಪಾಟೀಲ ವೇದಿಕೆಯ ಮೇಲೆ ಉಪಸ್ಥಿತರಿದ್ದರು.

ಶಿವಶಂಕರ ಬಿರಾದಾರ ಪ್ರಾರ್ಥಿಸಿದರು,ವಿನೋದ ಮಾಳಾ ಸ್ವಾಗತಿಸಿದರು.ನ್ಯಾಯವಾದಿ ಹಣಮಂತರಾಯ ಅಟ್ಟೂರ ಪ್ರಾಸ್ತವಿಕವಾಗಿ ಮಾತನಾಡಿದರು. ರವಿಕುಮಾರ ಶಹಾಪುರಕರ್ ನಿರೂಪಿಸಿ,ವಂದಿಸಿದರು.

ಕಾರ್ಯಕ್ರಮದಲ್ಲಿ ಅಂಬಾರಾಯ ಕೋಣೆ, ಗುರುಶಾಂತ ಓಗಿ,ಶಿವಲಿಂಗಪ್ಪ ಮಾಳಾ,ಶರಣು ಮಾಮಾನಿ, ಬಸವರಾಜ ಓಗಿ, ರೇವಣಸಿದ್ದಯ್ಯ ಬೇಲೂರ,ರಾಜಶೇಖರ ಪಾಟೀಲ, ಶರಣಬಸಪ್ಪ ಮಚೆಟ್ಟಿ,ಚಿನ್ನುಮಾಮನಿ,ಸುರೇಶ ಪಡಶೆಟ್ಟಿ,ನಾಗೇಂದ್ರ ದೇಗಲಮಡ್ಡಿ, ಮಹಾಂತಯ್ಯ ಬಾಳ್ಳಿ, ವಿನೋದ ಚಿಮದಿ,ಬಸವರಾಜ ಶೀಲವಂತ, ಸುಚಿತ ಮಾಳಾ, ಮಹಾದೇವ ನಾಗೂರ, ಸೇರಿದಂತೆ ಅನೇಕ ಜನ ಸೇರಿದರು.ಮಲ್ಲಯ್ಯ ಆರ್ ಬೇಲೂರ ಕುಟುಂಬದ ವತಿಯಿಂದ ಅನ್ನ ದಾಸೋಹ ಸೇವೆ ನೆರವೇರಿಸಲಾಯಿತು.ವಿವಿಧ ಗ್ರಾಮದ ಭಕ್ತರು ಪೂಜ್ಯರಿಗೆ ಗೌರವಿಸಿದರು.

# ಇಪಿಎಫ್ಓ: ಮೇ 13 ರಂದು ಪಿಂಚಣಿ ಅದಾಲತ್

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಮೇ 06:ಕಾರ್ಮಿಕರ ಭವಿಷ್ಯನಿಧಿ ಸಂಸ್ಥೆಯ ಬಳ್ಳಾರಿ ಪ್ರಾದೇಶಿಕ ಕಚೇರಿ ವತಿಯಿಂದ ಪಿಂಚಣಿದಾರರ ಕುಂದು ಕೊರತೆ ಆಲಿಸಿ, ಪರಿಹರಿಸಲು ಮೇ 13 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 01 ಗಂಟೆಯವರೆಗೆ ನಗರದ ಪ್ರಾದೇಶಿಕ ಕಚೇರಿಯಲ್ಲಿ ಪಿಂಚಣಿ ಅದಾಲತ್ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಬಳ್ಳಾರಿ, ವಿಜಯನಗರ, ಕೊಪ್ಪಳ, ಚಿತ್ರದುರ್ಗ ಜಿಲ್ಲೆಗಳ ಪಿಂಚಣಿದಾರರು ತಮ್ಮ ಕುಂದುಕೊರತೆಗಳಿದ್ದಲ್ಲಿ ಬಳ್ಳಾರಿ ಪ್ರಾದೇಶಿಕ ಕಚೇರಿಯ ಸಾರ್ವಜನಿಕ ಸಂಪರ್ಕ ಅಧಿಕಾರಿಗೆ ಪತ್ರ ಅಥವಾ ಇ–ಮೇಲ್ ಮೂಲಕ ಪಿ.ಪಿ.ಓ ಸಂಖ್ಯೆ, ವಿಳಾಸ,

ದೂರವಾಣಿ, ಮೊಬೈಲ್ ಸಂಖ್ಯೆ ಮತ್ತು ಕುಂದು ಕೊರತೆಯ ಸ್ವರೂಪ ಹಾಗೂ ಇತ್ಯಾದಿಗಳನ್ನು ಅಂಚೆ ಪತ್ರದ ಮೂಲಕ ಮೇ 10 ರೊಳಗಾಗಿ ರವಾನಿಸಬಹುದಾಗಿದೆ.

# ನಾರಾಯಣಪೇಟೆ-ಗುರುಮಠಕಲ್ ಮುಖ್ಯರಸ್ತೆ ಅಗಲೀಕರಣ ಯಾವಾಗ?







• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ಮೇ.6: ನಾರಾಯಣಪೇಟೆ–ಗುರುಮಠಕಲ್ ಮುಖ್ಯರಸ್ತೆಯ ಕಿರಿದಾದ ಸ್ಥಿತಿ ಸಾರ್ವಜನಿಕರ ದೈನಂದಿನ ಬದುಕಿಗೆ ಸಂಕಟವಾಗಿ ಪರಿಣಮಿಸಿದೆ. ಹಲವು ವರ್ಷಗಳಿಂದ ರಸ್ತೆ ಅಗಲೀಕರಣದ ಭರವಸೆ ಕೇಳಿಬರುತ್ತಿದ್ದರೂ, ಇನ್ನೂ ಕಾಮಗಾರಿ ಆರಂಭವಾಗದಿರುವುದು ಜನರಲ್ಲಿ ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ.

ಈ ರಸ್ತೆಯ ಮೂಲಕ ಪ್ರತಿನಿತ್ಯ ಶಾಲೆ, ಕಾಲೇಜು, ಆಸ್ಪತ್ರೆ ಸೇರಿದಂತೆ 6 ರಿಂದ 8 ಗ್ರಾಮಗಳ ಜನರು ಸಂಚರಿಸುತ್ತಾರೆ. ಆದರೆ ರಸ್ತೆಯ ಕಿರಿದಾದ ವಿನ್ಯಾಸ ಮತ್ತು ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ವಾಹನ ಸಂಚಾರದಿಂದ ಜನರು ನರಳುತ್ತಿದ್ದಾರೆ.

ಬೆಳಿಗ್ಗೆ ಮತ್ತು ಸಂಜೆಯ ಪೀಕ್ ಅವಧಿಯಲ್ಲಿ ವಾಹನಗಳ ದಟ್ಟಣೆ ಗರಿಷ್ಠ ಮಟ್ಟ ತಲುಪುತ್ತಿದ್ದು, ಟ್ರಾಫಿಕ್ ಸಮಸ್ಯೆ ಗಂಭೀರವಾಗುತ್ತಿದೆ. ಅದರ ಜೊತೆಗೆ ಸೋಮವಾರ ನಡೆಯುವ ತರಕಾರಿ ಸಂತೆ ರಸ್ತೆ ಮೇಲೆಯೇ ಜರುಗುತ್ತಿರುವುದು ಸಮಸ್ಯೆಯನ್ನು ಮತ್ತಷ್ಟು ಉಲ್ಬಣಗೊಳಿಸಿದೆ.

ವಾಹನಗಳ ದಟ್ಟಣೆ ನಡುವೆ ಕಾಲ್ನಡಿಗೆಯ ಜನರು ಸಂಕಷ್ಟ ಅನುಭವಿಸುತ್ತಿದ್ದು, ಅಪಘಾತದ ಭೀತಿ ಹೆಚ್ಚುತ್ತಿದೆ. ಈ ಹಿನ್ನೆಲೆಯಲ್ಲಿ ಟ್ರಾಫಿಕ್ ನಿಯಂತ್ರಣಕ್ಕಾಗಿ ಪೊಲೀಸ್ ಸಿಬ್ಬಂದಿ ನಿಯೋಜನೆ ಅಗತ್ಯವಾಗಿದೆ ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

ಸುಮಾರು ಮೂರು ದಶಕಗಳಿಂದ ರಸ್ತೆ ಅಗಲೀಕರಣದ ಮಾತು ಮಾತ್ರ ಕೇಳಿಬರುತ್ತಿದ್ದು, ಯಾವುದೇ ಸ್ಪಷ್ಟ ಕ್ರಮ ಕೈಗೊಳ್ಳದಿರುವುದು ಜನರಲ್ಲಿ ಅಸಮಾಧಾನ ಮೂಡಿಸಿದೆ. ತಕ್ಷಣ ರಸ್ತೆ ಅಗಲೀಕರಣ, ತರಕಾರಿ ಮಾರುಕಟ್ಟೆಯ ಅಭಿವೃದ್ಧಿ ಹಾಗೂ ಟ್ರಾಫಿಕ್ ವ್ಯವಸ್ಥೆ ಸುಧಾರಣೆಗೆ ಸಂಬಂಧಿಸಿದಂತೆ ಸಂಬಂಧಪಟ್ಟ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕೆಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

# ಅಕ್ರಮ ಗಣಿಗಾರಿಕೆ ನೀರಿನ ಗುಂಡಿಗೆ ಬಿದ್ದು ಬಾಲಕನ ದುರ್ಮರಣ

• ಮಲ್ಲಮ್ಮ ನುಡಿ ವಾರ್ತೆಚಿತ್ತಾಪುರ

ಮೇ.6– ಕ್ಷೇತ್ರದ ಕಂಚೂರು ಡಿಗ್ಗಿ ತಾಂಡಾ ಸಮೀಪದ ಸರ್ವೆ ನಂ. 115ರಲ್ಲಿ ಮೆಹಬೂಬ್‌ಸಾಬ್ ನಡೆಸುತ್ತಿರುವ ಅಕ್ರಮ ಮೈನಿಂಗ್ ಗುಂಡಿಯಲ್ಲಿ ಬುಧವಾರ 12 ವರ್ಷದ ಬಾಲಕ ಬಿದ್ದು ದುರ್ಮರಣ ಹೊಂದಿದ್ದಾನೆ. ದುರ್ಘಟನೆಗೆ ಅಕ್ರಮ ಮೈನಿಂಗ್ ಹಾಗೂ ಅಧಿಕಾರಿಗಳ ನಿರ್ಲಕ್ಷ್ಯವೇ ನೇರ ಕಾರಣವಾಗಿದೆ ಎಂದು ಬಿಜೆಪಿ ಮುಖಂಡ ಮಣಿಕಂಠ ರಾಠೋಡ್ ಅವರು ಆರೋಪಿಸಿದ್ದಾರೆ.



ತಕ್ಷಣವೇ ಸಂಬಂಧಪಟ್ಟವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಿ, ಅಕ್ರಮ ಮೈನಿಂಗ್ ಸಂಪೂರ್ಣ ನಿಲ್ಲಿಸಬೇಕು. ಮೃತ ಬಾಲಕನ ಕುಟುಂಬಕ್ಕೆ ನ್ಯಾಯ ಹಾಗೂ ಸೂಕ್ತ ಪರಿಹಾರ ನೀಡಬೇಕು ಎಂದು ಅವರು ಹೇಳಿಕೆಯಲ್ಲಿ ಆಗ್ರಹಿಸಿದ್ದಾರೆ.

ತಹಸಿಲ್ದಾರ್ ಹಾಗೂ ಸಂಬಂಧಿತ ಅಧಿಕಾರಿಗಳಿಗೆ ನಾವು ಕೇವಲ 1 ಗಂಟೆಯ ಗಡುವು ನೀಡುತ್ತಿದ್ದೇವೆ, ಅವಧಿಯೊಳಗೆ ಸ್ಥಳಕ್ಕೆ ಭೇಟಿ ನೀಡಿ ಕ್ರಮ ಕೈಗೊಳ್ಳದಿದ್ದರೆ, ಇಡೀ ಸಮಾಜ ತಹಸಿಲ್ದಾರ್ ಕಚೇರಿ ಮುಂದೆ ಉಗ್ರ ಪ್ರತಿಭಟನೆ ನಡೆಸಲಿದೆ. ಜನರ ಜೀವಕ್ಕಿಂತ ದೊಡ್ಡದು ಯಾವುದೂ ಇಲ್ಲ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

# ಕಟ್ಟಡ ಬಾಡಿಗೆ ನೀಡಲು ಆಸಕ್ತರಿಂದ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಮೇ.06 : ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2026–27ನೇ ಶೈಕ್ಷಣಿಕ ಸಾಲಿನಿಂದ ಇಲಾಖೆಯಡಿಯಲ್ಲಿ ನೂತನವಾಗಿ ಮಹಿಳಾ ಪದವಿ ಪೂರ್ವ ಕಾಲೇಜ್ ಆರಂಭಿಸಲು ಮಂಜೂರಾತಿ ನೀಡಲಾಗಿದ್ದು, ಈ ಕಾಲೇಜು ಆರಂಭಿಸಲು ನಿರ್ವಹಣೆಗೆ ರಾಯಚೂರು ನಗರದಲ್ಲಿ ಪಿಡ್ಲ್ಯೂಡಿ ಇಲಾಖೆ ನಿಗಧಿ ಪಡಿಸುವ ಮಾಸಿಕ ಬಾಡಿಗೆ ಆಧಾರದ ಮೇಲೆ 20 ಕೊಠಡಿಗಳು ಮತ್ತು ಎಲ್ಲಾ ಮೂಲಭೂತ ಸೌಕರ್ಯ ಒಳಗೊಂಡಿರುವ ಸುಸಜ್ಜಿತ ಕಟ್ಟಡ ಬಾಡಿಗೆ ನೀಡಲು ಸಿದ್ಧವಿರುವ ಆಸಕ್ತ ಕಟ್ಟಡಗಳ ಮಾಲೀಕರಿಂದ ಅರ್ಜಿ ಆಹ್ವಾನಿಸಲಾಗಿದೆ.ಆಸಕ್ತ ಕಟ್ಟಡಗಳ ಮಾಲೀಕರು ಕಟ್ಟಡ ಛಾಯಚಿತ್ರ ಮತ್ತು ದಾಖಲೆಗಳೊಂದಿಗೆ ಜಿಲ್ಲಾ ಅಲ್ಪಸಂಖ್ಯಾತರ ಅರಿವು ಮೂಡಿಸುವ ಮಾಹಿತಿ ಕೇಂದ್ರ ಹಾಸ್ಮೀಯಾ ಶಾಲೆ ಕಂಪೌಂಡ ಹಿಂದುಗಡೆ ಬಾಲಭವನ ಹತ್ತಿರ ಸಂಪರ್ಕಿಸಬಹುದಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಯಚೂರಿನಲ್ಲಿ ಕಳೆದ ಮೊಬೈಲ್ ಕಲಬುರಗಿಯಲ್ಲಿ ಪತ್ತೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಮೇ.6–ರಾಯಚೂರಿನಲ್ಲಿ ಮಹಿಳೆಯೊಬ್ಬರು ಕಳೆದುಕೊಂಡ ಮೊಬೈಲ್ ನಗರದಲ್ಲಿ ಪತ್ತೆಯಾದ ಘಟನೆ ವರದಿಯಾಗಿದೆ. ರೈಲಿನಲ್ಲಿ ಪ್ರಯಾಣಿಸುತ್ತಿದ್ದ ಶ್ರೀಮತಿ ದೀಪಾ ಎಂ, ಎಂಬ ಮಹಿಳೆಯೊಬ್ಬರು ರಾಯಚೂರಿನಲ್ಲಿ ತಮ್ಮ ಮೊಬೈಲ್ ಕಳೆದುಕೊಂಡು ಫೈಂಡ್ ಮೈ ಡಿವೈಸ್ ಮೂಲಕ ಪತ್ತೆ ಹಚ್ಚಿದಾಗ ಮೊಬೈಲ್ ಲೋಕೇಶನ್ ಕಲಬುರ್ಗಿಯಲ್ಲಿ ಪತ್ತೆಯಾದಾಗ ಆ ಮಹಿಳೆಯು ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್ ಡಿ., ಐಪಿಎಸ್ ಅವರಿಗೆ ಫೋನ್ ಕರೆ ಮಾಡಿ, ಕಳೆದು ಹೋದ ನನ್ನ ಮೊಬೈಲ್ ಕಲಬುರ್ಗಿಯಲ್ಲಿ ಲೋಕೇಶನ್ ತೋರಿಸುತ್ತಿದ್ದು ದಯವಿಟ್ಟು ಹುಡುಕಿ ಕೊಡಿ ಎಂದು ವಿನಂತಿಸಿಕೊಂಡರು.

ಪೊಲೀಸ್ ಆಯುಕ್ತರು ಸಿಸಿಬಿ ಘಟಕದ ಪಿಐ ಅರುಣಕುಮಾರ್ ಅವರಿಗೆ ಕಾರ್ಯಪ್ರವೃತ್ತರಾಗುವಂತೆ ಅದೇಶಿಸಿದ್ದು, ಸದರಿ ತಂಡವು ಕೇವಲ ಆರು ಗಂಟೆಗಳಲ್ಲಿ ಮೊಬೈಲ್ ಪತ್ತೆ ಹಚ್ಚಿ ವಾರಸುದಾರರಿಗೆ ಮೊಬೈಲ್ ಹಿಂದಿರುಗಿಸುವಲ್ಲಿ ಉತ್ತಮ ಕಾರ್ಯ ನಿರ್ವಹಿಸಿತು. ತಂಡಕ್ಕೆ ಪೊಲೀಸ್ ಆಯುಕ್ತರು ಪ್ರಶಂಸನಾ ಪತ್ರ ನೀಡಿ ಶ್ಲಾಘಿಸಿದರು.

# ದಿನಪತ್ರಿಕೆಗಳ ವಿಲೇವಾರಿಗೆ ದರಪಟ್ಟಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮೇ 06 : ಯಾದಗಿರಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿರುವ 2025–26ನೇ ಸಾಲಿನ ಹಳೇ ಕನ್ನಡ ಮತ್ತು ಆಂಗ್ಲ ದಿನಪತ್ರಿಕೆಗಳನ್ನು ವಿಲೇವಾರಿ ಮಾಡಲಾಗುತ್ತಿದ್ದು, ಅರ್ಹರಿಂದ ದರಪಟ್ಟಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಹಿರಿಯ ಸಹಾಯಕ ನಿರ್ದೇಶಕರು ಸುಲೈಮಾನ ಡಿ.ನದಾಫ್ ಅವರು ತಿಳಿಸಿದ್ದಾರೆ.

ದರಪಟ್ಟಿಯಲ್ಲಿ ಕನ್ನಡ ಮತ್ತು ಆಂಗ್ಲ ದಿನಪತ್ರಿಕೆಗಳಿಗೆ ಪ್ರತಿ ಕೆ.ಜಿ.ಗೆ ದರ ನಮೂದಿಸಿ ಸಲ್ಲಿಸಬೇಕು. ದರಪಟ್ಟಿಯನ್ನು ಮುಚ್ಚಿದ ಲಕೋಟೆಯಲ್ಲಿಟ್ಟು ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾಡಳಿತ ಭವನ, "ಬಿ" ಬ್ಲಾಕ್ ಮೊದಲನೇ ಮಹಡಿ, ಯಾದಗಿರಿ–585202 ಇಲ್ಲಿಗೆ 2026ರ ಮೇ 14 ರಂದು ಮಧ್ಯಾಹ್ನ 12 ಗಂಟೆ ಒಳಗಾಗಿ ಖುದ್ದಾಗಿ ಅಥವಾ ಅಂಚೆ ಮೂಲಕ ಸಲ್ಲಿಸಬೇಕು, ಅವಧಿ ಮೀರಿ ಬಂದ ದರಪಟ್ಟಿಗಳನ್ನು ಪರಿಗಣಿಸುವುದಿಲ್ಲ.

# ಹಿಂದುಳಿದ ವರ್ಗಗಳ ವಿದ್ಯಾರ್ಥಿ ವೇತನ: ಅರ್ಜಿ ಸಲ್ಲಿಕೆಯ ಅವಧಿ ಮೇ 16ರವರೆಗೆ ವಿಸ್ತರಣೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಮೇ 06:2025–26ನೇ ಸಾಲಿನ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1ರ ಅಲೆಮಾರಿ/ಅರೆ ಅಲೆಮಾರಿ ವಿದ್ಯಾರ್ಥಿಗಳಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ನೀಡಲಾಗುವ "ಶುಲ್ಕ ಮರುಪಾವತಿ" ಸೌಲಭ್ಯಕ್ಕೆ ಅರ್ಜಿ ಸಲ್ಲಿಸಲು ದಿನಾಂಕವನ್ನು ವಿಸ್ತರಿಸಲಾಗಿದೆ.

ಪೋಷಕರು, ವಿದ್ಯಾರ್ಥಿಗಳು

ಹಾಗೂ ಶೈಕ್ಷಣಿಕ ಸಂಸ್ಥೆಗಳ ಮನವಿಯ ಮೇರೆಗೆ, ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಈ ಹಿಂದೆ ನಿಗದಿಪಡಿಸಿದ್ದ ದಿನಾಂಕವನ್ನು ಮೇ 16 ರವರೆಗೆ ವಿಸ್ತರಿಸಲಾಗಿದೆ.*ಅನ್ವಯವಾಗುವ ಕೋರ್ಸ್ಗಳು:*ಈ ಸೌಲಭ್ಯವು ಬಿ.ಆರ್ಕ್, ಎಂ.ಸಿ.ಎ, ಎಂ.ಸಿ.ಎಚ್ (ವೈದ್ಯಕೀಯ), ಎಂ.ಡಿ, ಎಂ.ಎಸ್ (ಮಾಸ್ಟರ್ ಆಫ್ ಸರ್ಜರಿ), ಎಂ.ಎಸ್, ಎಂ.ಎಸ್ಸಿ (ಅಲೈಡ್ ಸೈನ್ಸಸ್), ಎಂ.ಪಿ.ಟಿ (ಫಿಸಿಯೋಥೆರಪಿ), ಎಂ.ಎಚ್.ಎ, ಮಾಸ್ಟರ್ ಆಫ್ ಪಬ್ಲಿಕ್ ಹೆಲ್ತ್, ಎಂ.ಪಿ.ಎಚ್ (ಅಲೈಡ್ ಸೈನ್ಸಸ್), ಎಂ.ಎಸ್ಸಿ. ನರ್ಸಿಂಗ್, ಎಂ.ಎಸ್ಸಿ, ಎಂ.ಟೆಕ್, ಎಂಬಿಎ, ಎಂಬಿಎ ಫಿನ್‌ಟೆಕ್, ಎಂಬಿಎ (ಲಾಜಿಸ್ಟಿಕ್ ಮ್ಯಾನೇಜ್‌ಮೆಂಟ್), ಎಂಬಿಬಿಎಸ್, ಎಂಎಸ್ ಆಯುರ್ವೇದ ಎಂಡಿ (ಆಯುರ್ವೇದ), ಎಂಡಿ (ಹೋಮ್), ಎಂಡಿಎಸ್, ಪಿಜಿ ಡಿಪ್ಲೊಮಾ ಇನ್ ಡೆಂಟಲ್, ಫಾರ್ಮ್.ಡಿ (ಪೋಸ್ಟ್‌ಬ್ಯಾಕಲೌರಿಯೇಟ್), ಎಂ.ಫಾರ್ಮ್, ಬಿ.ಇ, ಬಿ.ಟೆಕ್, ಬಿ.ಎಸ್ಸಿ(ಆನರ್ಸ್), ಬಿ.ವಿ.ಎಸ್ಸಿ ಮತ್ತು ಎಎಚ್, ಬಿಎಎಂಎಸ್ (ಆಯುರ್ವೇದ), ಬಿಎಚ್‌ಎಂಎಸ್ (ಹೋಮಿಯೋಪತಿ), ಬಿಎನ್‌ವೈಎಸ್ (ಯೋಗ ಮತ್ತು ಪ್ರಕೃತಿ ಚಿಕಿತ್ಸೆ), ಬುಲ್ವಿಎಸ್ (ಯುನಾನಿ), ಬಿಎಎಂಎಸ್, ಬಿಡಿಎಸ್, ಎಂ.ಆರ್ಕ್, ಬಿ.ಎಫ್.ಎಸ್ಸಿ, ಬಿ.ಫಾರ್ಮ್, ಫಾರ್ಮ್.ಡಿ, ಬಿ.ಎಸ್ಸಿ (ಅಲೈಡ್ ಸೈನ್ಸಸ್), ಬಿಪಿಟಿ (ಫಿಸಿಯೋಥೆರಪಿ), ಆಕ್ಯುಪೇಷನಲ್ ಥೆರಪಿಯಲ್ಲಿ ಪದವಿ, ಬಿ.ಡಿ.ಎಸ್. ಬಿ.ಎಸ್ಸಿ. (ನರ್ಸಿಂಗ್), ಬಿ.ಎಸ್ಸಿ(ಪೋಸ್ಟ್ ಈಸಿಕ್), ಬಿ.ಎಡ್, ಬಿ.ಪ್ಲಾನ್, ಡಿಎಂ (ವೈದ್ಯಕೀಯ), ಎಂ.ಫಿಲ್, ಬಿ ಟೆಕ್ ಕಂಪ್ಯೂಟರ್ ಸೈನ್ಸ್ ಮತ್ತು ಎಂಜಿನಿಯರಿಂಗ್ (ಪೂರ್ಣ ಸ್ಟಾ ??ಕ್ ಅಭಿವೃದ್ಧಿ), ಬಿ.ಟೆಕ್ ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ಎಂಜಿನಿಯರಿಂಗ್ (ಎಲೆಕ್ಟ್ರಿಕ್ ವೆಹಿಕಲ್ ಟೆಕ್ನಾಲಜಿ), ಪಿ.ಎಚ್‌ಡಿ, ಪ್ಯಾರಾಮೆಡಿಕಲ್ ಕೋರ್ಸ್ಗಳು ಮತ್ತು ಎಲ್ಲಾ ಡಿಪ್ಲೋಮಾ ಕೋರ್ಸ್ಗಳು ಸೇರಿದಂತೆ ವಿವಿಧ ವೃತ್ತಿಪರ ಮತ್ತು ಪದವಿ/ಸ್ನಾತಕೋತ್ತರ ಪದವಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಲಭ್ಯವಿರುತ್ತದೆ.

ವಿದ್ಯಾರ್ಥಿಗಳು ಹೆಚ್ಚಿನ ಮಾಹಿತಿಗಾಗಿ ಅಥವಾ ತಾಂತ್ರಿಕ ತೊಂದರೆಗಳಿದ್ದಲ್ಲಿ ಇಲಾಖಾ ಸಹಾಯವಾಣಿ ಮೊ.8050770004 ಹಾಗೂ ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶ ಸಹಾಯವಾಣಿ 1902 ಗೆ ಸಂಪರ್ಕಿಸಬಹುದಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಜಲಾಲಪ್ಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ ಅಂತರರಾಷ್ಟ್ರೀಯ ಸಮ್ಮೇಳನ: ಕರಪತ್ರ ಬಿಡುಗಡೆ



• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.6–ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ ದೇವಾಲಯಗಳ ಆರ್ಥಿಕತೆ, ಪ್ರವಾಸೋದ್ಯಮ ಮತ್ತು ಸಾರ್ವಜನಿಕ ನೀತಿ ವಿಷಯದ ಕುರಿತು ಆಗಸ್ಟ್ 5ರಿಂದ 7ರವರೆಗೆ ನಡೆಯಲಿರುವ ಅಂತರರಾಷ್ಟ್ರೀಯ ಸಮ್ಮೇಳನದ ಕರಪತ್ರವನ್ನು ಮಂಗಳವಾರ ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ, ಕುಲಸಚಿವ ಪ್ರೊ. ಆರ್.ಆರ್. ಬಿರಾದಾರ್ ಅವರೂ ಸೇರಿದಂತೆ ವಿವಿಧ ವಿಭಾಗಗಳ ಅಧ್ಯಾಪಕರಾದ ಪ್ರೊ. ಪಾಂಡುರಂಗಾ ವಿ. ಡಾ. ಜಿ. ಮಹೇಂದ್ರ ರೆಡ್ಡಿ, ಪ್ರೊ. ಪುಷ್ಪಾ ಸವದತ್ತಿ, ಡಾ. ಎಸ್. ಲಿಂಗಮೂರ್ತಿ, ಪ್ರೊ. ದೇವರಾಜ್ ಹಾಗೂ ಅಧ್ಯಾಪಕರು ಬಿಡುಗಡೆ ಮಾಡಿದರು.

ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯ ಮತ್ತು ಭಾರತೀಯ ಸಾಮಾಜಿಕ ವಿಜ್ಞಾನ ಸಂಶೋಧನಾ ಮಂಡಳಿ, ನವದೆಹಲಿ ಸಂಯುಕ್ತ ಆಶ್ರಯದಲ್ಲಿ ದೇವಾಲಯ ಆರ್ಥಿಕತೆ, ಪ್ರವಾಸೋದ್ಯಮ ಮತ್ತು ಸಾರ್ವಜನಿಕ ನೀತಿ: ಆಡಳಿತ, ಜೀವನೋಪಾಯಗಳು ಮತ್ತು ಸ್ಥಿರ ಪ್ರಾದೇಶಿಕ ಅಭಿವೃದ್ಧಿ" ಎಂಬ ವಿಷಯದ ಅಂತರರಾಷ್ಟ್ರೀಯ ಸಮ್ಮೇಳನವು ಸಿಯುಕೆ ಆವರಣದಲ್ಲಿ ನಡೆಯಲಿದೆ.

ಸಮ್ಮೇಳನದಲ್ಲಿ ದೇವಾಲಯಗಳ ಆರ್ಥಿಕ, ಸಾಮಾಜಿಕ ಹಾಗೂ ಸಾರ್ವಜನಿಕ ನೀತಿ ಸಂಬಂಧಿತ ಆಯಾಮಗಳ ಕುರಿತು ಪ್ರಬಂಧ ಮಂಡನೆ, ಚರ್ಚೆ ಮತ್ತು ಸಂವಾದಗಳು ನಡೆಯಲಿವೆ. ದೇಶೀಯ ಮತ್ತು ಅಂತರರಾಷ್ಟ್ರೀಯ ಮಟ್ಟದ ಶಿಕ್ಷಣ ತಜ್ಞರು, ಸಂಶೋಧಕರು, ಸಂಶೋಧನಾ ವಿದ್ಯಾರ್ಥಿಗಳು, ವಿದ್ಯಾರ್ಥಿಗಳು ಹಾಗೂ ವಿವಿಧ ದೇವಾಲಯಗಳ ಆಡಳಿತಾಧಿಕಾರಿಗಳು ಈ ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ.

ದೇವಾಲಯಗಳು ಮತ್ತು ಪ್ರಾದೇಶಿಕ ಅಭಿವೃದ್ಧಿ, ಜೀವನೋಪಾಯ ಸೃಷ್ಟಿ, ಸಾಂಸ್ಕೃತಿಕ ಸಂರಕ್ಷಣೆ ಮತ್ತು ಸ್ಥಿರ ಪ್ರವಾಸೋದ್ಯಮಕ್ಕೆ ನೀಡುವ ಕೊಡುಗೆಯನ್ನು ಅನ್ವೇಷಿಸುವುದು ಈ ಸಮ್ಮೇಳನದ ಮುಖ್ಯ ಉದ್ದೇಶವಾಗಿದೆ. ಆಸಕ್ತರು ದೇವಾಲಯ ಆರ್ಥಿಕತೆ ಮತ್ತು ಅದರ ಆರ್ಥಿಕ ಪರಿಣಾಮ, ಆಡಳಿತ ಮತ್ತು ಕಾನೂನು ಚೌಕಟ್ಟುಗಳು, ಸ್ಥಿರ ಪ್ರವಾಸೋದ್ಯಮ, ಪರಂಪರೆ ಮತ್ತು ಸಾಂಸ್ಕೃತಿಕ ಸಂಪತ್ತು, ದೇವಾಲಯ ನಿರ್ವಹಣೆಯಲ್ಲಿ ಡಿಜಿಟಲ್ ನವೀಕರಣ ಮತ್ತು ಕೃತಕ ಬುದ್ಧಿಮತ್ತೆ ಕುರಿತು ಪ್ರಬಂಧ ಮಂಡನೆ ಮಾಡಬಹುದಾಗಿದೆ.

ಸಂಕ್ಷಿಪ್ತ ಪ್ರಬಂಧ ಸಲ್ಲಿಕೆಗೆ ಜೂನ್ 15, 2026 ಕೊನೆಯ ದಿನವಾಗಿದ್ದು, ಸಂಪೂರ್ಣ ಪ್ರಬಂಧ ಸಲ್ಲಿಕೆಗೆ ಜುಲೈ 15, 2026 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಡಾ. ಜಿ. ಮಹೇಂದ್ರ ರೆಡ್ಡಿ – 9666851851 ಮತ್ತು ಡಾ. ಎಸ್. ಲಿಂಗಮೂರ್ತಿ – 9014030809 ಮೊಬೈಲ್ ನಂಬರ್‌ಗೆ ಸಂಪರ್ಕಿಸಬಹುದಾಗಿದೆ.

# ಬಳ್ಳಾರಿ ಕೆಕೆಆರ್‌ಟಿಸಿ ವಿಭಾಗದಲ್ಲಿ ತಾಂತ್ರಿಕ ಶಿಷ್ಯವೇತನ ತರಬೇತಿಗೆ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಮೇ 06:ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಬಳ್ಳಾರಿ ವಿಭಾಗವು ಐ.ಟಿ.ಐ ಉತ್ತೀರ್ಣರಾದ ಅಭ್ಯರ್ಥಿಗಳಿಂದ ತಾಂತ್ರಿಕ ಶಿಷ್ಯವೇತನ (ಅಪ್ರೆಂಟಿಸ್) ತರಬೇತಿಗಾಗಿ ಅರ್ಜಿಗಳನ್ನು ಆಹ್ವಾನಿಸಿದೆ.

ಬಳ್ಳಾರಿ ವಿಭಾಗದ ಘಟಕ–1, 2, 3 ಹಾಗೂ ಕುರುಗೋಡು, ಸಿರುಗುಪ್ಪ, ಸಂಡೂರು ಘಟಕಗಳಲ್ಲಿ ಎಲೆಕ್ಟ್ರಿಷಿಯನ್–08, ಡೀಸೆಲ್ ಮೆಕ್ಯಾನಿಕ್–20, ಮೋಟಾರ್ ವೆಹಿಕಲ್ ಮೆಕ್ಯಾನಿಕ್–15 ಸೇರಿ ಒಟ್ಟು 43 ಸ್ಥಾನಗಳಿಗೆ ಸಂದರ್ಶನದ ಮೂಲಕ ಆಯ್ಕೆ ಮಾಡಲಾಗುವುದು.

ಆಸಕ್ತ ಅಭ್ಯರ್ಥಿಗಳು ಮೊದಲು ಕೇಂದ್ರ ಸರ್ಕಾರದ ಅಧಿಕೃತ ಪೋರ್ಟಲ್‌ಗಳಾದ www.apprenticeship.gov.in ಅಥವಾ www.ncvtmis.com ನಲ್ಲಿ ಕಡ್ಡಾಯವಾಗಿ ನೋಂದಣಿ ಮಾಡಿಕೊಳ್ಳಬೇಕು. ಆನ್‌ಲೈನ್‌ನಲ್ಲಿ ನೋಂದಣಿ ಮಾಡಿಕೊಂಡ ಅಭ್ಯರ್ಥಿಗಳು ಮಾತ್ರ ನೇರ ಸಂದರ್ಶನಕ್ಕೆ ಅರ್ಹರಾಗಿರುತ್ತಾರೆ.

ಮೇ 25 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಸಿರುಗುಪ್ಪ ರಸ್ತೆಯ ಕೆ.ಕೆ.ಆರ್.ಟಿ.ಸಿ ಬಳ್ಳಾರಿ ವಿಭಾಗದ ವಿಭಾಗೀಯ ನಿಯಂತ್ರಣಾಧಿಕಾರಿಗಳ ಕಚೇರಿಯಲ್ಲಿ ಸಂದರ್ಶನದ ಮೂಲ ದಾಖಲಾತಿಗಳ ಪರಿಶೀಲನೆ ಪ್ರಕ್ರಿಯೆ ನಡೆಯಲಿದೆ.

*ಅಗತ್ಯವಿರುವ ದಾಖಲೆಗಳು:*

ಐ.ಟಿ.ಐ ಮೂಲ ಅಂಕಪಟ್ಟಿ, ಎಸ್.ಎಸ್.ಎಲ್.ಸಿ ಅಂಕಪಟ್ಟಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಆಧಾರ್ ಕಾರ್ಡ್, ಇತ್ತೀಚಿನ 3 ಪಾಸ್‌ಪೋರ್ಟ್ ಅಳತೆಯ ಭಾವಚಿತ್ರಗಳು, ಬ್ಯಾಂಕ್ ಪಾಸ್‌ಬುಕ್ ಪ್ರತಿ (ಆಧಾರ್ ಲಿಂಕ್ ಆಗಿರಬೇಕು), ಆನ್‌ಲೈನ್ ನೋಂದಣಿ ಪ್ರತಿ, ಇ–ಮೇಲ್ ಐಡಿ ಮತ್ತು ಮೊಬೈಲ್ ಸಂಖ್ಯೆ.

ಹೆಚ್ಚಿನ ಮಾಹಿತಿಗಾಗಿ ಅಭ್ಯರ್ಥಿಗಳು ಬಳ್ಳಾರಿಯ ವಿಭಾಗೀಯ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ಬಳ್ಳಾರಿ ವಿಭಾಗದ ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೇವದಾಸಿ ಪದ್ಧತಿ ಸಮಾಜಕ್ಕೆ ಮಾರಕ ರೋಗವಿದ್ದಂತೆ

• ಮಲ್ಲಮ್ಮ ನುಡಿ ವಾರ್ತೆಕಲಬುರಗಿ



ಮೇ.06: ದೇವದಾಸಿ ಪದ್ಧತಿಯು ಸಮಾಜಕ್ಕೆಮಾರಕವಾದರೋಗವಿದ್ದಂತೆ. ಹೆಣ್ಣೊಬ್ಬಳಿಗೆಮುತ್ತುಕಟ್ಟಿದೇವದಾಸಿಯನ್ನಾಗಿ ಮಾಡುವುದು ಕಾನೂನು ಪ್ರಕಾರ ಅಪರಾಧ. ಇಂತಹ ಕೃತ್ಯ ಎಸಗುವವರಿಗೆ ಹಾಗೂ ಭಾಗಿಯಾದವರಿಗೆ 5 ವರ್ಷ ಜೈಲು ಶಿಕ್ಷೆ ಮತ್ತು 5 ರಿಂದ 10 ಸಾವಿರದವರೆಗೆ ದಂಡ ವಿಧಿಸಲಾಗುತ್ತದೆ ಎಂದು ನಿಂಬಾಳ್ ಪಿ.ಎಸ್.ಐ ಇಂದಮ್ಮ ಪಾಟೀಲ್ ಹೇಳಿದರು.

ಅಫಜಲಪುರ ತಾಲೂಕಿನ ಮಣ್ಣೂರು ಗ್ರಾಮದ ಶ್ರೀ ಯಲ್ಲಮ್ಮಾದೇವಿ ದೇವಸ್ಥಾನದ ಆವರಣದಲ್ಲಿ, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ದೇವದಾಸಿ ಪುನರ್ವಸತಿ ಯೋಜನೆ ವತಿಯಿಂದ ಮೂರು ದಿನಗಳ ಕಾಲ ಆಯೋಜಿಸಿದ್ದ ಭಕ್ತಾದಿಗಳಿಗೆ ದೇವದಾಸಿ ಪದ್ಧತಿಯ ದುಷ್ಪರಿಣಾಮಗಳ ಬಗ್ಗೆ ಜತ್ರಾ ಜಾಗೃತಿ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿ ಅವರು 1982ರ ದೇವದಾಸಿ ಸಮರ್ಪಣಾ ನಿಷೇಧ ಕಾಯ್ದೆಯ ಅಡಿಯಲ್ಲಿ ಭಿಕ್ಷೆ ಬೇಡುವುದನ್ನು ಹಾಗೂ ಬೆತ್ತಲೆ ಸೇವೆ ಮಾಡುವುದು ಅಪರಾದ ಎಂದು ತಿಳಿಸಿದರು.

ನಂತರ ಮಾತನಾಡಿದ ದೇವದಾಸಿ ಪುನರ್ವಸತಿ ಯೋಜನಾ ಅನುಷ್ಠಾನಾಧಿಕಾರಿ ಬಸವರಾಜ ಆರ್. ನಿಂಬರ್ಗಿಕರ್ ಅವರು ಮಾತನಾಡಿ ಭಕ್ತರಿಗೆ ಅನುಕೂಲವಾಗುವಂತೆ ಮಾಹಿತಿ ಕೇಂದ್ರಗಳನ್ನು ತೆರೆದು ಜಾಗೃತಿ ಮೂಡಿಸಲಾಗುತ್ತಿದೆ ಎಂದು ತಿಳಿಸಿದರು.

1982ರ ದೇವದಾಸಿ ಸಮರ್ಪಣಾ ನಿಷೇಧ ಕಾಯ್ದೆಯ ಅಡಿಯಲ್ಲಿ ಭಿಕ್ಷೆ ಬೇಡುವುದನ್ನು ಹಾಗೂ ಬೆತ್ತಲೆ ಸೇವೆ ಮಾಡುವುದನ್ನು ತಡೆಯಲು ಧ್ವನಿವರ್ಧಕಗಳ ಮೂಲಕ ವ್ಯಾಪಕ ಪ್ರಚಾರ ನಡೆಸಲಾಯಿತು. ಜಾತ್ರೆಯ ಪ್ರಮುಖ ಬೀದಿಗಳಲ್ಲಿ ಕರಪತ್ರಗಳನ್ನು ಹಂಚಿ, ಪೋಸ್ಟರ್‌ಗಳನ್ನು ಅಂಟಿಸುವ ಮೂಲಕ ಭಕ್ತರಲ್ಲಿ ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಜಾತ್ರಾ ಸಮಿತಿ ಸದಸ್ಯರಾದ ಮಹೇಶ ಪ್ಯಾಟಿ, ಎ.ಎಸ್.ಐ ರಾಜಶೇಖರ ಮುದಗಲ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಿಬ್ಬಂದಿ ಶಾರದಾ ಅವಟಿ, ಮಲ್ಲಿಕಾರ್ಜುನ ದೊಡ್ಡಮನಿ, ನಾಮದೇವ ಗುಡೂರ, ಮಾಯ್.ಡಿ ಬಡಿಗೇರಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

# ಮಕ್ಕಳ ಮೇಲೆ ಯಾವುದೇ ರೀತಿಯ ಹಲ್ಲೆ, ದೌರ್ಜನ್ಯ, ಕಿರುಕುಳ ನಡೆಯದಂತೆ ಕ್ರಮವಹಿಸಿ: ಸಿಂಧು ಅಂಗಡಿ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಮೇ.6: ಮಕ್ಕಳ ಮೇಲೆ ಯಾವುದೇ ರೀತಿಯ ಹಲ್ಲೆ, ದೌರ್ಜನ್ಯ ಮತ್ತು ಕಿರುಕುಳಗಳು ನಡೆಯದಂತೆ ಮಕ್ಕಳ ಪಾಲನಾ ಸಂಸ್ಥೆಗಳ ಮುಖ್ಯಸ್ಥರು ಹಾಗೂ ಭಾಗೀದಾರರು ಸೂಕ್ತ ಕ್ರಮವಹಿಸಬೇಕು ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಾದ ಸಿಂಧು ಅಂಗಡಿ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಕೊಪ್ಪಳ ಹಾಗೂ ವೇರ್ ಆರ್ ಇಂಡಿಯನ್ ಚಿಲ್ಡ್ರನ್ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮಕ್ಕಳ ಪಾಲನಾ ಸಂಸ್ಥೆಗಳ ಮುಖ್ಯಸ್ಥರುಗಳು ಮತ್ತು ಭಾಗೀದಾರ ಅಧಿಕಾರಿಗಳಿಗೆ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ಬುಧವಾರ ಹಮ್ಮಿಕೊಂಡಿದ್ದ ದತ್ತು ಮಾರ್ಗಸೂಚಿಗಳ–2022ರ ಕುರಿತ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ವಿಶ್ವ ಸಂಸ್ಥೆಯ ಮಕ್ಕಳ ಹಕ್ಕುಗಳ ಒಡಂಬಡಿಕೆಯ ಅನ್ವಯ ಮಕ್ಕಳನ್ನು ಜೈವಿಕ ಪಾಲಕರಿಂದ ಅನಗತ್ಯವಾಗಿ ಬೇರ್ಪಡೆಸುವಂತಿಲ್ಲ. ಮಗುವಿನ ಹಿತದೃಷ್ಟಿಯಿಂದ ತೀರಾ ಅಗತ್ಯವಿದ್ದಲ್ಲಿ ಮಾತ್ರವೇ ಕುಟುಂಬದಿಂದ ಬೇರ್ಪಡಿಸಬಹುದು. ದತ್ತು ಪೂರ್ವದಲ್ಲಿ ಮಕ್ಕಳೊಂದಿಗೆ ಆಪ್ತ ಸಮಾಲೋಚನೆ ಕಡ್ಡಾಯ. ಮಕ್ಕಳ ಮೇಲೆ ಯಾವುದೇ ರೀತಿಯ ಹಲ್ಲೆ, ದೌರ್ಜನ್ಯ ಮತ್ತು ಕಿರುಕುಳಗಳು ನಡೆಯದಂತೆ ನೋಡಿಕೊಳ್ಳಬೇಕು. ಸಾಂಸ್ಥಿಕ ಸೇವೆಯು ಮಕ್ಕಳಿಗೆ ಕೊನೆಯ ಆಯ್ಕೆ ಮಗುವಿನ ಪೋಷಣೆ ಮತ್ತು ರಕ್ಷಣೆ ಕುಟುಂಬದ ಹೊಣೆಗಾರಿಕೆ ಮರಳಿ ಕುಟುಂಬಕ್ಕೆ ಸೇರ್ಪಡೆ ಮತ್ತು ಪುನಃ ಸ್ಥಾಪನೆಯ ಬಗ್ಗೆ ಮತ್ತು ಯಾವುದೇ ಪುನರವಸತಿ ಕ್ರಮಗಳು ಮಗುವಿನ ಹಿತದೃಷ್ಟಿಯಿಂದ ಕೈಗೊಳ್ಳುವಂತೆ ಮಕ್ಕಳ ನ್ಯಾಯ (ಮಕ್ಕಳ ಪೋಷಣೆ ಮತ್ತು ರಕ್ಷಣೆ) ಕಾಯ್ದೆ–2015ರ ಮೂಲ ತತ್ವದಲ್ಲಿ ತಿಳಿಸುತ್ತದೆ. ಈ ಎಲ್ಲಾ ಅಂಶಗಳನ್ನು ಪಾಲಿಸಿ ನಿಮ್ಮ ಸಂಸ್ಥೆಗಳಲ್ಲಿ ಕಳೆದ ಎರಡು ವರ್ಷಗಳಲ್ಲಿ ಯಾವುದೇ ಮಗುವಿನ ಪಾಲಕರು ಕನಿಷ್ಠ ಮಕ್ಕಳ ಭೇಟಿಗೂ ಸಹ ಆಗಮಿಸದಿದ್ದರೆ, ಅಂತಂಹ ಮಕ್ಕಳನ್ನು ಗುರುತಿಸಿ ದತ್ತು ಕಾರ್ಯಕ್ರಮಕ್ಕೆ ಒಳಪಡಿಸಿ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ಪ್ರಕಾಶ ಕಡಗದ ಅವರು ಮಾತನಾಡಿ, ಜಿಲ್ಲೆಯಲ್ಲಿ ಕಳೆದ 10 ವರ್ಷಗಳಲ್ಲಿ 23 ಮಕ್ಕಳು ಪರಿತ್ಯಜಿಸಲ್ಪಟ್ಟಿದ್ದು, 44 ಮಕ್ಕಳನ್ನು ಪಾಲಕರು ಮಕ್ಕಳ ಕಲ್ಯಾಣ ಸಮಿತಿಗೆ ಆಧ್ಯಾರ್ಪಿಸಿರುತ್ತಾರೆ. ಮಕ್ಕಳ ನ್ಯಾಯ(ಮಕ್ಕಳ ಪೋಷಣೆ ಮತ್ತು ರಕ್ಷಣೆ) ಕಾಯ್ದೆ–2015ರಡಿಯಲ್ಲಿ, ಕೇಂದ್ರ ದತ್ತು ಪ್ರಾಧಿಕಾರದ ಸಹಯೋಗದೊಂದಿಗೆ ಒಟ್ಟು 53 ಮಕ್ಕಳಲ್ಲಿ 44 ಮಕ್ಕಳನ್ನು ದೇಶದೊಳಗೆ ಹಾಗೂ 9 ಮಕ್ಕಳನ್ನು ವಿದೇಶಿ ಪಾಲಕರಿಗೆ ಕಾನೂನು ಬದ್ಧವಾಗಿ ದತ್ತು ನೀಡಲಾಗಿದೆ ಎಂದು ತಿಳಿಸಿದರು.

ಬೆಂಗಳೂರಿನ ವೇರ್ ಆರ್ ಇಂಡಿಯನ್ ಚಿಲ್ಡ್ರನ್ ಸಂಸ್ಥೆಯ ಯೋಜನಾ ನಿರ್ದೇಶಕರಾದ ಅಮೃತಾ ಅವರು, ಮಕ್ಕಳ ನ್ಯಾಯ(ಮಕ್ಕಳ ಪೋಷಣೆ ಮತ್ತು ರಕ್ಷಣೆ) ಕಾಯ್ದೆ–2015, ತಿದ್ದುಪಡಿ–2021 ಕುರಿತು ಹಾಗೂ ವೇರ್ ಆರ್ ಇಂಡಿಯನ್ ಚಿಲ್ಡ್ರನ್ ಸಂಸ್ಥೆಯ ಯೋಜನಾಧಿಕಾರಿಗಳಾದ ಶ್ರೇಯಸ್ ಮತ್ತು ಶಿವರಾಜ್ ಅವರು 'ದತ್ತು ಮಾರ್ಗಸೂಚಿಗಳು–2022ರ' ಬಗ್ಗೆ ವಿವರಿಸಿದರು.

ಈ ತರಬೇತಿಯಲ್ಲಿ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರು ಹಾಗೂ ಸದಸ್ಯರು, ಜಿಲ್ಲೆಯ ಎಲ್ಲಾ ಮಕ್ಕಳ ಪಾಲನಾ ಸಂಸ್ಥೆಗಳು ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿ ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು. ಶಿವರಾಜ್ ಅವರು ಕಾರ್ಯಕ್ರಮ ನಿರೂಪಿಸಿದರು ಪ್ರಸ್ತಾವಿಕವಾಗಿ ಮಾತನಾಡಿದರು. ರವಿಕುಮಾರ ಪವಾರ ಸ್ವಾಗತಿಸಿದರೆ, ರವಿ ಬಡಿಗೇರ ವಂದಿಸಿದರು.

# ಕೌಶಲ್ಯ, ಉದ್ಯಮಶೀಲತೆ ತರಬೇತಿಗೆ ಯುವನಿಧಿ ಫಲಾನುಭವಿಗಳು ನೋಂದಾಯಿಸಿ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಮೇ.6: ಕೊಪ್ಪಳ ಜಿಲ್ಲೆಯಲ್ಲಿ ಯುವನಿಧಿ ಯೋಜನೆಯಡಿಯಲ್ಲಿ ನೋಂದಣಿಯಾದ ಫಲಾನುಭವಿಗಳು ಕಡ್ಡಾಯವಾಗಿ ಕೌಶಲ್ಯ ತರಬೇತಿ ಮತ್ತು ಉದ್ಯಮಶೀಲತೆ ತರಬೇತಿಯನ್ನು ಪಡೆಯಲು ನೋಂದಾಯಿಸುವಂತೆ ಜಿಲ್ಲಾ ಕೌಶಲ್ಯ ಮಿಷನ್ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ತಿಳಿಸಿದ್ದಾರೆ.

ಯುವನಿಧಿ ಯೋಜನೆಯಡಿ ನೋಂದಾಯಿಸಿಕೊಂಡು ನಿರುದ್ಯೋಗ ಭತ್ಯೆ ಪಡೆಯುತ್ತಿರುವ ಯುವಕ, ಯುವತಿಯರಿಗೆ ಯುವನಿಧಿ ಪ್ಲಸ್ ಕಾರ್ಯಕ್ರಮದಡಿ ಕೌಶಲ್ಯ ತರಬೇತಿ ಮತ್ತು ಉದ್ಯಮಶೀಲತೆ ತರಬೇತಿಯನ್ನು ಜಿಲ್ಲೆಯ ಜಿಟಿಟಿಸಿ, ಸಿಡಾಕ್, ಸರ್ಕಾರಿ ಐಟಿಐಗಳಲ್ಲಿ ಯುವನಿಧಿ ಪ್ಲಸ್ ಅಡಿಯಲ್ಲಿ ತರಬೇತಿಯನ್ನು ನೀಡಲಾಗುತ್ತಿದೆ. ಆದರೂ ಸಹ ನಿರೀಕ್ಷಿತ ಸಂಖ್ಯೆಯ ಯುವನಿಧಿ ಫಲಾನುಭವಿಗಳು ಯುವನಿಧಿ ಪ್ಲಸ ಅಡಿಯಲ್ಲಿ ತರಬೇತಿಯನ್ನು ಪಡೆಯುತ್ತಿರುವುದಿಲ್ಲದರ ಕಾರಣ ಜಿಲ್ಲೆಯ ಎಲ್ಲಾ ಯುವನಿಧಿ ಫಲಾನುಭವಿಗಳುhಣಣಠಿ://ಇuಟಟಥುಡಿoಟ.ಇಚಿಡಿಟಿಚಿಣಚಿಞಚಿ.ರಠತ.ಟಿ/ಚಿಠಿಠಿ/ಡಿeರುಣeಡಿಚಿಣuಡಿಟ_ತeಜಡುಜಿಥಿ ಈ ಲಿಂಕ್‌ನ್ನು ಉಪಯೋಗಿಸಿ ತುರ್ತಾಗಿ ನೋಂದಾಯಿಸಿಕೊಂಡು ಯುವನಿಧಿ ಪ್ಲಸ್ ಅಡಿಯಲ್ಲಿ ತರಬೇತಿಯನ್ನು ಪಡೆದುಕೊಳ್ಳಬೇಕು ಮತ್ತು ಈ ಸುವರ್ಣಾವಕಾಶವನ್ನು ಸದ್ಬಳಕೆ ಮಾಡಿಕೊಳ್ಳಬೇಕು.

*ವಿಶೇಷ ಸೂಚನೆ:* ಪ್ರಸ್ತುತ ಯುವನಿಧಿ ಫಲಾನುಭವಿಗಳು ಯುವನಿಧಿ–ಪ್ಲಸ್ ಕಾರ್ಯಕ್ರಮದಡಿ ತರಬೇತಿಯನ್ನು ಪಡೆದರೂ ಸರ್ಕಾರವು ನಿಗದಿಪಡಿಸಿರುವ ಅವಧಿಯವರೆಗೆ ನಿರುದ್ಯೋಗ ಭತ್ಯೆಯನ್ನು ಪಡೆಯಲು ಯಾವುದೇ ಅಡಚಣೆಗಳು ಇರುವುದಿಲ್ಲ.

ಪೋರ್ಟಲ್‌ನಲ್ಲಿನ ಕೌಶಲ್ಯ ತರಬೇತಿ ನೋಂದಣಿ ಸಂಬಂಧ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಚೇರಿ, ಕೆ.ಜಿ.ಐ.ಡಿ ಕಚೇರಿ ಎದುರುಗಡೆ, ಜಿಲ್ಲಾಡಳಿತ ಭವನ ಕೊಪ್ಪಳ ರವರನ್ನು ಕಛೇರಿ ಸಮಯದಲ್ಲಿ ಸಂಪರ್ಕಿಸಬಹುದು ಎಂದು ಜಿಲ್ಲಾ ಕೌಶಲ್ಯ ಮಿಷನ್ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

# ಮೇ ೯ ಕ್ಕೆ ಮಾಜಿ ಸಿಎಂ ಯಡಿಯೂರಪ್ಪನವರ ಅಭಿಮಾನೋತ್ಸವ : ನವೀನ ಗುಳಗಣ್ಣನವರ್

• ಮಲ್ಲಮ್ಮ ನುಡಿ ವಾರ್ತೆ ಕುಕನೂರ



ಮೇ.6: ತಾಲೂಕಿನ ಇಟಗಿ ಗ್ರಾಮದ ತಮ್ಮ ಗೃಹ ಕಚೇರಿಯಲ್ಲಿ ಬುಧವಾರ ನಡೆದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ನವೀನ್ ಕುಮಾರ್ ಗುಳಗಣ್ಣವರ್ ಮಾತನಾಡುತ್ತಾ ಅವರು ಈ ಬೃಹತ್ ಕಾರ್ಯಕ್ರಮಕ್ಕೆ ಕೊಪ್ಪಳ ಜಿಲ್ಲೆಯಿಂದ 30ರಿಂದ 40 ಸಾವಿರಕ್ಕೂ ಹೆಚ್ಚು ಬಿಎಸ್‌ವೈ ಅಭಿಮಾನಿಗಳು ಭಾಗವಹಿಸುವ ನಿರೀಕ್ಷೆಯಿದೆ ಎಂದು ಹೇಳಿದರು.ಹಿರಿಯ ರಾಜಕಾರಣಿ, ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ರಾಜಕೀಯ ಜೀವನದ 50ನೇ ವರ್ಷದ ಅಂಗವಾಗಿ ಮೇ 9ರಂದು ಚಿತ್ರದುರ್ಗದಲ್ಲಿ ಅದ್ದೂರಿ ಅಭಿಮಾನೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು. ರೈತರ ಹೆಸರಿನಲ್ಲಿ ಪ್ರಮಾಣವಚನ ಸ್ವೀಕರಿಸಿ ಪ್ರತ್ಯೇಕ ರೈತ ಬಜೆಟ್ ಮಂಡಿಸಿರುವುದು ಸೇರಿದಂತೆ ಹಲವಾರು ಕ್ರಮಗಳನ್ನು ಅವರು ಕೈಗೊಂಡಿದ್ದಾರೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಸೇರಿದಂತೆ ಹಲವು ರಾಷ್ಟ್ರೀಯ ಮತ್ತು ರಾಜ್ಯ ನಾಯಕರು, ಮಾಜಿ ಶಾಸಕರು ಸಚಿವರು ಹಾಗೂ ಜನಪ್ರತಿನಿಧಿಗಳು ರಾಜ್ಯದ ಎಲ್ಲಾ ಅಭಿಮಾನಿಗಳು ಭಾಗವಹಿಸಲಿದ್ದು, ಒಟ್ಟಾರೆ 10 ಲಕ್ಷಕ್ಕೂ ಹೆಚ್ಚು ಜನರು ಸೇರುವ ನಿರೀಕ್ಷೆಯಿದೆ. 1000ಕ್ಕೂ ಹೆಚ್ಚು ಮಠಾಧೀಶರು ಭಾಗವಹಿಸಲಿದ್ದಾರೆ. ಯಲಬುರ್ಗಾ ವಿಧಾನಸಭಾ ಕ್ಷೇತ್ರದಿಂದ 15 ಸಾವಿರ ಜನರನ್ನು ಕರೆದುಕೊಂಡು ಹೋಗುವ ಗುರಿ ಹೊಂದಲಾಗಿದೆ ಎಂದು ಹೇಳಿದರು.ಕಾರ್ಯಕ್ರಮದ ದಿನ ಬೆಳಿಗ್ಗೆ 10ರಿಂದ ಸಂಜೆವರೆಗೆ ಭಾಗವಹಿಸುವ ಲಕ್ಷಾಂತರ ಜನರಿಗೆ ಊಟದ ವ್ಯವಸ್ಥೆ ಮಾಡಲಾಗಿದೆ. ಕಾರ್ಯಕರ್ತರು ಭಾಗವಹಿಸಲು ಕೊಪ್ಪಳ ಜಿಲ್ಲೆಯಿಂದ ಸುಮಾರು 200 ಬಸ್‌ಗಳ ವ್ಯವಸ್ಥೆ ಮಾಡಲಾಗಿದೆ ಎಂದು ತಿಳಿಸಿದರು.

ಬಿಜೆಪಿ ಜಿಲ್ಲಾ ವಕ್ತಾರ ಸೋಮಶೇಖರಗೌಡ ಪಾಟೀಲ್ ಅವರು ಮಾತನಾಡಿ, ಕಲ್ಯಾಣ ಕರ್ನಾಟಕ ಮರುನಾಮಕರಣ, ನಂಜುಂಡಪ್ಪ ವರದಿ ಜಾರಿ, ಯಾದಗಿರಿ ಜಿಲ್ಲಾ ಘೋಷಣೆ, ವಿಮೋಚನಾ ದಿನಾಚರಣೆ ಪರಂಪರೆ ಮುಂದುವರಿಕೆ, ಪ್ರತ್ಯೇಕ ರೈತ ಬಜೆಟ್ ಮಂಡನೆ, ಕಲಬುರಗಿಯಲ್ಲಿ ಕ್ಯಾಬಿನೆಟ್ ಸಭೆ ನಡೆಸಿರುವುದು ಸೇರಿದಂತೆ ಹಲವು ಕ್ರಮಗಳ ಮೂಲಕ ಬಿ.ಎಸ್. ಯಡಿಯೂರಪ್ಪ ಅವರು ಕಲ್ಯಾಣ ಕರ್ನಾಟಕ ಭಾಗದೊಂದಿಗೆ ವಿಶೇಷ ಬಾಂಧವ್ಯ ಹೊಂದಿದ್ದಾರೆ ಎಂದು ಹೇಳಿದರು.ಪತ್ರಿಕಾಗೋಷ್ಠಿಯಲ್ಲಿ ಬಿಜೆಪಿ ಎಸ್‌ಟಿ ಮೋರ್ಚಾ ಜಿಲ್ಲಾ ಅಧ್ಯಕ್ಷ ವಿಜಯಕುಮಾರ ತಾಳಕೇರಿ, ಬಿಜೆಪಿ ರೈತ ಮೋರ್ಚಾ ಜಿಲ್ಲಾ ಉಪಾಧ್ಯಕ್ಷ ವಿರೂಪಾಕ್ಷಪ್ಪ ಹುರುಳಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಭಾರತೀಯ ಸಂಸ್ಕೃತಿ ಅಳಿವು ಉಳಿವು ವಿದ್ಯಾರ್ಥಿಗಳ ಕೈಯಲ್ಲಿ : ಸಿದ್ದಮ್ಮ ಗೊಬ್ಬುರ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಮೇ.6:ಒಂದು ನಾಡಿನ ಸಂಸ್ಕೃತಿಯ ವಾರಸುದಾರರೆಂದರೆ ಆ ನಾಡಿನ ಯುವಜನತೆ. ವಿದ್ಯಾರ್ಥಿಗಳು ಮನಸು ಮಾಡಿದರೆ ಮಾತ್ರ ಭಾರತೀಯ ಸಂಸ್ಕೃತಿ ಉಳಿಯಲು ಸಾಧ್ಯ ಎಂದು ಸಿದ್ದಮ್ಮ ಗೊಬ್ಬುರ ಅವರು ಹೇಳಿದರು. ಕಲಬುರಗಿ ನಗರದ ನೂತನ ವಿದ್ಯಾಲಯ ಪದವಿ ಮಹಾವಿದ್ಯಾಲಯದಲ್ಲಿ ಮಂಗಳವಾರ ರಂದು ಹಮ್ಮಿಕೊಂಡಿದ್ದ 'ಎಥನಿಕ್' ದಿನದ ಸಂಭ್ರಮಾಚರಣೆಯಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ನೂತನ ವಿದ್ಯಾಲಯ ಪಾಲಿಟೆಕ್ನಿಕ್ ಮಹಾವಿದ್ಯಾಲಯದ ಪ್ರಾಚಾರ್ಯ ಸಿದ್ದಮ್ಮ ಗೊಬ್ಬುರ ಅವರು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡುತ್ತಾ ನಮ್ಮ ಆಚಾರ–ವಿಚಾರಗಳು, ವೇಷಭೂಷಣಗಳು, ಊಟೋಪಚಾರ ಎಲ್ಲವೂ ಅನುಪಮವಾಗಿದ್ದು ವಿದೇಶಿಯರು ಇತ್ತ ಕಡೆ ವಾಲುತಿದ್ದರೆ, ನಾವು ಆಧುನಿಕತೆಯ ಭರಾಟೆಯಲ್ಲಿ ಪಾಶ್ಚಿಮಾತ್ಯ ಸಂಸ್ಕೃತಿಗೆ ಮಾರು ಹೋಗುತ್ತ ನಮ್ಮ ಸಂಸ್ಕೃತಿಯನ್ನು ಮರೆಯುತಿರುವುದು ವಿಷಾದನೀಯ ಎಂದು ಕಳವಳ ವ್ಯಕ್ತಪಡಿಸಿದರು. ಅತಿಥಿಗಳಾಗಿ ಆಗಮಿಸಿದ್ದ ನೂತನ ವಿದ್ಯಾಲಯ ಪಾಲಿಟೆಕ್ನಿಕ್ ಮಹಾವಿದ್ಯಾಲಯದ ಗಣಕಯಂತ್ರ ವಿಜ್ಞಾನದ ಮುಖ್ಯಸ್ಥೆ ಮಂಜುಳಾ ಪಾಟೀಲ್ ಅವರು ಹಲವು ಜನಪದ ಗೀತೆಗಳನ್ನು ಹಾಡಿ ವಿದ್ಯಾರ್ಥಿಗಳಿಗೆ ರಂಜಿಸಿದರು. ನೂತನ ವಿದ್ಯಾಲಯ ಪದವಿ ಮಹಾವಿದ್ಯಾಲಯದ ವಿದ್ಯಾರ್ಥಿ–ವಿದ್ಯಾರ್ಥಿನಿಯರು ಬಗೆ ಬಗೆಯ ಉಡುಗೆ ತೊಡುಗೆಯನ್ನು ತೊಟ್ಟು, ಭಾರತೀಯ ಸಂಸ್ಕೃತಿಯ ಸಂಕೇತದಂತೆ ಕಂಗೊಳಿಸುತ್ತಿದ್ದರು. ಡೊಳ್ಳು ಕುಣಿತ, ಲಂಬಾಣಿ ನೃತ್ಯ, ಭರತನಾಟ್ಯದಂತಹ ಹಲವು ವೈವಿಧ್ಯಮಯ ದೃಶ್ಯಕ್ಕೆ ಮಹಾವಿದ್ಯಾಲಯವು ಸಾಕ್ಷಿಯಾಯಿತು. ವೇದಿಕೆಯ ಮೇಲೆ ನೂತನ ವಿದ್ಯಾಲಯ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ದಯಾನಂದ ಎಂ. ಶಾಸ್ತ್ರಿ ಹಾಗೂ ನೂತನವಿದ್ಯಾಲಯ ಪದವಿ ಮಹಾವಿದ್ಯಾಲಯದ ನಿರ್ದೇಶಕ ಪ್ರೊ. ಗೋವಿಂದ ಪೂಜಾರ್ ಉಪಸ್ಥಿತರಿದ್ದರು. ಈ 'ಪಾರಂಪರಿಕ ವೇಷಭೂಷಣ ದಿನ'ಕ್ಕೆ ತಮ್ಮದೂ ಕೊಡುಗೆಯಿರಲಿಯೆಂದು ವಿದ್ಯಾರ್ಥಿಗಳು ಹಾಗೂ ಮಹಾವಿದ್ಯಾಲಯದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರೂ ಸಹ ಆಕರ್ಷಕ ಉಡುಪುಗಳನ್ನು ಧರಿಸಿ ಪಾಲ್ಗೊಂಡಿದ್ದರು.

# ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಅತಿಥಿ ಉಪನ್ಯಾಸಕರ ನೇಮಕಾತಿಗೆ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಮೇ.06 : ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 202627ನೇ ಶೈಕ್ಷಣಿಕ ಸಾಲಿನಿಂದ ನೂತನವಾಗಿ ಮಹಿಳಾ ಪದವಿ ಪೂರ್ವಕಾಲೇಜ್ ಅನ್ನು ಚಂದ್ರಬಂಡಾ ರಸ್ತೆಯ ವಿಜ್ಞಾನ್ ಶಾಲೆಯ ಎದುರುಗಡೆ ಇರುವ ಇಲಾಖೆಯ ಕಟ್ಟಡದಲ್ಲಿ ಆರಂಭಿಸಲಾಗುತ್ತಿದ್ದು, ವಿವಿಧ ವಿಷಯಗಳ ಅತಿಥಿ ಉಪನ್ಯಾಸಕರ ನೇಮಕಾತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.ಕನ್ನಡ ವಿಷಯದ 1ಉಪನ್ಯಾಸಕರ ಹುದ್ದೆಗೆ ಎಂ.ಎ. ಬಿ.ಎಡ್, ಇಂಗ್ಲೀಷ್ ವಿಷಯದ 1 ಉಪನ್ಯಾಸಕರ ಹುದ್ದೆಗೆ ಎಂ.ಎ, ಬಿಎಡ್, ಹಿಂದಿ 1 1 ಉಪನ್ಯಾಸಕರ ಹುದ್ದೆಗೆ ಎಂ.ಎ, ಬಿ.ಎಡ್, ಉರ್ದು 1 ಉಪನ್ಯಾಸಕರ ಹುದ್ದೆಗೆ ಎಂ.ಎ, ಬಿ.ಎಡ್, ಇತಿಹಾಸ 1 ಉಪನ್ಯಾಸಕರ ಹುದ್ದೆಗೆ ಎಂ.ಎ, ಬಿ.ಎಡ್, ಅರ್ಥಶಾಸ್ತ್ರ1 ಉಪನ್ಯಾಸಕರ ಹುದ್ದೆಗೆ ಎಂ.ಎ, ಬಿ.ಎಡ್, ರಾಜ್ಯಶಾಸ್ತ್ರ 1 ಉಪನ್ಯಾಸಕರ ಹುದ್ದೆಗೆ ಎಂ.ಎ, ಬಿ.ಎಡ್, ಸಮಾಜಶಾಸ್ತ್ರ 1 ಉಪನ್ಯಾಸಕರ ಹುದ್ದೆಗೆ ಎಂ.ಎ, ಬಿ.ಎಡ್, ಕಂಪ್ಯೂಟರ್ ಸೈನ್ಸ್ 1 ಉಪನ್ಯಾಸಕರ ಹುದ್ದೆಗೆ ಎಂ.ಕಾಂ, ಬಿ.ಎಡ್, ವ್ಯವಹಾರ ಅಧ್ಯಯನ 1 ಉಪನ್ಯಾಸಕರ ಹುದ್ದೆಗೆ ಎಂ.ಕಾಂ, ಬಿ.ಎಡ್, ಅಕೌಂಟೆನ್ಸಿ/ಲೆಕ್ಕಶಾಸ್ತ್ರ 1 ಉಪನ್ಯಾಸಕರ ಹುದ್ದೆಗೆ ಎಂ.ಕಾಂ, ಬಿ.ಎಡ್, ಭೌತಶಾಸ್ತ್ರ 1 ಉಪನ್ಯಾಸಕರ ಹುದ್ದೆಗೆ ಎಂ.ಎಸ್ಸಿ, ಬಿ.ಎಡ್, ರಸಾಯನಶಾಸ್ತ್ರ 1 ಉಪನ್ಯಾಸಕರ ಹುದ್ದೆಗೆ ಎಂ.ಎಸ್ಸಿ, ಬಿ.ಎಡ್, ಗಣಿತಶಾಸ್ತ್ರ 1 ಉಪನ್ಯಾಸಕರ ಹುದ್ದೆಗೆ ಎಂ.ಎಸ್ಸಿ, ಬಿ.ಎಡ್, ಜೀವಶಾಸ್ತ್ರ 1 ಉಪನ್ಯಾಸಕರ ಹುದ್ದೆಗೆ ಎಂ.ಎಸ್ಸಿ, ಬಿ.ಎಡ್ ಪಡೆದ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ ಅಂಕಪಟ್ಟಿ, ಡಿಗ್ರಿ ಅಂಕಪಟ್ಟಿ, ಸ್ನಾತಕೋತ್ತರ ಪದವಿಯ ಅಂಕಪಟ್ಟಿ, ಬಿಇಡಿ ಅಂಕಪಟ್ಟಿ ಮತ್ತು ಆಧಾರ್‌ಕಾರ್ಡ್ಗಳ ಜೆರಾಕ್ಸ್ ಪ್ರತಿಗಳೊಂದಿಗೆ ಇತ್ತೀಚಿನ ಪಾಸ್ ಪೋರ್ಟ್ ಅಳತೆಯ ಭಾವಚಿತ್ರ ಲಗತ್ತಿಸಿ ಮೇ.11ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.ಹೆಚ್ಚಿನ ಮಾಹಿತಿಗಾಗಿ ಮಾಹಿತಿ ಸಂಪರ್ಕ ಕೇಂದ್ರದ ಸಂಖ್ಯೆ: 9731028420 ಅಥವಾ 9845494630ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೇ 7 ರಂದು ಕೆರೆಹಳ್ಳಿ ಉಪಕೇಂದ್ರದ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಮೇ.6: ಜೆಸ್ಕಾಂ ಮುನಿರಾಬಾದ್ ಉಪ ವಿಭಾಗ ವ್ಯಾಪ್ತಿಯ ಕೆರೆಹಳ್ಳಿ ವಿದ್ಯುತ್ ವಿತರಣಾ ಉಪ ಕೇಂದ್ರದಲ್ಲಿ 1ನೇ ತ್ರೈಮಾಸಿಕ ನಿರ್ವಹಣಾ ಕಾರ್ಯ ನಿಮಿತ್ತ ಮೇ 7 ರಂದು ಬೆಳಿಗ್ಗೆ 8 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದೆ. ಕೆರೆಹಳ್ಳಿ ವಿದ್ಯುತ್ ವಿತರಣಾ ಉಪ ಕೇಂದ್ರದ ವ್ಯಾಪ್ತಿಯ ಗ್ರಾಮಗಳಾದ ?ಕೆರೆಹಳ್ಳಿ, ಗುಳದಳ್ಳಿ, ಬೂದುಗುಂಪಾ, ಹಳೆಕುಮುಟಾ, ಬಿಳೆಬಾವಿ, ನಾಗೇಶನಹಳ್ಳಿ, ಇಂದಿರಾನಗರ, ಚಂದ್ರಗಿರಿ, ಜಬ್ಬಲಗುಡ್ಡ, ಕೂಕನಪಳ್ಳಿ, ವನಬಳ್ಳಾರಿ. ಇಂದರಗಿ ಮತ್ತು ಅಮರಾಪುರ, ಎಫ್.4 ಇಂದರಗಿ ಐಪಿ ಫೀಡರ್, ಎಫ್10 ನಾರಾಯಣ ಪೇಟೆ ಐಪಿ ಫೀಡರ್, ಎಫ್ 5 ವನಬಳ್ಳಾರಿ ಐಪಿ ಫೀಡರ್, ಎಫ್11 ಹಳೆಕುಮುಟಾಐಪಿ ಫೀಡರ್ , ಎಫ್1 ಗುಳದಳ್ಳಿ ಐಪಿ ಫೀಡರ್, ಎಫ್ 2 ಅಬ್ಬಿಗೇರಾ ಫೀಡರ್, ಎಫ್3 ಕೂಕನಪಳ್ಳಿ ಐಪಿ ಫೀಡರ್, ಎಫ್ 8 ಜಬ್ಬಲಗುಡ್ಡ ಐಪಿ ಫೀಡರ್, ಎಫ್ 3 ಇಂಡಸ್ಟ್ರಿಯಲ್ ಫೀಡರ್ ಮತ್ತು ಎಫ್9 ಎಕ್ಸಪ್ರೆಸ್ ಇಂಡಸ್ಟ್ರಿಯಲ್ ಫೀಡರ್, ಎಫ್ 12 ಸುಲ್ತಾನಪುರ ಫೀಡರ್, ಎಫ್1 ಡಿ.ಹೊಸಳ್ಳಿ ಐಪಿ ಫೀಡರ್ ಮತ್ತು ಎಫ್5 ಬೂದೇಶ್ವರ ಐಪಿ ಫೀಡರ್‌ನಲ್ಲಿ ಮೇ 7 ರಂದು ಬೆಳಿಗ್ಗೆ 8 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಸಾರ್ವಜನಿಕರು ಸಹಕರಿಸಬೇಕು.

?ಕಾಮಗಾರಿಯು ನಿಗದಿತ ಸಮಯಕ್ಕಿಂತ ಮುಂಚಿತವಾಗಿ ಪೂರ್ಣಗೊಂಡಲ್ಲಿ ಯಾವುದೇ ಸಮಯದಲ್ಲೂ ವಿದ್ಯುತ್ ಸರಬರಾಜು ಪುನಃ ಪ್ರಾರಂಭಿಸಲಾಗುವುದು. ಈ ಅವಧಿಯಲ್ಲಿ ಸಾರ್ವಜನಿಕರು ಯಾವುದೇ ವಿಧದ ವಿದ್ಯುತ್ ದುರಸ್ತಿ ಅಥವಾ ಸಂಬಂಧಿತ ಕೆಲಸಗಳನ್ನು ಕೈಗೊಳ್ಳಬಾರದೆಂದು ಸೂಚಿಸಲಾಗಿದೆ. ವಿದ್ಯುತ್ ಅಪಘಾತ ಸಂಭವಿಸಿದಲ್ಲಿ ಕಂಪನಿಯು ಜವಾಬ್ದಾರರಾಗಿರುವುದಿಲ್ಲ ಎಂದು ಮುನಿರಾಬಾದ್ ಜೆಸ್ಕಾಂ ಕಾರ್ಯ ಮತ್ತು ಪಾಲನಾ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಧಿಕ ತಾಪಮಾನದ ನಡುವೆಯೂ ಗೋಕರ್ಣಕ್ಕೆ ಆಗಮಿಸುವ ಪ್ರವಾಸಿಗರ ದಂಡು



ನಾಗರಾಜ ನಾಯ್ಕ

• ಮಲ್ಲಮ್ಮ ನುಡಿ ವಾರ್ತೆ ಗೋಕರ್ಣ

ಮೇ.6: ಅಧಿಕ ತಾಪಮಾನದ ನಡುವೆಯೂ ರಜೆಯಿಂದಾಗಿ ಗೋಕರ್ಣದತ್ತ ಪ್ರವಾಸಿಗರು ತಂಡೋಪತಂಡವಾಗಿ ಆಗಮಿಸುತ್ತಿದ್ದಾರೆ. ಬಹುತೇಕರು ಇಲ್ಲಿಯ ಬೀಚ್‌ಗಳಲ್ಲಿ ಸಮಯ ಕಳೆಯುವುದು ಹಾಗೇ ಬೋಟ್‌ನಲ್ಲಿ ತೆರಳಿ ಮೋಜು ಮಾಡುತ್ತಿದ್ದಾರೆ.

ತೀವ್ರ ಸೆಕೆಯಿಂದಾಗಿ ಮೈತುಂಬಾ ಬೆವರುವಂತಾಗಿದೆ. ಹೀಗಾಗಿ ಪ್ರವಾಸಿ ಬೋಟ್ ಮೂಲಕ ನದಿ ಹಾಗೂ ಸಮುದ್ರಗಳಿಗೆ ತೆರಳಿ ಅಲ್ಲಿ ಈಜಾಡುವುದು ಮಾಡುತ್ತಿದ್ದಾರೆ. ಹಾಗೇ ಎಳನೀರು, ತಂಪು ಪಾನೀಯ, ಕಲ್ಲಂಗಡಿ ಹಣ್ಣು ಸೇರಿದಂತೆ ವಿವಿಧ ಪಾನೀಯಗಳನ್ನು ಸೇವಿಸುತ್ತಿದ್ದಾರೆ. ದಶಕಗಳಲ್ಲಿ ಈ ವರ್ಷವೇ ಅತ್ಯಧಿಕ ತಾಪಮಾನ ಏರಿಕೆ ಕಂಡುಬಂದಿದೆ.

ತಾಪಮಾನದಿಂದ ಬಳಲಿ ಬೆಂಡಾದ ಮನೆಯವರು ಈಗ ಏಸಿ ಮೊರೆ ಹೋಗಿದ್ದಾರೆ. ಇನ್ನು ಪ್ರವಾಸಿಗರು ಕೂಡ ವಸತಿಯನ್ನು ಎಸಿ ರೂಮನ್ನೇ ಅಯ್ಕೆ ಮಾಡಿಕೊಳ್ಳುತ್ತಿದ್ದಾರೆ. ಅಷ್ಟರಮಟ್ಟಿಗೆ ತಾಪಮಾನ ಏರಿಕೆಯಾಗಿದೆ. ಇನ್ನು ಭಕ್ತರು ಕೂಡ ಹೆಚ್ಚಿನ ಸಂಖ್ಯೆಯಲ್ಲಿ ಕಂಡುಬರುತ್ತಿದ್ದು ಸುಡುಬಿಸಿಲನ್ನು ಲೆಕ್ಕಿಸದೇ ದೇವರ ದರ್ಶನಕ್ಕೆ ಆಗಮಿಸುತ್ತಿದ್ದಾರೆ.

ಇನ್ನು ಕೆಲವರು ಇಲ್ಲಿಯ ತಾಪಮಾನವನ್ನು ತಿಳಿದು ಕರಾವಳಿಯತ್ತ ಬರದೇ ಬೇರೆ ಕಡೆ ಪ್ರವಾಸವನ್ನು ಕೈಗೊಂಡಿದ್ದಾರೆ. ಅಷ್ಟರಮಟ್ಟಿಗೆ ಇಲ್ಲಿ ಪ್ರವಾಸಿಗರನ್ನು ತಾಪಮಾನ ಕಾಡುತ್ತಿದೆ. ಇಲ್ಲಿ ಬಾಡಿಗೆಗೆ ಸಿಗುವ ದ್ವಿಚಕ್ರ ವಾಹನವನ್ನು ಪಡೆದು ಚಿಕ್ಕಪುಟ್ಟ ದಾರಿಯಿದ್ದರೂ ಆರಾಮಾಗಿ ಪ್ರವಾಸಿಗರು ಸಂಚರಿಸುತ್ತಿದ್ದಾರೆ. ಹಾಗೇ ಗಂಗಾವಳಿ–ಮಂಜಗುಣಿ ಸೇತುವೆ ನಿರ್ಮಾಣಗೊಂಡಿದ್ದರಿಂದಾಗಿ ಪ್ರವಾಸಿಗರಿಗೆ ಇನ್ನು ಅನುಕೂಲ ಉಂಟಾಗಿದೆ.

## ಯಾದಗಿರಿ ನಗರದಲ್ಲಿ ಎರಡು ದಿನ ನೀರು ಸರಬರಾಜು ಸ್ಥಗಿತ : ಸಹಕರಿಸಲು ಮನವಿ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ಮೇ.6: ನಗರದ ನೀರು ಶುದ್ಧೀಕರಣ ಘಟಕದಲ್ಲಿ ತಾಂತ್ರಿಕ ದೋಷ ಕಾಣಿಸಿಕೊಂಡ ಹಿನ್ನೆಲೆಯಲ್ಲಿ, ಮೇ 6 ಮತ್ತು 7ರಂದು ನಗರಾದ್ಯಂತ ಕುಡಿಯುವ ನೀರಿನ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ಪೌರಾಯುಕ್ತರಾದ ಉಮೇಶ ಚವ್ಹಾಣ ತಿಳಿಸಿದ್ದಾರೆ.

ನೀರು ಶುದ್ಧೀಕರಣ ಘಟಕದಲ್ಲಿರುವ ಮೋಟಾರ್‌ನ 'ಫುಟ್‌ಬಾಲ್' (Footvalve) ದುರಸ್ತಿಯಲ್ಲಿದ್ದು, ಅದನ್ನು ಸರಿಪಡಿಸುವುದು ಅತ್ಯಗತ್ಯವಾಗಿದೆ. ಈ ತುರ್ತು ದುರಸ್ತಿ ಕಾರ್ಯವನ್ನು ಕೈಗೆತ್ತಿಕೊಳ್ಳುತ್ತಿರುವುದರಿಂದ ದಿನಾಂಕ 06–05–2026 (ಬುಧವಾರ), ದಿನಾಂಕ: 07–05–2026 (ಗುರುವಾರ) ದುರಸ್ತಿ ಕಾರ್ಯದ ಅವಧಿಯಲ್ಲಿ ನೀರಿನ ಲಭ್ಯತೆ ಇರುವುದಿಲ್ಲವಾದ್ದರಿಂದ, ಯಾದಗಿರಿ ನಗರದ ಸಾರ್ವಜನಿಕರು ಲಭ್ಯವಿರುವ ನೀರನ್ನು ಮಿತವಾಗಿ ಬಳಸಬೇಕು. ನಗರಸಭೆಯ ಈ ತಾಂತ್ರಿಕ ಅನಿವಾರ್ಯತೆಗೆ ಸಾರ್ವಜನಿಕರು ಸಹಕರಿಸಬೇಕೆಂದು ಪೌರಾಯುಕ್ತರಾದ ಉಮೇಶ ಚವ್ಹಾಣ ಅವರು ಪ್ರಕಟಣೆಯ ಮೂಲಕ ಕೋರಿದ್ದಾರೆ.

## ಬೇಸಿಗೆ ಶಿಬಿರದ ಸಮಾರೋಪ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮೇ.6: ರಾಜ್ಯ ಬಾಲ ಭವನ ಸೊಸೈಟಿ, ಬೆಂಗಳೂರು ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಬಾಲ ಭವನ ಯಾದಗಿರಿ ವತಿಯಿಂದ ಜಿಲ್ಲೆಯಲ್ಲಿ 05–16 ವರ್ಷದ ಮಕ್ಕಳಿಗೆ ಸೃಜನಾತ್ಮಕ ಹಾಗೂ ಕ್ರಿಯಾತ್ಮಕ ಚಟುವಟಿಕೆಗಳಾದ ಚಿತ್ರಕಲೆ, ಕರಕುಶಲ, ನಾಟಕ, ನೃತ್ಯ, ಯೋಗ, ಕರಾಟೆ, ಮಲ್ಲಕಂಭ, ಪ್ರಕೃತಿ ಪರಿಸರ, ಓದುವ ಕೌಶಲ್ಯ ಕುರಿತು 15ದಿನದ ಶಿಬಿರದ ಸಮಾರೋಪ ಸಮಾರಂಭ ಕಾರ್ಯಕ್ರಮವನ್ನು ಜಿಲ್ಲಾ ಬಾಲ ಭವನ ಸಭಾಂಗಣ ಯಾದಗಿರಿಯಲ್ಲಿ ಹಮ್ಮಿಕೊಳ್ಳಲಾಯಿತು.

ಈ ಕಾರ್ಯಕ್ರಮಕ್ಕೆ ಉದ್ಘಾಟಕರಾದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ತಿಪ್ಪಣ್ಣ ಸಿರಸಗಿ ರವರು ಮಾತನಾಡಿ, ಸಮಾಜದಲ್ಲಿ ಉನ್ನತ ಶ್ರೇಣಿಗೆ ತಲುಪಬೇಕಾದರೆ ವಿದ್ಯಾಭ್ಯಾಸದ ಜೊತೆಗೆ ಸಣ್ಣ ಪುಟ್ಟ ಕಲೆಗಳನ್ನು ಬೆಳಸಿಕೊಳ್ಳಬೇಕು 15ದಿನದ ಬೇಸಿಗೆ ಶಿಬಿರದಲ್ಲಿ ತಾವು ಮಕ್ಕಳಲ್ಲಿ ಸೃಜನಾತ್ಮಕ ಚಟುವಟಿಕೆಗಳಾದ ಕರಕುಶಲೆ, ಚಿತ್ರಕಲೆ, ಜೇಡಿಮಣ್ಣಿನ ಕಲೆ, ಇತರೆ ಚಟುವಟಿಕೆಗಳಲ್ಲಿ ತುಂಬಾ ಅದ್ಭುತವಾಗಿ ಪ್ರದರ್ಶನ ಮಾಡಿದ್ದಾರೆ ಕ್ರೀಯಾ ಶೀಲ ಚಟುವಟಿಕೆ ಮೂಲಕ ಕ್ರೀಡೆ ಮತ್ತು ಕಲೆಗಳಲ್ಲಿ ಹೆಚ್ಚಿನ ಅಭ್ಯಾಸ ಬೆಳಸಿಕೊಂಡು ಗ್ರಾಮ ಮಟ್ಟದಿಂದ ರಾಜ್ಯ ಮಟ್ಟದವರೆಗೆ ಭಾಗವಹಿಸಿ ಎಂದು ಮಕ್ಕಳಿಗೆ ತಿಳುವಳಿಕೆ ನೀಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದಂತಹ ಯಾದಗಿರಿ ಜಿಲ್ಲೆ ಹಾಸ್ಯ ಕಲಾವಿದರಾದ ಬಸವರಾಜ ಮಹಾಮನಿ ರವರು ಮಾತನಾಡಿ, ಬೇಸಿಗೆಯಲ್ಲಿ ಮಕ್ಕಳು 09 ತಿಂಗಳು ಬರೇ ಓದು ಓದು ಎಂಬುವುದನ್ನು ಮಕ್ಕಳಿಗೆ ಹೇಳಿಕೊಟ್ಟರೆ ಬಾಲ ಭವನವು ಏರ್ಪಡಿಸುತ್ತಿರುವ ಉಚಿತ ಬೇಸಿಗೆ ಶಿಬಿರವನ್ನು ಜಿಲ್ಲೆಯ ಎಲ್ಲಾ ಮಕ್ಕಳು ಭಾಗವಹಿಸಿದ್ದೀರಿ ಇದು ತುಂಬಾ ನನಗೆ ಸಂತೋಷವಾದ ವಿಷಯ ಏಕೆಂದರೆ ನನ್ನ ಮಗನು ಕೂಡ ಈ ಒಂದು 15ದಿನದ ಬೇಸಿಗೆ ಶಿಬಿರದಲ್ಲಿ ಭಾಗವಹಿಸಿದ್ದಾನೆ ಅವನಿಗೆ ಮಲ್ಲಕಂಬದಲ್ಲಿ ತುಂಬಾ ಆಸಕ್ತಿಯಿಂದ ಕಲಿಯುತ್ತೇನೆ ಎಂದು ಹೇಳುತ್ತಾನೆ. ಹಾಗೆ ಪ್ರತಿಯೊಂದು ಮಗುವಿನಲ್ಲಿ ಕೂಡಾ ತಮ್ಮದೆ ಆದ ಕಲೆ ಇರುತ್ತದೆ ತಾವು ಮಕ್ಕಳು ಇಂತಹ ವೇದಿಕೆಯಲ್ಲಿ ಗುರುತಿಸಿಕೊಳ್ಳಬೇಕು ಎಂದು ಹೇಳಿದರು. ಅದೇರಿತಿಯಾಗಿ ಅಗ್ನಿಶಾಮಕದಳ ಇಲಾಖೆಯ ಸ್ಟೇಷನ್ ಪೈಯರ್ ಆಫೀಸರ್ ಶ್ರೀ ವಿರೇಶ ರವರು ಅಗ್ನಿ ಶಾಮಕದಳ ಇಲಾಖೆಯ ಕುರಿತು ಮಕ್ಕಳಿಗೆ ಅಗ್ನಿ ಅವಗಡ ಸಂದರ್ಭದಲ್ಲಿ ಹೇಗೆ ನಾವು ಜಾಗೃತಿಯಿಂದ ಮತ್ತು ರಕ್ಷಣೆಯನ್ನು ಮಾಡಿಕೊಳ್ಳಬೇಕುಂಬುದರ ಬಗ್ಗೆ ಜಾಗೃತಿ ಅರಿವು ನೀಡಿದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿಗಳಾದ ಭೀಮರಾಯ ರವರು ಮಾತನಾಡಿ, ಜಿಲ್ಲೆಯಲ್ಲಿ ಬಾಲಭವನದ ವತಿಯಿಂದ ಶಾಲೆಯ ಅವಧಿ ದಿನಗಳಲ್ಲಿ ಪ್ರತಿ ಗ್ರಾಮಗಳಲ್ಲಿ ಮತ್ತು ತಾಲ್ಲೂಕ ಮಟ್ಟದಲ್ಲಿ ಮಕ್ಕಳ ಕಲೆಗಳನ್ನು ಪ್ರದರ್ಶಿಸಲು ವಿವಿಧ ಕಾರ್ಯಕ್ರಮಗಳನ್ನು ಆಯೋಜನೆ ಮಾಡಲಾಗಿದೆ. ಅದೇರೀತಿಯಾಗಿ ಈ ಒಂದು ರಜೆ ದಿನಗಳಲ್ಲಿ ನಿಮಗೆಲ್ಲಾ 15 ದಿನದ ಬೇಸಿಗೆ ಶಿಬಿರವನ್ನು ಆಯೋಜನೆ ಮಾಡಿ ಸಮಾರೋಪ ಸಮಾರಂಭ ಕಾರ್ಯಕ್ರಮದಲ್ಲಿ 100 ಕಿಂತ ಹೆಚ್ಚು ಮಕ್ಕಳು ಭಾಗವಹಿಸಿದ್ದಿರಿ ನಿಮ್ಮೆಲ್ಲರಿಗೂ ಅಭಿನಂದನಾ ಪತ್ರವನ್ನು ನೀಡಲಾಗುವುದು ಎಂದು ಹೇಳಿದರು. ಅಧ್ಯಕ್ಷರು ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಯಾದಗಿರಿ ದಿನೇಶ್ ಕುಮಾರ, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಶ್ರೀಮತಿ ದೀಪಿಕಾ ಬಿ.ವಿ, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಸದಸ್ಯರಾದ ಶ್ರೀ ರುದ್ರಸ್ವಾಮಿ ಚಿಕ್ಕಮಠ, ಸದಸ್ಯ ಚಂದಪ್ಪ ಹಾಗೂ ಅಧೀಕ್ಷಕರು, ಸರಕಾರಿ ಬಾಲಕಿಯರ ಬಾಲ ಮಂದಿರ ಶ್ರೀಮತಿ ಮಹೇಶ್ವರಿ, ಜಿಲ್ಲಾ ಸಂಯೋಜಕರು ಜಿಲ್ಲಾ ಬಾಲ ಭವನ ಅನಿಲಕುಮಾರ, ದೇವಿಂದ್ರಪ್ಪ, ಶ್ರೀಮತಿ ಅಶ್ವಿನಿ, ಆಕಾಶ, ರವಿಕುಮಾರ, ಪ್ರಶಾಂತಕುಮಾರ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

## ಪಡಿತರ ಆಕ್ಕಿ ಸಾಗಾಟ -ದಾಳಿ



• ಮಲ್ಲಮ್ಮ ನುಡಿ ವಾರ್ತೆಮುದಗಲ್

ಮೇ.6: ದೂರವಾಣಿ ಕರೆ ದೂರಿನ ಮೇರೆಗೆ ಸ್ಥಳೀಯ ಪೊಲೀಸ್ ಇಲಾಖೆ ಹಾಗೂ ಲಿಂಗಸುಗೂರ ಆಹಾರ ಇಲಾಖೆ ಸಂಯೋಗದಲ್ಲಿ ಅಕ್ರಮವಾಗಿ ಪಡಿತರ ಆಕ್ಕಿ ಸಾಗಾಟ ಮಾಡುತ್ತಿರುವ ವಾಹನದ ದಾಳಿ ಮಾಡಿ ಪಡಿತರ ಆಕ್ಕಿ ವಶಪಡಿಸಿಕೊಂಡಿದ್ದಾರೆ.

ಕಾಳಸಂತೆಯಲ್ಲಿ ಮಾರಾಟ ಮಾಡಲು ಸುಮಾರು 31360 ಸಾವಿರ ರೂಗಳ ಮೌಲ್ಯದ 11,20 ಕ್ವಿಂಟಲ್ ತೂಕದ ಪಡಿತರ ಅಕ್ಕಿಯನ್ನು ಸಾಗಿಸುತ್ತಿದ್ದ ಸರಕು ಸಾಗಣೆ ವಾಹನವನ್ನು ತಪಾಸಣೆ ಒಳಪಡಿಸಿದಾಗ ಅಕ್ರಮವಾಗಿ ಸಾಗಿಸುತ್ತಿದ್ದು ಕಂಡು ಬಂದು ವಶಪಡಿಸಿಕೊಳ್ಳಲಾಗಿದೆ.

ಪಿಎ ವೆಂಕಟೇಶ ಮಾಡಗೇರಿ, ಆಹಾರ ಇಲಾಖೆ ಸಿಬ್ಬಂದಿಗಳಾದ ರಾಮಕೃಷ್ಣನಾಯ್ಕು, ಅಬ್ದುಲ್ ರೌಫ್, ಪೊಲೀಸ್ ಸಿಬ್ಬಂದಿ ಅಮರೇಶ, ಎಚ್, ಕೆ ಇದ್ದರು.

## ವಡಗೇರಾ-ಬೆಂಡೆಬೆಂಬಳಿ ಕಾಲುವೆ ನಿರ್ಮಾಣ ಅವೈಜ್ಞಾನಿಕ ಕಾಮಗಾರಿ ನಿಲ್ಲಿಸಿ: ವಿನೋದ್ ಗೌಡ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ಮೇ.6: ಕೃಷ್ಣಾ ಮೇಲ್ದಂಡೆ ಎಡಭಾಗದ ಕಾಲುವೆ ವಡಗೇರಾ ದಿಂದ ಬೆಂಡೆಬೆಂಬಳಿ ವರೆಗೆ ಹೊಸದಾಗಿ ಕಾಲುವೆ ನಿರ್ಮಾಣ ಆರಂಭವಾಗಿದ್ದು ಅದು ಅವೈಜ್ಞಾನಿಕದಿಂದ ಕೂಡಿದ್ದು ಕೂಡಲೆ ಕಾಮಗಾರಿ ನಿಲ್ಲಿಸುವಂತೆ ಜಿಲ್ಲಾ ಪಂಚಾಯತ್ ಮಾಜಿ ಸ್ಥಾಯಿ ಸಮಿತಿ ಅಧ್ಯಕ್ಷ ವಿನೋದ್ ಗೌಡ ಮಾಲಿ ಪಾಟೀಲ್ ದೋರನಳ್ಳಿ ರವರು ಒತ್ತಾಯಿಸಿದ್ದಾರೆ. ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು ತಾಲೂಕಿನ ಕೊನೆ ಭಾಗದ ಗ್ರಾಮಗಳಾದ ಕುರಿಯಾಳ, ಅನಕಸುಗೂರು, ಬಿರನಕಲ್, ಕಾಡಂಗೆ–ರಾ, ಕುರುಕುಂದ, ಬಸವನಗರ ,ಹಾಲಗೇರಾ, ಹೊರಟೂರು, ವಡಗೇರಾ, ಇನ್ನಿತರ ಗ್ರಾಮಗಳಿಗೆ ಪ್ರತಿ ವರ್ಷವೂ ಸಮರ್ಪಕವಾಗಿ ಕಾಲುವೆಗಳಿಗೆ ನೀರು ಬರಲ್ಲ ಆದರೆ ಸರ್ಕಾರ ನೂರಾರು ಕೋಟಿ ಹಣ ವೆಚ್ಚ ಮಾಡಿ ಕೊನೆ ಭಾಗದ ಕಾಲುವೆಯ ಮುಂದಿನ ಗ್ರಾಮಗಳಿಗೆ ನೀರು ತಲುಪಿಸುತ್ತೇವೆ ಎಂದು ಕಾಮಗಾರಿ ಮಾಡುತ್ತಿರುವುದು ಸರಿಯಲ್ಲ ಈ ಕಾಮಗಾರಿಯೂ ಗುತ್ತೇದಾರರ ಪರವಾಗಿ ಅವರ ಲಾಭಕ್ಕಾಗಿ ಕಾಮಗಾರಿ ಆರಂಭ ಮಾಡುತ್ತಿದೆ ಎಂಬ ಅನುಮಾನ ಮೂಡುತ್ತಿದೆ ಸುಮಾರು ವರ್ಷಗಳಿಂದ ಈ ಭಾಗದ ರೈತರು ಕಾಲುವೆ ನೀರುಗಳಿಂದ ವಂಚಿತರಾಗಿ ಸಂಕಷ್ಟ ಅನುಭವಿಸುತ್ತಿದ್ದಾರೆ. ವಡಗೇರಾ ಭಾಗದ ಕೊನೆ ಭಾಗಕ್ಕೆ ನೀರು ಹರಿದು ಬರಲ್ಲ ಅಂದಮೇಲೆ ಇನ್ನು ವಡಗೇರಾಖು ಕೆಳಭಾಗದ ಗ್ರಾಮಗಳಿಗೆ ನೀರು ತಲುಪಲು ಸಾಧ್ಯವೇ ಎಂದು ಪ್ರಶ್ನಿಸಿದ್ದಾರೆ. ಕೊನೆಯ ಭಾಗದ ರೈತರಿಗೆ ಕಾಲುವೆ ಇದ್ದು ಇಲ್ಲದಂತಾಗಿದೆ ಕಾಲುವೆಗಾಗಿ ಜಮೀನು ಕಳೆದುಕೊಂಡ ರೈತರು ಕಂಗಲಾಗಿದ್ದಾರೆ. ಅಧಿಕಾರಿಗಳಿಗೆ ಇದರ ಬಗ್ಗೆ ಸಂಪೂರ್ಣ ಮಾಹಿತಿ ಇದ್ದು ಮುಂದಿನ ಭಾಗಕ್ಕೆ ಕಾಲುವೆ ನಿರ್ಮಾಣಕ್ಕೆ ಮುಂದಾಗಿದ್ದು ನಾಚಿಕೆಗೇಡಿನ ಸಂಗತಿಯಾಗಿದೆ ವಡಗೇರಾ ಭಾಗದಲ್ಲಿ ಕೃಷ್ಣಾ ಮತ್ತು ಭೀಮಾ ನದಿ ಇವೆ ಅಲ್ಲಿಂದಲೇ ಏತ ನೀರಾವರಿಯನ್ನು ಮಾಡಬಹುದಿತ್ತು ನೂತನ ಕಾಲುವೆ ನಿರ್ಮಾಣ ಯೋಜನೆಯಿಂದ ರೈತರಿಗೆ ಯಾವುದೇ ಪ್ರಯೋಜನವಿಲ್ಲ ಕೊನೆ ಭಾಗಕ್ಕೆ ನೀರೇ ಬರೆದಿದ್ದ ಮೇಲೆ ಮತ್ತೆ ಯಾಕೆ ಹೊಸ ಕಾಲುವೆ ನಿರ್ಮಾಣ ಎಂದಿದ್ದಾರೆ ಸರ್ಕಾರದ ಹಣನೀರು ಪಾಲದಂತೆ ಎಂದು ರೈತರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಈ ಕುರಿತು ಜಿಲ್ಲಾಧಿಕಾರಿಗಳು ಮತ್ತು ನೀರಾವರಿ ಅಧಿಕಾರಿಗಳು ಮತ್ತೊಮ್ಮೆ ಪರಿಶೀಲನೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಒಂದು ವೇಳೆ ನಿರ್ಲಕ್ಷ ವಹಿಸಿದ್ದಲ್ಲಿ ರೈತರೊಂದಿಗೆ ಸೇರಿ ಉಗ್ರ ಹೋರಾಟ ಮಾಡುವುದಾಗಿ ಜಿಲ್ಲಾ ಪಂಚಾಯಿತಿ ಮಾಜಿ ಸ್ಥಾಯಿ ಸಮಿತಿ ಅಧ್ಯಕ್ಷ ವಿನೋದ್ ಗೌಡ ಮಾಲಿ ಪಾಟೀಲ್ ದೋರನಳ್ಳಿ ಎಚ್ಚರಿಸಿದ್ದಾರೆ.

## ಅನ್ನಭಾಗ್ಯ ಯೋಜನೆಯಡಿ ಮೇ ಮತ್ತು ಜೂನ್ ಮಾಹೆಗಳ ಆಹಾರಧಾನ್ಯ ಬಿಡುಗಡೆ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮೇ 06 : ಕೇಂದ್ರ ಸರ್ಕಾರವು ದೇಶದಲ್ಲಿ ಮುಂಬರುವ ಖರೀದಿ ಋತುವಿನ ಹಿನ್ನಲೆಯಲ್ಲಿ ಮತ್ತು ಪರಿಣಾಮಕಾರಿ ಲಾಜಿಸ್ಟಿಕ್ಸ್ ಮತ್ತು ಸಂಗ್ರಹಣೆಗಾಗಿ ರಾಜ್ಯಗಳು ಎದುರಿಸುತ್ತಿರುವ ಅಡಚಣೆಗಳಿಂದಾಗಿ ಎನ್‌ಎಫ್‌ಎಸ್‌ಎ ಅಡಿಯಲ್ಲಿ 2026ರ ಮೇ, ಜೂನ್ ಎರಡು ಮಾಹೆಗಳ ವರೆಗಿನ ಆಹಾರಧಾನ್ಯ ಹಂಚಿಕೆಯನ್ನು ಮುಂಗಡವಾಗಿ ಎತ್ತುವಳಿ ಮಾಡಿ ಕೂಡಲೇ ವಿತರಣೆ ಮಾಡುವಂತೆ ರಾಜ್ಯಗಳಿಗೆ ಸೂಚಿಸಲಾಗಿರುತ್ತದೆ. 2026ರ ಮೇ ಮತ್ತು ಜೂನ್ ಎರಡು ಮಾಹೆಗಳ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ (ಎನ್‌ಎಫ್‌ಎಸ್‌ಎ) ಹಂಚಿಕೆಯನ್ನು 2026ರ ಮೇ ಮಾಹೆಯಲ್ಲಿ ವಿತರಿಸಲು ಸರ್ಕಾರವು ನಿರ್ದೇಶನ ನೀಡಿದೆ ಎಂದು ಯಾದಗಿರಿ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರು ತಿಳಿಸಿದ್ದಾರೆ.

ಯಾದಗಿರಿ ಜಿಲ್ಲೆಯ ಪ್ರತಿ ಅಂತ್ಯೋದಯ (ಎಎವೈ) ಪಡಿತರ ಚೀಟಿಗೆ 70 ಕೆ.ಜಿ (ಮೇ 35 ಜೂನ್ 35) ಅಕ್ಕಿ ಮತ್ತು ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 10 ಕೆ.ಜಿ (ಮೇ 5 ಜೂನ್ 5) ಉಚಿತವಾಗಿ ವಿತರಿಸಲಾಗುತ್ತದೆ. 2026ರ ಮೇ ಮತ್ತು ಜೂನ್ ಎರಡು ಮಾಹೆಗಳ ಆಹಾರಧಾನ್ಯವನ್ನು ಒಟ್ಟಿಗೆ ವಿತರಣೆ ಮಾಡಬೇಕಾಗಿರುವುದರಿಂದ ವಿತರಣಾ ಸಂದರ್ಭದಲ್ಲಿ ಪ್ರತಿ ಮಾಹೆಗಳ ವಿತರಣೆಗೆ ಫಲಾನುಭವಿಗಳಿಂದ ಪ್ರತ್ಯೇಕ ಬಯೋ ಮೆಟ್ರಿಕ್ ಪಡೆಯುವ ಅವಕಾಶ ಕಲ್ಪಿಸಲಾಗಿರುತ್ತದೆ. ಪಡಿತರ ಚೀಟಿ ಫಲಾನುಭವಿಗಳು ಎರಡು ಬಾರಿ ಬಯೋ ಮೆಟ್ರಿಕ್ ನೀಡಿ ಆಹಾರಧಾನ್ಯವನ್ನು ಪಡೆಯಲು ಜಿಲ್ಲೆಯ ಎಲ್ಲಾ ಪಡಿತರ ಚೀಟಿದಾರರಿಗೆ ತಿಳಿಸಿದೆ.

ರಾಜ್ಯ ಸರ್ಕಾರದ ಮಹತ್ವ ಯೋಜನೆಯಾದ ಅನ್ನಭಾಗ್ಯ ಯೋಜನೆಯಡಿ ರಾಜ್ಯ ಸರ್ಕಾರದ ವತಿಯಿಂದ ವಿತರಿಸಲಾಗುತ್ತಿರುವ ಹೆಚ್ಚುವರಿ 5 ಕೆ.ಜಿ ಆಹಾರಧಾನ್ಯವನ್ನು 2026ರ ಮೇ ಮತ್ತು ಜೂನ್ ಮಾಹೆಗಳ ಆಹಾರಧಾನ್ಯವನ್ನು ಆದ್ಯತಾ ಮತ್ತು ಅಂತ್ಯೋದಯ ಪಡಿತರ ಚೀಟಿಯ ಫಲಾನುಭವಿಗಳಿಗೆ ಈಗಾಗಲೇ ವಿತರಿಸುವ ರೀತಿಯಲ್ಲಿ 2026ರ ಜೂನ್ ಮಾಹೆಯಲ್ಲಿ ಎತ್ತುವಳಿ ಮಾಡಿ ವಿತರಿಸಲು ಸರ್ಕಾರವು ನಿರ್ದೇಶಿಸಿದೆ.

ಒಂದು ರಾಷ್ಟ್ರ ಒಂದು ಪಡಿತರ ಚೀಟಿ (ಅಂತರ್ ರಾಜ್ಯ, ಅಂತರ್ ಜಿಲ್ಲೆ) ಪೋರ್ಟೆಬಿಲಿಟಿ ಜಾರಿಯಲ್ಲಿರುವುದರಿಂದ ಯಾವುದೇ ರಾಜ್ಯದ ಪಡಿತರ ಚೀಟಿದಾರರು ಯಾವುದೇ ವರ್ಗದ ಪಡಿತರ ಚೀಟಿದಾರರು ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರವನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಯಾವುದೇ ನ್ಯಾಯಬೆಲೆ ಅಂಗಡಿಕಾರರು ಕಡಿಮೆ ಪ್ರಮಾಣದ ಪಡಿತರವನ್ನು ವಿತರಣೆ ಮಾಡಿದ್ದಲ್ಲಿ, ಹಣ ಕೇಳಿದ್ದಲ್ಲಿ ಮತ್ತು ಇತರೆ ದೂರುಗಳಿಗೆ ನಿಶುಲ್ಕ ಸಹಾಯವಾಣಿ ಸಂಖ್ಯೆ 1967ಗೆ ಹಾಗೂ ತಾಲ್ಲೂಕಿನಲ್ಲಿರುವ ತಹಸೀಲ್ದಾರರ ಕಛೇರಿಗೆ ಅಥವಾ ಜಿಲ್ಲೆಯ ಉಪ ನಿರ್ದೇಶಕರ ಕಛೇರಿಗೆ ದೂರನ್ನು ಸಲ್ಲಿಸಬೇಕು. ಈ ಯೋಜನೆಯಡಿ ವಿತರಿಸಲಾದ ಆಹಾರ ಧಾನ್ಯಗಳನ್ನು ಹಣಕ್ಕಾಗಿ ಪಡಿತರ ಚೀಟಿ–ದಾರರು ಮಾರಾಟ ಮಾಡುವುದಾಗಲಿ ಅಥವಾ ಸಂಗ್ರಹಣೆ ಮಾಡುವುದು ಕಂಡುಬಂದಲ್ಲಿ ಅಂತಹ ಪಡಿತರ ಚೀಟಿದಾರರಿಗೆ ವಿತರಿಸಲಾದ ಆಹಾರ ಧಾನ್ಯಗಳಿಗೆ ಮುಕ್ತ ಮಾರುಕಟ್ಟೆ ದರಕ್ಕೆ ದಂಡ ವಿಧಿಸಲಾಗುವುದು ಈ ಪಡಿತರ ಚೀಟಿಯನ್ನು ಆರು ತಿಂಗಳ ಅವಧಿಗೆ ಅಮಾನತ್ತುಗೊಳಿಸಲಾವುದೆಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕುಷ್ಟಗಿ ಮಾಜಿ ಶಾಸಕ ಎಂ ಗಂಗಣ್ಣ ಜನ್ಮ ದಿನಾಚರಣೆ



• ಮಲ್ಲಮ್ಮ ನುಡಿ ವಾರ್ತೆಮುದಗಲ್

ಮೇ.6: ಕುಷ್ಟಗಿ ಮಾಜಿ ಶಾಸಕ ಎಂ. ಗಂಗಣ್ಣ ಅವರ 75ನೇ ಹುಟ್ಟುಹಬ್ಬದ ಪ್ರಯುಕ್ತ ಅಭಿಮಾನಿಗಳು ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರ ಹಾಗೂ ಅಪ್ಪು ವಿದ್ಯಾಧಾಮ ವಿದ್ಯಾರ್ಥಿಗಳಿಗೆ ಹಾಲು, ಹಣ್ಣು, ಬ್ರೆಡ್ ವಿತರಣೆ ಮಾಡುವ ಮೂಲಕ ಜನ್ಮದಿನಾಚರಣೆ ಮಾಡಿದರು.

ಪಟ್ಟಣದ ಶ್ರೀ ಶೀಲವಂತಮ್ಮ ದೇವಸ್ಥಾನದ ಆವರಣದಲ್ಲಿ ಅಪ್ಪು ವಿದ್ಯಾಧಾಮ ಆಡಳಿತಗಾರ ಮಹಾಂತೇಶ ಚಲವಾದಿ ಮಾತನಾಡಿ ಮಾಜಿ ಶಾಸಕ ಎಂ.ಗಂಗಣ್ಣ ಅವರು ಮುದಗಲ್ ಪಟ್ಟಣದ ಕಳಸವಾಗಿದ್ದರು. ಅವರ ನಾಯಕತ್ವದ ಗುಣಗಳನ್ನು ನಮ್ಮಲ್ಲಿ ಅಳವಡಿಸಿಕೊಳ್ಳಬೇಕು. ಪಟ್ಟಣದ ಒಳಿತು ಮತ್ತು ಕೆಡುಕಿನ ಬಗ್ಗೆ ವಿಚಾರವಾದಿಯಾಗಿದ್ದರು. ಸದಾ ಜೀವನದಲ್ಲಿ ಕ್ರಿಯಾಶೀಲ ವ್ಯಕ್ತಿಯಾಗಿದ್ದರು. ಪತ್ರಿಕೆ ಓದುವುದು, ವ್ಯವಹಾರ ಜ್ಞಾನ, ರಾಜಕೀಯ ಜ್ಞಾನ ಹೊಂದಿದ ವ್ಯಕ್ತಿಯಾಗಿದ್ದರು. ತಮ್ಮ ಸಣ್ಣ ವಯಸ್ಸಿನಲ್ಲಿ ಒಂದು ಕ್ಷೇತ್ರದ ಶಾಸಕರಾಗಿ ಇಂದಿಗೂ ಪ್ರಜ್ವಲಿಸುವರಾಗಿದ್ದಾರೆ ಎಂದು ಹೇಳಿದರು. ಇದೇ ವೇಳೆ ಪುರಸಭೆ ಸದಸ್ಯ ಮಾಸುಮ್ ಶರೀಫ್ ಮಾತನಾಡಿದರು.

ಕಾರ್ಮಿಕ ಸಂಘದ ಗೌರವಾಧ್ಯಕ್ಷ ಮಂಜುನಾಥ್ ಬನ್ನಿಗೋಳ್ಕರ್, ಸಣ್ಣ ಸಿದ್ದಯ್ಯ ಮೇಗಳಪೇಟೆ, ಸಂಜೀವ್ ಚಲವಾದಿ, ಗ್ಯಾನಪ್ಪ ಹೊಳ್ಯಾಚಿ, ಗಯಸುದ್ದೀನ ಕಿಲ್ಲಾ, ಅಬ್ದುಲ್ ಕಧೀರ್, ಗಂಗಾಧರ್ ವೆಂಕಟರಾಯನಪೇಟೆ, ಮುನ್ನ ಹುಸೇನ್ ಬಾಷಾ, ರಾಜಾಸಾಬ್ ಸೇರಿದಂತೆ ಎಂ.ಗಂಗಣ್ಣ ಅಭಿಮಾನಿ ಬಳಗದವರು ಉಪಸ್ಥಿತರಿದ್ದರು.

## ಟ್ರಾಫಿಕ್‌ಜಾಮ್‌ನಿಂದ ಪ್ರಯಾಣಿಕರು ಸುಸ್ತು ರಸ್ತೆ ಅಗಲೀಕರಣಕ್ಕೆ ಸಾರ್ವಜನಿಕರ ಆಗ್ರಹ



• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ಮೇ.6: ಮಂಜಗುಣಿ–ಗಂಗಾವಳಿ ಸೇತುವೆ ಲೋಕಾರ್ಪಣೆಗೊಂಡ ನಂತರ ಹೆಚ್ಚಿನ ಸಂಖ್ಯೆಯಲ್ಲಿ ವಾಹನಗಳು ಓಡಾಡುತ್ತಿವೆ. ಆದರೆ ಬಹುತೇಕ ಈ ರಸ್ತೆ ಕಿರಿಯದಾಗಿದ್ದು ಸುಗಮ ಸಂಚಾರಕ್ಕೆ ಅಲ್ಲಲ್ಲಿ ತಡೆವೊಡ್ಡಿದಂತಾಗಿದೆ. ಟ್ರಾಫಿಕ್‌ಜಾಮ್‌ನಿಂದಾಗಿ ಪ್ರಯಾಣಿಕರು ವ್ಯಥೆ ಪಡುವಂತಾಗಿದೆ.

ಕಾರವಾರದಿಂದ ಬೆಂಗಳುರಿಗೆ ತೆರಳುವ ಖಾಸಗಿ ಬಸ್‌ಗಳು ಅಂಕೋಲಾಕ್ಕೆ ಬಂದು ಗೋಕರ್ಣಕ್ಕೆ ತೆರಳಿ ಅಲ್ಲಿಂದ ಮುಂದೆ ಸಾಗುತ್ತಿದ್ದವು. ಆದರೆ ಸೇತುವೆ ನಿರ್ಮಾಣಗೊಂಡಾಗ ಈ ಎಲ್ಲ ಬಸ್‌ಗಳು ಮಂಜಗುಣಿ–ಗಂಗಾವಳಿ ಸೇತುವೆ ಮೂಲಕವೇ ಸಂಚರಿಸುತ್ತಿವೆ. ಹೀಗಾಗಿ ಸಂಜೆಯಾಗುತ್ತಿದ್ದಂತೆ ಬಾರಿ ವಾಹನಗಳ ಸಂಚಾರ ಇಲ್ಲಿ ಕಂಡುಬರುತ್ತದೆ. ಹಾಗೇ ರಸ್ತೆ ಕಿರಿದಾಗಿರುವುದರಿಂದ ಟ್ರಾಫಿಕ್‌ಜಾಮ್ ಸಮಸ್ಯೆಯು ಕೂಡ ಉಂಟಾಗುತ್ತದೆ. ಇನ್ನು ವಿವಿಧ ಗ್ರಾಮಗಳಿಗೆ ಪ್ರಮುಖ ರಸ್ತೆಯಾಗಿರುವುದರಿಂದ ಅಲ್ಲಿಗೆ ತೆರಳುವ ವಾಹನಗಳು ಕೂಡ ಈ ಮಾರ್ಗವಾಗಿ ಅಲ್ಲಲ್ಲಿ ತೆರಳುತ್ತವೆ ಹೀಗಾಗಿ ರಸ್ತೆ ಕಿರಿದಾಗಿರುವುದರಿಂದ ಕೆಲವೊಮ್ಮೆ ಟ್ರಾಫಿಕ್‌ಜಾಮ್‌ನಿಂದಾಗಿ ವಾಹನ ಸವಾರರು ಕೂಡ ಸುಸ್ತಾಗುತ್ತಿದ್ದಾರೆ. ಇನ್ನು ಸಣ್ಣಪುಟ್ಟ ಅಪಘಾತಗಳು ಕೂಡ ನಡೆಯುವುದು ಸಾಮಾನ್ಯ ಎನ್ನುವಂತಾಗಿದೆ.

ದ್ವಿಚಕ್ರ ವಾಹನದ ಮೂಲಕ ಅಂಕೋಲಾದಿಂದ ಮಂಜಗುಣಿಗೆ ತೆರಳುತ್ತಿರುವ ಅಪ್ಪ ಮಗನಿಗೆ ಎದುರಿನಿಂದ ಬಂದ ಕಾರ್ ಸಿಂಗನಮಕ್ಕಿಯ ತಿರುವಿನಲ್ಲಿ ಡಿಕ್ಕಿ ಹೊಡೆದ ಪರಿಣಾಮ ಇಬ್ಬರ ಕಾಲು ಮೂಳೆಗಳು ಮುರಿದು ಆಸ್ಪತ್ರೆ ಸೇರುವಂತಾಗಿತ್ತು. ಹೀಗಾಗಿ ಸಂಬಂಧಪಟ್ಟ ಇಲಾಖೆಯವರು ಈ ಬಗ್ಗೆ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ.

## ಮೇ.11ರಂದು ರಾಯಚೂರಿನ ಐಟಿಐ ಕಾಲೇಜಿನಲ್ಲಿ ಶಿಶಿಕ್ಷು ಮೇಳ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಮೇ.06 : 2026–27ನೇ ಸಾಲಿನಲ್ಲಿ ಪಿ.ಎಮ್.ಎನ್.ಎ.ಎಮ್ ವತಿಯಿಂದ ನಗರದ ಮಾಣಿಕ ರಾಯಚೂರು ನಗರದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಮೇ.11ರ ಬೆಳಿಗ್ಗೆ 10ಗಂಟೆಗೆ ಶಿಶಿಕ್ಷು ಮೇಳವನ್ನು ಹಮ್ಮಿಕೊಳ್ಳಲಾಗಿದ್ದು, ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಕೋರಲಾಗಿದೆ.

ಈ ಶಿಶಿಕ್ಷು ಮೇಳದಲ್ಲಿ ವಿವಿಧ ಉದ್ದಿಮೆಗಳ ಪ್ರತಿನಿಧಿಗಳು ಭಾಗವಹಿಸುತ್ತಿದ್ದು, ಶಿಶಿಕ್ಷು ತರಬೇತಿಗಾಗಿ ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಳ್ಳುತ್ತಿರುವುದರಿಂದ ಐಟಿಐ ದ್ವಿತೀಯ ವರ್ಷದಲ್ಲಿ ತರಬೇತಿ ಪಡೆಯುತ್ತಿರುವ ಹಾಗೂ ಈಗಾಗಲೇ ಐಟಿಐ ಉತ್ತೀರ್ಣರಾದ ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳು ಈ ಮೇಳದಲ್ಲಿ ಭಾಗವಹಿಸಬಹುದಾಗಿದೆ. ಮೇಳದಲ್ಲಿ ಕೆ.ಪಿ.ಸಿ, ವೈ.ಟಿ.ಪಿ.ಎಸ್, ಟೋಯೋಟಾ, ಹೋಂಡಾ ಪ್ರೈವೇಟ್ ಲಿಮಿಟೆಡ್ ಕೋಲಾರ, ಕೇನ್ಸ ಟೆಕ್ನಾಲಜಿ ಇಂಡಿಯಾ ಲಿಮಿಟೆಡ್, ಎಲ್.ಎನ್.ಟಿ, ಜೆ.ಎಸ್,ಡಬ್ಲ್ಯೂ ಹಾಗೂ ಬೆಂಗಳೂರು ಮತ್ತು ಹೈದ್ರಾಬಾದ್ ನ ಪ್ರತಿಷ್ಠಿತ ಬಹುರಾಷ್ಟ್ರೀಯ (ಮಲ್ಟಿನ್ಯಾಷನಲ್) ಕಂಪನಿಗಳು ಭಾಗವಹಿಸಲಿವೆ.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ: 9036684778, 9035198134, 9538003397, 8904784507ಗೆ ಸಂಪರ್ಕ ಮಾಡಬಹುದಾಗಿದೆ ಅಥವಾ ರಾಯಚೂರು ನಗರದ ಮಾಣಿಕ್ ನಗರದ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗೆ ಕಚೇರಿಯ ಸಮಯದಲ್ಲಿ ಭೇಟಿ ನೀಡಿ, ಮಾಹಿತಿ ಪಡೆಯಬಹುದಾಗಿದೆ ಎಂದು ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಜತ ಮಹೋತ್ಸವ ಮತ್ತು ಹಳೆಯ ವಿದ್ಯಾರ್ಥಿಗಳ ಸಮ್ಮಿಲನ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮೇ 06 : ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಭೀಮರಾಯನಗುಡಿ ಕೃಷಿ ಮಹಾವಿದ್ಯಾಲಯ ಸಂಯುಕ್ತಾಶ್ರಯದಲ್ಲಿ ರಜತ ಮಹೋತ್ಸವ ಮತ್ತು ಹಳೆಯ ವಿದ್ಯಾರ್ಥಿಗಳ ಸಮ್ಮಿಲನ ಕಾರ್ಯಕ್ರಮವನ್ನು 2026ರ ಮೇ 8 ಮತ್ತು 9 ರಂದು ಬೆಳಿಗ್ಗೆ 10.30 ಗಂಟೆಗೆ ಭೀಮರಾಯನಗುಡಿ ಕೃಷಿ ಮಹಾವಿದ್ಯಾಲಯ ಪ್ರೇಕ್ಷಾಗೃಹ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪೂರ ಅವರು ರಜತ ಮಹೋತ್ಸವ ಮತ್ತು ಹಳೆಯ ವಿದ್ಯಾರ್ಥಿಗಳ ಸಮ್ಮಿಲನ ಕಾರ್ಯಕ್ರಮ ಅಧ್ಯಕ್ಷತೆ ವಹಿಸಿ ಉದ್ಘಾಟಿಸುವರು.

ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ಸಹ ಕುಲಾಧಿಪತಿಗಳು ಹಾಗೂ ಕೃಷಿ ಸಚಿವರಾದ ಶ್ರೀ ಎನ್.ಚಲುವರಾಯಸ್ವಾಮಿ ಅವರು ವಿದ್ಯಾರ್ಥಿನಿಯರ ನೂತನ ವಸತಿ ನಿಲಯ ಉದ್ಘಾಟಿಸುವರು. ಜೇವರ್ಗಿ ಶಾಸಕರು ಹಾಗೂ ಕಲಬುರಗಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಅಧ್ಯಕ್ಷರಾದ ಶ್ರೀ ಡಾ.ಅಜಯ ಧರ್ಮಸಿಂಗ್ ಅವರು ರಜತ ಮಹೋತ್ಸವ ಸ್ಮರಣ ಸಂಚಿಕೆ ಬಿಡುಗಡೆಗೊಳಿಸುವರು.

# ಸಾರ್ವಜನಿಕರಿಗೆ ಸರಿಯಾಗಿ ಗ್ಯಾಸ್ ಸಿಲಿಂಡರ್ ವಿತರಣೆಗೆ ಸೂಚನೆ ಎರಡು ಮಾಹೆಯ ಪಡಿತರ ಆಹಾರ ಧಾನ್ಯ ವಿತರಣೆಗೆ ಕ್ರಮ:ಜಿಲ್ಲಾಧಿಕಾರಿ ಹರ್ಷಲ್ ಭೋಯರ್

• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ**

ಮೇ:6:ಗ್ಯಾಸ್ ಏಜೆನ್ಸಿಯವರು ಸಾರ್ವಜನಿಕರಿಗೆ ಸರಿಯಾಗಿ ಗೃಹಬಳಕೆ ಗ್ಯಾಸ್ ಸಿಲಿಂಡರ್ ನನ್ನು ಸರಿಯಾಗಿ ಸರಬರಾಜು ಮಾಡಲು ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರುಸೂಚಿಸಿದರು .

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗ್ಯಾಸ್ ಏಜೆನ್ಸಿದಾರರೊಂದಿಗೆ ಸಭೆ ನಡೆಸಿದ ಅವರು, ಅನಧಿಕೃತವಾಗಿ ಮಾರಾಟ , ದರ ಹೆಚ್ಚಳ ಮಾಡಿ ಗ್ಯಾಸ್ ಸಿಲಿಂಡರ್ ಮಾರಾಟ ಮಾಡಿದರೆ ಅಗತ್ಯ ವಸ್ತುಗಳ ಕಾಯಿದೆ 1955 ಮತ್ತು ಪೆಟ್ರೋಲಿಯಂ ವಸ್ತುಗಳ ಸಂಗ್ರಹ, ಬಳಕೆ ಕಾಯಿದೆ 1999 ಅಡಿ ಕರ್ಮವಹಿಸಲಾಗುವುದು ಎಂದು ಎಚ್ಚರಿಕೆ ನೀಡಿದರು ,

ಆಹಾರ ಇಲಾಖೆ ಉಪನಿರ್ದೇಶಕರಾದ ಸೋಮಶೇಖರ ಬಿರಾದಾರ , ಎಲ್ಲಾ 18 ಏಜೇನ್ಸಿಯವರು ಆಹಾರ ಇಲಾಖೆ ತಾಲೂಕಾ ಮಟ್ಟದ ಸಿಬ್ಬಂದಿಗಳು ಈ ಸಂದರ್ಭದಲ್ಲಿ ಹಾಜರಿದ್ದರು.

ಎರಡು ಮಾಹೆಗಳ ಆಹಾರ ಧಾನ್ಯ ವಿತರಣೆಗೆ ಕ್ರಮ ಪಡಿತರ ಚೀಟಿದಾರರ ಗಮನಕ್ಕೆ

ಕೇಂದ್ರಸರ್ಕಾರವು ದೇಶದಲ್ಲಿ ಮುಂಬರುವ ಖರೀದಿ ಋತುವಿನ ಹಿನ್ನಲೆಯಲ್ಲಿ ಮತ್ತು ಪರಿಣಾಮಕಾರಿ ಲಾಜಿಸ್ಟಿಕ್ಸ್ ಮತ್ತು ಸಂಗ್ರಹಣೆಗಾಗಿ ರಾಜ್ಯಗಳು ಎದುರಿಸುತ್ತಿರುವ ಅಡಚಣೆಗಳಿಂದಾಗಿ ಎನ್‌ಎಫ್‌ಎಸ್ ಅಡಿಯಲ್ಲಿ ಮೇ ಮತ್ತು ಜೂನ್–2026 ರ ಎರಡು ಮಾಹೆಗಳ ವರೆಗಿನ ಆಹಾರಧಾನ್ಯ ಹಂಚಿಕೆಯನ್ನು ಮುಂಗಡವಾಗಿ ಎತ್ತುವಳಿ ಮಾಡಿ ಕೂಡಲೇ ವಿತರಣೆ ಮಾಡುವಂತೆ ರಾಜ್ಯಗಳಿಗೆ ಸೂಚಿಸಿಲಾಗಿರುತ್ತದೆ.



ಪ್ರಯುಕ್ತ ಮೇ–2026 ಮತ್ತು ಜೂನ್–2026 ರ ಎರಡು ಮಾಹೆಗಳ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ (ಎನ್‌ಎಫ್‌ಎಸ್‌ಎ) ಹಂಚಿಕೆಯನ್ನು ಮೇ–2026ರ ಮಾಹೆಯಲ್ಲಿ ವಿತರಿಸಲು ಸರ್ಕಾರವು ನಿರ್ದೇಶನ ನೀಡಿದೆ.

ಪ್ರಯುಕ್ತಯಾದಗಿರಿ ಜಿಲ್ಲೆಯ ಪ್ರತಿ ಅಂತ್ಯೋದಯ (ಎಎವೈ) ಪಡಿತರ ಚೀಟಿಗೆ 70 ಕೆ.ಜಿ (ಮೇ–35 + ಜೂನ್ –35) ಅಕ್ಕಿ ಮತ್ತು ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 10 ಕೆ.ಜಿ (ಮೇ– 5 + ಜೂನ್–5) ಉಚಿತವಾಗಿ ವಿತರಿಸಲಾಗುತ್ತದೆ.

ಮೇ ಮತ್ತು ಜೂನ್ 2026 ರ ಎರಡು ಮಾಹೆಗಳ ಆಹಾರಧಾನ್ಯವನ್ನು ಒಟ್ಟಿಗೆ ವಿತರಣೆ ಮಾಡಬೇಕಾಗಿರುವುದರಿಂದ ವಿತರಣಾ ಸಂದರ್ಭದಲ್ಲಿ ಪ್ರತಿ ಮಾಹೆಯ ವಿತರಣೆಗೆ ಫಲಾನುಭವಿಗಳಿಂದ ಪ್ರತ್ಯೇಕ ಬಯೋ ಮೆಟ್ರಿಕ್ ಪಡೆಯುವ ಅವಕಾಶ ಕಲ್ಪಿಸಲಾಗಿರುತ್ತದೆ.

ಆದ್ದರಿಂದ ಪಡಿತರ ಚೀಟಿ ಫಲಾನುಭವಿಗಳು ಎರಡು ಬಾರಿ ಬಯೋ ಮೇಟ್ರಿಕ್ ನೀಡಿ ಆಹಾರಧಾನ್ಯವನ್ನು ಪಡೆಯಲು ಜಿಲ್ಲೆಯ ಎಲ್ಲಾ ಪಡಿತರ ಚೀಟಿ–ದಾರರಿಗೆ ತಿಳಿಯಪಡಿಸಿದೆ.

ಮುಂದುವರೆದು ರಾಜ್ಯ ಸರ್ಕಾರದ ಮಹತ್ವ ಯೋಜನೆಯಾದ ಅನ್ನಭಾಗ್ಯ ಯೋಜನೆಯಡಿ ರಾಜ್ಯಸರ್ಕಾರದ ವತಿಯಿಂದ ವಿತರಿಸಲಾಗುತ್ತಿರುವ ಹೆಚ್ಚುವರಿ 05 ಕೆ.ಜಿ ಆಹಾರಧಾನ್ಯವನ್ನು ಮೇ ಮತ್ತು ಜೂನ್–2026 ರ ಮಾಹೆಗಳ ಆಹಾರಧಾನ್ಯವನ್ನು ಆದ್ಯತಾ ಮತ್ತು ಅಂತ್ಯೋದಯ ಪಡಿತರ ಚೀಟಿಯ ಫಲಾನುಭವಿಗಳಿಗೆ ಈಗಾಗಲೇ ವಿತರಿಸುವ ರೀತಿಯಲ್ಲಿ ಜೂನ್–2026 ರ ಮಾಹೆಯಲ್ಲಿ ಎತ್ತುವಳಿ ಮಾಡಿ ವಿತರಿಸಲು ಸರ್ಕಾರವು ನಿರ್ದೇಶಿಸಿದೆ.

ಒಂದು ರಾಷ್ಟ್ರ ಒಂದು ಪಡಿತರ ಚೀಟಿ (ಅಂತರ್ ರಾಜ್ಯ ಅಂತ ಜಿಲ್ಲೆ) ಪೋರ್ಟೆಬಿಲಿಟಿ ಜಾರಿಯಲ್ಲಿರುವುದರಿಂದ ಯಾವುದೇ ರಾಜ್ಯದ ಪಡಿತರ ಚೀಟಿದಾರರು ಯಾವುದೇ ವರ್ಗದ ಪಡಿತರ ಚೀಟಿದಾರರು ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರವನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಯಾವುದೇ ನ್ಯಾಯಬೆಲೆ ಅಂಗಡಿಕಾರರು ಕಡಿಮೆ ಪ್ರಮಾಣದ ಪಡಿತರವನ್ನು ವಿತರಣೆ ಮಾಡಿದ್ದಲ್ಲಿ, ಹಣ ಕೇಳಿದ್ದಲ್ಲಿ ಮತ್ತು ಇತರೆ ದೂರುಗಳಿಗೆ ನಿಶುಲ್ಕ ಸಹಾಯವಾಣಿ ಸಂ–ಖ್ಯೆ 1967ಗೆ ಹಾಗೂ ತಾಲ್ಲೂಕಿನಲ್ಲಿರುವ ತಹಶೀಲ್ದಾರರ ಕಛೇರಿಗೆ ಅಥವಾ ಜಿಲ್ಲೆಯ ಉಪ ನಿರ್ದೇಶಕರ ಕಛೇರಿಗೆ ದೂರನ್ನು ಸಲ್ಲಿಸಬಹುದಾಗಿದೆ.ಸದರಿ ಯೋಜನೆಯಡಿ ವಿತರಿಸಲಾದ ಆಹಾರ ಧಾನ್ಯಗಳನ್ನು ಹಣಕ್ಕಾಗಿ ಪಡಿತರ ಚೀಟಿದಾರರು ಮಾರಾಟ ಮಾಡುವುದಾಗಲಿ ಅಥವಾ ಸಂಗ್ರಹಣೆ ಮಾಡುವುದು ಕಂಡುಬಂದಲ್ಲಿ ಅಂತಹ ಪಡಿತರ ಚೀಟಿದಾರರಿಗೆ ವಿತರಿಸಲಾದ ಆಹಾರ ಧಾನ್ಯಗಳಿಗೆ ಮುಕ್ತ ಮಾರುಕಟ್ಟೆ ದರಕ್ಕೆ ದಂಡ ವಿಧಿಸಲಾಗುವುದು ಮತ್ತು ಸದರಿ ಪಡಿತರ ಚೀಟಿಯನ್ನು ಆರು ತಿಂಗಳ ಅವಧಿಗೆ ಅಮಾನತ್ತುಗೊಳಿಸಲಾವುದೆಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ

## ಉತ್ತೀರ್ಣರಾದ ವಿದ್ಯಾರ್ಥಿಗಳಂತೆ ಅನುತ್ತೀರ್ಣರಾದ ವಿದ್ಯಾರ್ಥಿಗಳ ಬಗ್ಗೆಯೂ ವಿಶೇಷ ನಿಗಾ ವಹಿಸಿ ಮುಂದಿನ ವರ್ಷ ಪ್ರತಿಶತ ನೂರರಷ್ಟು ಫಲಿತಾಂಶ ತನ್ನಿ:ಶಾಸಕ ಚೆನ್ನಾರೆಡ್ಡಿ ಪಾಟೀಲ್ ತುನ್ನೂರ

• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ**

ಮೇ:6: ಜಿಲ್ಲಾಡಳಿತ , ಜಿಲ್ಲಾ ಪಂಚಾಯತ್ ಹಾಗೂ ಶಾಲಾ ಶಿಕ್ಷಣ ಇಲಾಖೆ ವತಿಯಿಂದ 2025–26 ನೇ ಸಾಲಿನ ಎಸ್ಸೆಸ್ಸೆಲ್ಸಿ ವಾರ್ಷಿಕ ಪರೀಕ್ಷೆ–1 ರಲ್ಲಿ ಪ್ರತಿಶತ ಫಲಿತಾಂಶ ಪಡೆದ ಶಾಲೆಗಳ ಶಿಕ್ಷಕರು ಹಾಗೂ ಉತ್ತಮ ಸಾಧನೆಗೈದ ವಿದ್ಯಾರ್ಥಿಗಳಿಗೆ ಅಭಿನಂದನಾ ಸಮಾರಂಭವನ್ನು ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಇಂದು ಹಮ್ಮಿಕೊಳ್ಳಲಾಯಿತು.



ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಶಾಸಕ ಚೆನ್ನಾರೆಡ್ಡಿ ಪಾಟೀಲ್ ತುನ್ನೂರ ಅವರು, ಈ ಪರೀಕ್ಷೆಯಲ್ಲಿ ಸಾಧನೆಗೈದ ವಿದ್ಯಾರ್ಥಿಗಳಿಗೆ ಶುಭ ಹಾರೈಸಿದ ಅವರು ಅನುತ್ತೀರ್ಣರಾದ ವಿದ್ಯಾರ್ಥಿಗಳನ್ನೂ ಗುರುತಿಸಿ,ತರಬೇತಿಗೊಳಿಸಿ ಮುಂದೆ ಸಾಧನೆ ಮಾಡುವಂತೆ ಪ್ರೇರೇಪಿಸಲು ಹಾಗೂ ಮುಂದಿನ ವರ್ಷ ಜಿಲ್ಲೆಯಾದ್ಯಂತಶೇ. ನೂರು ರಷ್ಟು ಫಲಿತಾಂಶ ತರಲು ಪ್ರಯತ್ನಿಸುವಂತೆ ಶಿಕ್ಷಣ ಇಲಾಖೆ ಅಧಿಕಾರಿಗಳು ಮತ್ತು ಶಿಕ್ಷಕರಿಗೆ ಸಲಹೆ ನೀಡಿದರು.ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರು, ಈ ವರ್ಷ ಜಿಲ್ಲೆಗೆ ಹರ್ಷ ತಂದಿದೆ.ನಾಲ್ವರು ಯುಪಿಎಸ್ಸಿಯಲ್ಲಿ ಯಶಸ್ವಿಯಾಗಿರುವುದು ಹಾಗೂ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಜಿಲ್ಲೆಯ 86 ಶಾಲೆಗಳು ಶೇ . ನೂರರಷ್ಟು ಫಲಿತಾಂಶ ತಂದಿರುವುದಕ್ಕೆ ವಿದ್ಯಾರ್ಥಿಗಳು, ಶಿಕ್ಷಕರು, ಶಿಕ್ಷಣ ಇಲಾಖೆ ಅಧಿಕಾರಿ ಸಿಬ್ಬಂದಿಗಳ ತಂಡಕ್ಕೆ ಅಭಿನಂದಿಸಿದರು. ಮಾನ್ಯ ಶಿಕ್ಷಣ ಸಚಿವರು ಸಹ ಜಿಲ್ಲೆಯ ಸಾಧನೆ ಬಗ್ಗೆ ಪ್ರಶಂಸೆವ್ಯಕ್ತಪಡಿಸಿದ್ದು,ಮುಂದಿನ ವರ್ಷಗಳಲ್ಲಿ ಎಲ್ಲಾ ಶಾಲೆಗಳಲ್ಲಿ ಪ್ರತಿಶತ ನೂರರಷ್ಟು ಫಲಿತಾಂಶ ತರಲು ಪ್ರಯತ್ನಿಸಬೇಕು ಎಂದು ಹೇಳಿದರು.ವಿದ್ಯಾರ್ಥಿಗಳು ಭವಿಷ್ಯತ್ತಿನ ಸವಾಲುಗಳನ್ನು ಮೆಟ್ಟಿನಿಲ್ಲುವ ದಿಸೆಯಲ್ಲಿ ಅವರನ್ನು ಸನ್ನದ್ಧಗೊಳಿಸಬೇಕು. ಉದ್ಯೋಗವನ್ನು ಸಕಾಲಕ್ಕೆ ಅವರು ಪಡೆಯಲು ಅನುಕೂಲವಾಗುವಂತೆ, ಆಧುನಿಕ ತಂತ್ರಜ್ಞಾನದ ಯುಗದಲ್ಲಿ ಇಂದು ತಾಂತ್ರಿಕ ಕೌಶಲ್ಯ ಹೆಚ್ಚಿಸುವ ಕಾರ್ಯ ಪರಿಣಾಮಕಾರಿಯಾಗಿ ಆಗಬೇಕು. ಇಂಟರ್ನೆಟ್ ಕ್ರಾಂತಿಕಾರಿ ಮತ್ತು ಸದೃಢ ಟೂಲ್ ಆಗಿರುವುದರಿಂದ ಶಿಕ್ಷಕರು ತಮ್ಮನ್ನು ತಾವು ಅಪ್ಡೇಡ್ ಮಾಡಿಕೊಳ್ಳುವ ಜೊತೆಗೆ ಆಸಕ್ತ ವಿದ್ಯಾರ್ಥಿಗಳ ತಾಂತ್ರಿಕ ಕೌಶಲ್ಯತೆ ಹೆಚ್ಚಿಸಲು ಪ್ರಯತ್ನಿಸಬೇಕು. ಮೊಬೈಲ್, ಮೊಬೈಲ್ ಆಪ್ಗಳು ಮತ್ತು ಅಂತರ್ಜಾಲ ವ್ಯವಸ್ಥೆಗಳ ಸದ್ಬಳಕೆಗೆ ಅವರ ಕೌಶಲ್ಯತೆಗೆ ತಕ್ಕಂತೆ ಸಶಕ್ತಗೊಳಿಸಬೇಕು ಎಂದು ಅವರು ಹೇಳಿದರು.

ವಿದ್ಯಾರ್ಥಿಗಳು ಜಾಗತಿಕ ಮಟ್ಟದ ಸ್ಪರ್ಧೆ ಎದುರಿಸಲು ಸಶಕ್ತರಾಗಿರುವದರಿಂದ ಅವರ ಭವಿಷ್ಯದ ಹಿತದೃಷ್ಟಿಯಿಂದ ದೂರದೃಷ್ಟಿಯುಳ್ಳ ಯೋಜನೆಗಳನ್ನು ರೂಪಿಸಲು ಅವರು ಸಲಹೆ ನೀಡಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ ಅವರು, ಈ ಬಾರಿಯ ಪರೀಕ್ಷೆಯಲ್ಲಿ ಶೇ 91.8 ರಷ್ಟು ಪಾಸಿಂಗ್ ಫಲಿತಾಂಶ ಬಂದಿದೆ. ಕಳೆದ ಬಾರಿ ಫಲಿತಾಂಶದಲ್ಲಿ ಕೊನೆಯಲ್ಲಿದ್ದ ಈ ಜಿಲ್ಲೆ ಈ ಬಾರಿ ರ್ಯಾಂಕಿಂಗ್ ಸ್ಥಾನದಲ್ಲಿ ಸುಧಾರಣೆ ಕಂಡುಕೊಂಡಿದೆ. ಶಿಕ್ಷಣ ಸಚಿವರು ಸಹ ಪ್ರಶಂಸೆ ವ್ಯಕ್ತಪಡಿಸಿದ್ದಾರೆ. ಇದಕ್ಕಾಗಿ ಡಿಡಿಪಿಐ ಚನ್ನಬಸಪ್ಪ ಮುಧೋಳ ಅವರ ಅವಿರತ ಪರಿಶ್ರಮದ ಬಗ್ಗೆ ಪ್ರಶಂಸಿಸಿದ ಅವರು, ಸಮಾಜದಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿನಿಯರಿಗೆ ಬಾಲ್ಯ ವಿವಾಹದಂತಹ ಶಿಕ್ಷೆ ಹಾಗೂ ವಿದ್ಯಾರ್ಥಿಗಳಿಗೆ ಅನೈತಿಕ ಚಟುವಟಿಕೆಗಳಲ್ಲಿ ತೊಡಗಲು ಕಾರಣವಾಗುವುದರಿಂದ, ಇಂತಹ ವಿದ್ಯಾರ್ಥಿಗಳ ಬಗ್ಗೆಯೂ ವಿಶೇಷ ನಿಗಾವಹಿಸಿ,ಅವರಿಗೆ ಪ್ರೋತ್ಸಾಹಿಸುವಂತೆ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಅವರು ಸೂಚಿಸಿದರು.

ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಶ್ರೀ ಪೃಥ್ವಿಕ್ ಶಂಕರ್ ಅವರು, ಜಿಲ್ಲೆಯಲ್ಲಿ ಶೈಕ್ಷಣಿಕ ಕ್ಷೇತ್ರದಲ್ಲಿ ಬದಲಾವಣೆ ಆಗುತ್ತಿದೆ. ಈ ಜಿಲ್ಲೆಯಲ್ಲಿ ಖಾಸಗಿ ಶಾಲೆಗಳ ಪ್ರಮಾಣ ಕಡಿಮೆ ಇದ್ದರೂ ವಿದ್ಯಾರ್ಥಿಗಳು ಅಭೂತಪೂರ್ವ ಸಾಧನೆ ಮಾಡಿದ್ದಾರೆ. ಜಿಲ್ಲೆಯಲ್ಲಿ ಉತ್ತಮ ಫಲಿತಾಂಶ ಬಂದಿದೆ. ವಿದ್ಯಾರ್ಥಿಗಳಿಗೆ ಆಧುನಿಕ ತಂತ್ರಜ್ಞಾನಕ್ಕೆ ಅನುಗುಣವಾಗಿ ಅವರ ಭವಿಷ್ಯ ರೂಪಿಸುವಂತೆ ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಪ್ರೌಢ ಶಾಲಾ ಸಹ ಶಿಕ್ಷಕರ ಸಂಘದ ಅಧ್ಯಕ್ಷ ಅಶೋಕ ಕೆಂಭಾವಿ ಮಾತನಾಡಿದರು. ಡಿಡಿಪಿಐ ಚನ್ನಬಸಪ್ಪ ಮುಧೋಳ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಶ್ರೀ ಚನ್ನಬಸಪ್ಪ ಉಪಸ್ಥಿತರಿದ್ದರು. ಅತೀ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ, ಶೇ ನೂರು ರಷ್ಟು ಫಲಿತಾಂಶ ತಂದ ಮುಖ್ಯ ಶಿಕ್ಷಕರಿಗೆ , ಅತಿಥಿ ಶಿಕ್ಷಕರಿಗೆ ಸನ್ಮಾನಿಸಲಾಯಿತು. ಜಿಲ್ಲಾ ನೋಡಲ್ ಅಧಿಕಾರಿ ಹನುಮಂತ ಅವರು ಸ್ವಾಗತಿಸಿದರು. ಕಿಶನ್ ಪವಾರ್ ಕಾರ್ಯಕ್ರಮ ನಿರೂಪಿಸಿದರು.ಶ್ರೀಮತಿ ಸಂಗೀತಾ ಪ್ರಾರ್ಥಿಸಿದರು.

## ಹಂಪಾದೇವನಹಳ್ಳಿ ವಿಜಯನಗರ ಕಾಲದ ಶಾಸನ ಪತ್ತೆ

• **ಮಲ್ಲಮ್ಮ ನುಡಿ ವಾರ್ತೆಕಂಪ್ಲಿ**

ಮೇ.6:ತಾಲೂಕಿನಹಂಪಾದೇವನಹಳ್ಳಿ ಗ್ರಾಮದಲ್ಲಿ ಐತಿಹಾಸಿಕ ವಿಜಯನಗರ ಸಾಮ್ರಾಜ್ಯದ ಶ್ರೀಕೃಷ್ಣದೇವರಾಯನಿಗೆ ಸಂಬಂಧಿಸಿದ ಶಾಸನ

ಪತ್ತೆಯಾಗಿದೆ. ಹಂಪಾದೇವನಹಳ್ಳಿ ಗ್ರಾಮದ ಪಶ್ಚಿಮ ದಿಕ್ಕಿಗೆ 200 ಮೀಟರ್ ಅಂತರದ ನಾರಿಹಳ್ಳ ಹರಿಯುವಾ ಹಳ್ಳ ದಂಡೆ ಮೇಲೆ ಆಪ್ರಕಟಿತ ಶಾಸನ ಕಂಡುಬಂದಿದೆ. ವಿಜಯನಗರ ಸಾಮ್ರಾಜ್ಯದ ಕಾಲಕ್ಕೆ ಸೇರಿದ ಸುಮಾರು16ನೇ ಶತಮಾನದ ಅಪರೂಪದ ಶಾಸನ ಪತ್ತೆಯಾಗಿದೆ. ಇದು ಇತಿಹಾಸಾಸಕ್ತರಲ್ಲಿ ವಿಶೇಷ ಕುತೂಹಲ ಮೂಡಿಸಿದೆ.



ಕೊಪ್ಪಳ ತಾಲೂಕಿನ ಹಿಟ್ನಾಳ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಇತಿಹಾಸ ಉಪನ್ಯಾಸಕರಾದ ಕೆ ಅಂಜಿನಯ್ಯ (ಜೀರಿಗನೂರು ಗ್ರಾಮ ) ಅವರು ಈ ಮಹತ್ವದ ಶಾಸನವನ್ನು ಶೋಧನೆ ಮಾಡಿ ಪತ್ತೆ ಮಾಡಿದ್ದಾರೆ ಹಾಗೂ ಈ ಶಾಸನದ ಸಾಲುಗಳನ್ನು ಇವರು ಪ್ರಾಥಮಿಕ ಹಂತದಲ್ಲಿ ಓದಿ ಅರ್ಥೈಸಿದ್ದಾರೆ ಮತ್ತು ಹಂಪದೇವನಹಳ್ಳಿ ಇತಿಹಾಸದ ಹಿರಿಮೆ ಗರಿಮೆ ಮುಡಿಸಿದ್ದಾರೆ.

ಲಿಪಿ ಮತ್ತು ಭಾಷೆ, ಕಲ್ಲನ್ನು ಗಮನಿಸಿದರೆ ಇದು 16ನೆಯ ಶತಮಾನದ್ದು ಅಂದರೆ ವಿಜಯನಗರ ಸಾಮ್ರಾಜ್ಯದ ಕಾಲದ್ದು ಎಂದು ಭಾವಿಸಲಾಗಿದೆ ಹಾಗೂ ಕನ್ನಡ ಭಾಷೆ ಮತ್ತು ಕನ್ನಡ ಲಿಪಿ ಹೊಂದಿರುವ ಶಾಸನವಾಗಿದೆ. ಈ ಶಾಸನದ ತಿಳಿಯಲು ಭಾರತೀಯ ಪುರಾತತ್ವ ಸರ್ವೇಕ್ಷಣೆ ಇಲಾಖೆಯ ಶಾಸನ ತಜ್ಞರಾದ ಡಾ.ನಾಗರಾಜಪ್ಪ ಅವರು ಮತ್ತು ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಸಂಡೂರಿನ ಸಹಾಯಕ ಪ್ರಾಧ್ಯಾಪಕರಾದ ತಳವಾರ ನರಸಿಂಹ ಅವರು ಈ ಶಾಸನ ಪಾಠವನ್ನು ಓದಿ ಅರ್ಥೈಸಿ ಕೊಟ್ಟಿದ್ದಾರೆ. ಈ ಶಾಸನದಲ್ಲಿ ಬರೆದಿರುವ ಮೂರು ಸಾಲುಗಳ ಉಲ್ಲೇಖ

"ಶ್ರೀ ಕೃಷ್ಣರಾಯ ಪುರವೆಂ

ದು ಪ್ರತಿ ನಾಮವಾದ ಹಂಪಾದೇವಿ ಹಳಿಯ ಹೊಲಮೆರೆ" ಎಂದು ಉಲ್ಲೇಖವಿದೆ. ಈಗಾಗಲೇ ಉಲ್ಲೇಖಗೊಂಡಿರುವ ಶ್ರೀಕೃಷ್ಣದೇವರಾಯನ ಹಂಪದೇವನಹಳ್ಳಿ ಶಾಸನದ ಪ್ರಕಾರ ಶಾಲಿವಾಹನ ಶಕವರ್ಷ 1433ನೆಯ ಪ್ರಜಾಪತಿ, ಚೈತ್ರ, ಶು.13 ಬುಧವಾರ (ಕ್ರಿ.ಶ.12–3–1511)ದಂದು ಕೃಷ್ಣರಾಯನು ನಾನಾ ಗೋತ್ರದ ಮಹಾಜನಗಳೆಗೆ ನಾರಿಸೀಮೆಯ ಹಂಪದೇವಹಳ್ಳಿಯನ್ನು ಕೃಷ್ಣರಾಯಪುರವೆಂದು ಮರುನಾಮಕರಣ ಮಾಡಿ ದಾನ ನೀಡಿರುವ ಹಂಪಾದೇವನಹಳ್ಳಿ ಶಾಸನದಲ್ಲಿ ಉಲ್ಲೇಖವಾಗಿದೆ ಹಾಗೂ ನಾರಿ ಹಳ್ಳ ದಂಡೆಯ ಮೇಲೆ ವಿಷ್ಣುವಿನ ಅಗ್ರಹಾರವನ್ನು ನಿರ್ಮಿಸಿದ್ದಾನೆ ಮತ್ತು ಈ ಶಾಸನಕ್ಕೂ ಮತ್ತು ನೂತನ ಪತ್ತೆ ಮಾಡಿದ ಶಾಸನಕ್ಕೂ ಸಂಬಂಧವಿದೆ.ಶಾಸನದ ಮೇಲ್ಭಾಗದ ಎಡ ಮತ್ತು ಬಲಭಾಗದಲ್ಲಿ ಸೂರ್ಯ ಮತ್ತು ಚಂದ್ರನ ಚಿಹ್ನೆಗಳನ್ನು ಕೆತ್ತಲಾಗಿದೆ. ಶಾಸನದ ಕೆಳ ಹಂತದಲ್ಲಿ ವಿಷ್ಣುವಿನ ಮೂರನೇ ಅವತಾರ ವಾಮನ ಚಿತ್ರ ಕೆತ್ತಲಾಗಿದೆ ಕಾರಣ ಕೃಷ್ಣದೇವರಾಯ ವಿಷ್ಣುವಿನ ಆರಾಧಕನಾಗಿದ್ದನು ಇದು ವಿಶೇಷವಾದ ಶಾಸನವಾಗಿದೆ. ವಿಷ್ಣುವಿನ ಅವತಾರ ವಾಮನು ತನ್ನ ಎಡ ಮತ್ತು ಬಲ ಕೈಯಲ್ಲಿ ಕಮಂಡಲು ಮತ್ತು ಛತ್ರಿ ಹಿಡಿದಿದ್ದಾನೆ ಆತನ ಸಂಪ್ರದಾಯಿಕ ವಸ್ತ್ರಗಳನ್ನು ಧರಿಸಿದ್ದಾನೆ ,ಈ ಚಿತ್ರದ ಉದ್ದೇಶ ವಾಮನ ಬಲಿ ಚಕ್ರವರ್ತಿ ತುಳಿದು ಭೂಮಂಡಲದ ಅಧಿಪತಿಯಾದ ಸಂಗತಿ ಅದೇ ರೀತಿಯಾಗಿ ಅದೇ ಹಂಪ ದೇವನಹಳ್ಳಿಯ ವಿಷ್ಣು ಪ್ರತಿರೂಪ ವಾಮನಿಗೆ ಹೊಲಮೆರೆ ಭೂಮಿಯನ್ನು ದಾನ ಅರ್ಪಿಸಿದ ಭಾವ ಅರ್ಥ ತೋರುಸ್ತದೆ.

ಈ ಶಾಸನ ಸುಮಾರು ಐದು ಅಡಿ ಎತ್ತರ ,2 ಅಡಿ ಅಗಲವಿರುವ ಈ ಬೃಹತ್ ಗಾತ್ರದ ಬಿಳಿ ಗ್ರಾನೈಟ್ ಕಲ್ಲು ಬಂಡೆಯ ಮೇಲೆ ಮೂರು ಫಲಕಗಳನ್ನು ಒಳಗೊಂಡಿದ್ದು ಹಾಗೂ ಮೂರು ಸಾಲುಗಳ ಶಾಸನ ಬರೆಯಲಾಗಿದೆ. ಮೊದಲನೇ ಶಾಸನದ ಮೇಲ್ಭಾಗದಎಡ ಮತ್ತು ಬಲಭಾಗದಲ್ಲಿ ಸೂರ್ಯ ಮತ್ತು ಚಂದ್ರನ ಚಿಹ್ನೆಗಳನ್ನು ಕೆತ್ತಲಾಗಿದೆ ಎರಡನೇ ಭಾಗ ಮೂರು ಸಾಲುಗಳ ಶಾಸನ ಹಾಗೂ ಮೂರನೇ ಭಾಗದ ಹಂತದಲ್ಲಿ ವಿಷ್ಣುವಿನ ಮೂರನೇ ಅವತಾರ ವಾಮನ ಚಿತ್ರವನ್ನು ಕೆತ್ತಲಾಗಿದೆ. ಈ ಒಂದು ಶಾಸನ ಇಡೀ ವಿಜಯನಗರ ಸಾಮ್ರಾಜ್ಯದಲ್ಲಿ ಒಂದು ವಿಶೇಷವಾದ ಶಾಸನವಾಗಿದೆ ಗ್ರಾಮದ ಪದನಾಮ ವಿಶೇಷ ಮತ್ತು ವಾಮನ ಚಿತ್ರ ಇರುವ ಸಂಗತಿ ವಿಶೇಷವಾಗಿದೆ. ಹಂಪ ದೇವನಹಳ್ಳಿ ಗ್ರಾಮದ ಯುವಕರಾದ ಕರಿಬಸವ, ಉಮೇಶ್, ಪ್ರವೀಣ್ ಅವರು ಈ ಶಾಸನ ಪತ್ತೆ ಹಚ್ಚಲು ಹಾಗೂ ಗುರುತಿಸುವುದರಲ್ಲಿ ಸಂರಕ್ಷಣೆ ಸಹಾಯಕರಾಗಿ ಕೈಜೋಡಿಸಿದ್ದಾರೆ.

## ತ್ಯಾಜ್ಯ ನಿರ್ವಹಣೆಯಲ್ಲಿ ಯುವಜನತೆ ತೊಡಗಿಸಿಕೊಳ್ಳಬೇಕು

• **ಮಲ್ಲಮ್ಮ ನುಡಿ ವಾರ್ತೆ ಹುಣಸೂರು**

ಮೇ–6; " ಭಾರತದ ಪ್ರತಿಯೊಬ್ಬ ನಾಗರಿಕನ ಮೂಲಭೂತ ಕರ್ತವ್ಯದಲ್ಲಿ ಮೊದಲಿಗೆ "ಅರಣ್ಯಗಳು, ಸರೋವರಗಳು, ನದಿಗಳು ಮತ್ತು ವನ್ಯಜೀವಿಗಳು ಸೇರಿದಂತೆ ನೈಸರ್ಗಿಕ ಪರಿಸರವನ್ನು ಸಂರಕ್ಷಿಸುವುದು ಹಾಗೂ ಅಭಿವೃದ್ಧಿಗೊಳಿಸುವುದು ಮತ್ತು ಪ್ರಾಣಿಗಳಿಗೆ ಅನುಕಂಪ ತೋರಿಸುವುದ"ಕ್ಕೆ ಮೊದಲ ಅದ್ಯತೆ ನೀಡಬೇಕು ಎಂದು ಔಟ್ ರೀಚ್ ಸಂಸ್ಥೆಯ ತರಬೇತಿ ಸಂಯೋಜಕ ಜಿ.ಎಸ್. ಜಗದೀಶ ಸಲಹೆ ನೀಡಿದರು.




ತಾಲ್ಲೂಕಿನ ಹನಗೋಡು ಹೊಬಳಿಯ ಶೆಟ್ಟಹಳ್ಳಿ ಹಾಡಿ ಗಿರಿಜನ ಆಶ್ರಮ ಶಾಲೆಯಲ್ಲಿ ಬೆಂಗಳೂರಿನ ಆಚಾರ್ಯ ಪದವಿ ಅಧ್ಯಯನ ಸಂಸ್ಥೆ ಏರ್ಪಡಿಸಿದ ವಾರ್ಷಿಕ ಸಮಾಜ ಕಾರ್ಯ ಶಿಬಿರದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿ "ತ್ಯಾಜ್ಯ ನಿರ್ವಹಣೆ" ಕುರಿತಾಗಿ ಮಾತನಾಡಿದವರು ನಾವುಗಳ ಪ್ರತಿನಿತ್ಯ ತ್ಯಾಜ್ಯದ ಸಮಸ್ಯೆಯನ್ನು ಎದುರಿಸುತ್ತಿದ್ದೇವೆ, ಅದರಲ್ಲೂ ಪ್ಲಾಸ್ಟಿಕ್ ಎಂಬುದು ಹೆಮ್ಮರವಾಗಿ ಬೆಳೆಯ ಜೀವ ಸಂಕುಲಕ್ಕೆ ಮಾರಕವಾಗುತ್ತಿದೆ. ಪ್ಲಾಸ್ಟಿಕ್ ಮುಕ್ತ ಮಾಡಬೇಕಾದರೆ ಯುವಜನತೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿ ತ್ಯಾಜ್ಯ ನಿರ್ವಹಣೆಯಲ್ಲಿ ತೊಡಗಿಸಿಕೊಳ್ಳಬೇಕಾಗಿದೆಂದರು.

5ಬಗೆಯ ತ್ಯಾಜ್ಯಗಳಿವೆ.;– ಘನ, ದ್ರವ, ಆಪಾಯಕಾರಿ, ಮೇಡಿಕಲ್ ಕಿಟ್ಸ್ ಹಾಗೂ ಇ–ವೆಸ್ಟ್‌ಗಳಾಗಿವೆ. ಇವುಗಳನ್ನು ಸಾಧ್ಯವಾದ ಮಟ್ಟಿಗೆ ಶುದ್ಧಿಕರಿಸಿ ಮರುಬಳಕೆ ಮಾಡಲಾಗುತ್ತಿದೆ. ಏಕ ಬಳಕೆಯ ಪ್ಲಾಸ್ಟಿಕ್ ನಿರ್ಮೂಲನೆ ಮಾಡಲು ರಸ್ತೆ, ಸಿಮೆಂಟ್ ಹಾಗೂ ಪ್ಲಾಸ್ಟಿಕ್ ನಿಂದ ಹಲವು ಭಾಗೆಯ ಬ್ಯಾಗ್ ಮತ್ತು ಜರ್ಕಿನ್ ಹಾಗೂ ಶಾಲಾ ಮಕ್ಕಳಿಗೆ ವಿದ್ಯಾಭ್ಯಾಸ ಮಾಡಲು ಡೆಸ್ಕ್ ನಿರ್ಮಾಣ ಮಾಡಲಾಗುತ್ತಿದೆ.

ಪ್ರಕೃತಿ ದತ್ತವಾಗಿ ಬರುವ ತ್ಯಾಜ್ಯ;– ಈ ತ್ಯಾಜ್ಯವೂ ಹಸಿ ಕಸವಾಗಿರುತ್ತದೆ (ಆಹಾರ ಪದಾರ್ಥಗಳು, ತರಕಾರಿ ಇತ್ಯಾದಿ) ಯಾವ ಜೀವರಾಶಿಗೂ ತೆ–ೂಂದರೆ ಅಗದಂತೆ ಮಣ್ಣಲ್ಲಿ ಮಣ್ಣಾಗಿ ಕರಗಿ ಗೊಬ್ಬರವಾಗುತ್ತದೆ. ಯಾವುದೇ ಕಾರಣಕ್ಕೂ ಯಾರಿಗೂ ತೊಂದರೆ ಅಗುವುದಿಲ್ಲ.

ಮಾನವ ನಿರ್ಮಿತ ತ್ಯಾಜ್ಯ;– ಸಕಾಲ ಜೀವರಾಶಿಗಳಲ್ಲಿ ಮನುಷ್ಯ ಅತ್ಯಂತ ಬುದ್ಧಿವಂತೆ ಜೀವಿ ಎಂದು ಕರೆಸಿಕೊಂಡರು, ನಾವುಗಳು ಸೃಷ್ಟಿಸುವ ತ್ಯಾಜ್ಯ ಇಂದು ಪ್ರಪಂಚದ್ಯಂತವಾಗಿ ದೊಡ್ಡ ಸಮಸ್ಯೆಯಾಗಿ ಪ್ರಕೃತಿ ಮತ್ತು ಸಕಾಲ ಜೀವರಾಶಿಗಳ ಮೇಲೆ ಮರಣಾಂತಿಕವಾಗಿ ತೊಂದರೆ ಉಂಟಾಗುತ್ತಿದೆ.

ನಿರ್ವಹಣೆ;– ಮೊದಲಿನಂತೆ ನಾವುಗಳು ಸಾಧ್ಯವಾದಷ್ಟು ಪ್ಲಾಸ್ಟಿಕ್ ಹಾಗೂ ಪ್ಲಾಸ್ಟಿಕ್ ನಿಂದ ಸಿದ್ಧಪಡಿಸಿದ ವಸ್ತುಗಳಿಂದ ದೂರವಿರಬೇಕು. ಹೆಚ್ಚಾಗಿ ಮರುಬಳಕೆಯಾಗುವ ವಸ್ತುಗಳನ್ನು ಬಳಸಿಕೊಳ್ಳುವುದರ ಜೊತೆಗೆ ಇವುಗಳ ಕುರಿತು ಸಾರ್ವಜನಿಕರಲ್ಲಿಯೂ ಕೂಡ ತ್ಯಾಜ್ಯ ನಿರ್ವಹಣೆಯ ಬಗ್ಗೆ ಅರಿವೂ ಮೂಡಿಸುವ ಕೆಲಸ ಮಾಡಬೇಕಾಗಿದೆಂದರು.

ಅಕ್ಷೀತಾ, ದ್ವಿತೀಯ, ಬಿ.ಎಸ್.ಡಬ್ಲೂಯು. ವಿದ್ಯಾರ್ಥಿ ;–

ಸಮಾಜ ಕಾರ್ಯ ವಿಭಾಗದಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವುದರಿಂದ ನಮ್ಮ ಪರಿಸರದ ಮೇಲೆ ತ್ಯಾಜ್ಯದಿಂದ ಆಗುತ್ತಿರುವ ದುಷ್ಪರಿಣಾಗಳನ್ನು ಅರ್ಥಮಾಡಿಕೊಂಡು ಸ್ವಚ್ಚತೆ ಹೆಚ್ಚಿನ ಅದ್ಯತೆ ನೀಡುತ್ತೇನೆ.

ತಾಬಾ, ಮೇಘಲಾಯ, ಪ್ರಥಮ ಎಂ.ಎಸ್.ಡಬ್ಲೂಯು, ವಿದ್ಯಾರ್ಥಿ;–

ಏಕಬಳಕೆಯ ಪ್ಲಾಸ್ಟಿಕ್ ತ್ಯಾಜ್ಯವನ್ನು ಬಳಕೆ ಮಾಡುವುದಿಲ್ಲ ಹಾಗೂ ನಮ್ಮ ರಾಜ್ಯದಲ್ಲಿ ಬಳಕೆ ಮಾಡುವವರಿಗೆ ಅರಿವೂ ಮೂಡಿಸುವ ಕೆಲಸ ಮಾಡುತ್ತೇನೆ.

ಹ್ಯಾಪಿ, ಕೇರಳ ದ್ವಿತೀಯ ಬಿ.ಎಸ್. ಡಬ್ಲೂಯು. ವಿದ್ಯಾರ್ಥಿ;–

ತ್ಯಾಜ್ಯಗಳ ಬಗೆಗಳನ್ನು ತಿಳಿದುಕೊಂಡು ಅವುಗಳಿಂದಾಗುವ ಅಪಾಯಗಳನ್ನು ತಡೆಗಟ್ಟಲು ಜಾಗೃತಿ ಮೂಡಿಸಿ ತ್ಯಾಜ್ಯ ಮುಕ್ತ ವಲಯ ಮಾಡಲು ಶ್ರಮಿಸುತ್ತೇನೆ.

ಈ ಕಾರ್ಯಗಾರದಲ್ಲಿ ಆಚಾರ್ಯ ಪದವಿ ಅಧ್ಯಯನ ಸಂಸ್ಥೆ ಪ್ರೋಪೆಸರ್ ಕುಮಾರಸ್ವಾಮಿ, ಹೆಚ್.ಒ.ಡಿ.ಡಾ.ಮರ್ಷಿದ್, ಔಟ್ ರೀಚ್ ಸಂಸ್ಥೆಯ ಯೋಜನ ಸಮನ್ವಯಾಧಿಕಾರಿ ಪ್ರಶಾಂತ್.ಸಿ. ಮಾಜಿ ತಾಲ್ಲೂಕ ಪಂಚಾಯಿತಿ ಗಣಪತಿ ಸೇರಿದಂತೆ ಆಚಾರ್ಯ ಪದವಿ ಅಧ್ಯಯನ ಸಂಸ್ಥೆಯ ಬಿ.ಎಸ್.ಡಬ್ಲೂಯು, ಎಂ.ಎಸ್.ಡಬ್ಲೂಯು 41 ವಿದ್ಯಾರ್ಥಿಗಳು ಭಾಗವಹಿಸಿದರು.

## ಸ್ಥಗಿತಗೊಂಡಿರುವ ಸೌಹಾರ್ದ ಸಹಕಾರಿ ಸಮಾಪನೆ ಆಕ್ಷೇಪಣೆಅರ್ಜಿಗೆ ಅವಕಾಶಕ್ಕೆ ಸೂಚನೆ

• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ**

ಮೇ 06 : 2026ರ ಮಾರ್ಚ್ 31ಕ್ಕೆ ಇದ್ದಂತೆ ಯಾದಗಿರಿ ಜಿಲ್ಲೆಯಲ್ಲಿ ಸ್ಥಗಿತಗೊಂಡಿರುವ ಸೌಹಾರ್ದ ಸಹಕಾರಿಗಳನ್ನು ಸಮಾಪನೆಗೆ ಸೂಚಿಸಿದ್ದು, ಆಕ್ಷೇಪಣೆ ಅರ್ಜಿಗೆ ಅವಕಾಶ ಕಲ್ಪಿಸಿದೆ ಎಂದು ಯಾದಗಿರಿ ಸಹಕಾರ ಸಂಘಗಳ ಉಪ ನಿಬಂಧಕರು ಪವನಕುಮಾರ ಅವರು ತಿಳಿಸಿದ್ದಾರೆ. ಯಾದಗಿರಿ ಜಿಲ್ಲೆಯ ಈ ಕೆಳಕಂಡ ಸೌಹಾರ್ದ ಸಹಕಾರಿಗಳ ಸದಸ್ಯರುಗಳ ಮತ್ತು ಸಾರ್ವಜನಿಕರಿಗೆ ಗಮನಕ್ಕೆ 2026ರ ಮಾರ್ಚ್ 31ಕ್ಕೆ ಇದ್ದಂತೆ ಶ್ರೀ ಚಂದ್ರಲಾ ಸ್ವಶಕ್ತಿ ಸೌಹಾರ್ದ ಸಹಕಾರಿ.ನಿ ಶಹಾಪೂರ, ಗ್ರಾಂಪ್ಲೋ ಇಂಟರ್ ನ್ಯಾಷನಲ್ ವಿವಿದೋದ್ದೇಶ ಸೌಹಾರ್ದ ಸಹಕಾರಿ.ನಿ ಕೆಂಭಾವಿ, ಪ್ರಜ್ಞಾ ಸೌಹಾರ್ದ ಪತ್ತಿನ ಸಹಕಾರ.ನಿ ಯಾದಗಿರಿ ಒಟ್ಟು 3 ವಿವಿಧ ರೀತಿಯ

ಸಹಕಾರಿಗಳು ಕರ್ನಾಟಕ ಸೌಹಾರ್ದ ಸಹಕಾರಿ ಕಾಯ್ದೆ 1997ರ ಅಡಿಯಲ್ಲಿ ನೊಂದಣಿಗೊಂಡು ಸಂಘದ ಬೈಲಾ ರಿತ್ಯ ಕಾರ್ಯನಿರ್ವಹಿಸದೆ ಇರುವದರಿಂದ ಸ್ಥಗಿತಗೊಂಡಿರುತ್ತದೆ. ಈ ಸ್ಥಗಿತಗೊಂಡ ಸಹಕಾರಿಗಳನ್ನು ಸಮಾಪನೆ ಮಾಡಲು ಕ್ರಮವಿಡಲಾಗುತ್ತಿದೆ.

ಈ ಬಗ್ಗೆ ತಮ್ಮ ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಸಹಕಾರ ಸಂಘಗಳ ಉಪ ನಿಬಂಧಕರು ಯಾದಗಿರಿ, ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಚೇರಿ ಯಾದಗಿರಿ ಇಲ್ಲಿಗೆ ದಾಖಲಾತಿಗಳೊಂದಿಗೆ ಈ ಪ್ರಕಟಣೆ ಹೊರಡಿಸಿದೆ 15 ದಿನಗಳ ಒಳಗೆ ಸಲ್ಲಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಮಿಳುನಾಡಿನಲ್ಲಿ ದೇಶಕ್ಕೆ ಮಾದರಿಯಾದ ಮತದಾರ ಪ್ರಭು

• **ಮಲ್ಲಮ್ಮ ನುಡಿ ವಾರ್ತೆ ಹುಣಸೂರು**

ಮೇ.6:ಹಣ, ಜಾತಿ, ಕುಟುಂಬರಾಜಕಾರಣ ಧಿಕ್ಕರಿಸಿ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ತಮಿಳುನಾಡು ರಾಜ್ಯದಲ್ಲಿ ಹೊಸ ಯುಗ ಆರಂಭಿಸಿ ದೇಶಕ್ಕೆ ಮಾದರಿಯಾದ ಮತದಾರಪ್ರಭು ಎಂದು ಸತ್ಯ ಎಂ ಎ ಎಸ್ ಫೌಂಡೇಶನ್ ಅಧ್ಯಕ್ಷ ಸತ್ಯಪ್ಪ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ ನಂತರ ಮಾತನಾಡಿ ಟಿವಿಕೆ ಪಕ್ಷದ ನಾಯಕ ವಿಜಯ್ ತಮ್ಮ ಕಾರು ಚಾಲಕನ ಪುತ್ರ ಹಾಗೂ 7ನೇ ತರಗತಿ ವ್ಯಾಸಂಗ ಮಾಡಿದ ಆಟೋ ಡ್ರೈವರ್ ಯಾವುದೇ ಜಾತಿ ವ್ಯವಸ್ಥೆ ಇಲ್ಲದೆ ಎಂಎಲ್‌ಎ ಮಾಡಿರುವುದು ದಾಖಲೆಯೇ ಸರಿ.ಇಲ್ಲಿನ ಜನ ಜಾತಿ, ಹಣ, ವಂಶಪರಂಪರ್ಯ ರಾಜಕಾರಣವನ್ನು ಧಿಕ್ಕರಿಸಿ ಮತ ಚಲಾಯಿಸಿ ಇಡೀ ದೇಶಕ್ಕೆ ಮಾದರಿಯಾಗಿದ್ದಾರೆ. ಮತದಾರ ಪ್ರಭು ಏನು ಬೇಕಾದರೂ ಮಾಡಬಹುದು ಎನ್ನುವುದಕ್ಕೆ ತಮಿಳುನಾಡಿನ ಚುನಾವಣಾ ಫಲಿತಾಂಶವೇ ಒಂದು ಉದಾಹರಣೆಯಾಗಿದೆ.ಇತ್ತೀಚಿನ ರಾಜಕೀಯ ಬೆಳವಣಿಗೆಗಳು ಹಣ ಹಾಗೂ ಪದಾರ್ಥಗಳ ಆಮೀಷಗಳೊಂದಿಗೆ ಜಾತಿ ಜಾತಿಗಳ ಸಂಘರ್ಷಗಳೊಂದಿಗೆ ಮತ ಭೇಟೆ ನಡೆಯುತ್ತಿರುವುದು ಸಾಮಾನ್ಯವಾಗಿದ್ದು



ಬಹಳ ಅತಿರೇಕಕ್ಕೆ ಎಡೆ ಮಾಡಿಕೊಟ್ಟಿದೆ.ಇದೆಲ್ಲವುಗಳನ್ನು ಹೊರತುಪಡಿಸಿ ನಮ್ಮ ಪಕ್ಕದ ರಾಜ್ಯ ತಮಿಳುನಾಡಿನಲ್ಲಿ ಎಲ್ಲಾ ಘಟಾನುಘಟಿ ಪಕ್ಷಗಳನ್ನು ಬದಿಗೊತ್ತಿ ಬುದ್ಧಿವಂತ ಮತದಾರ ರಾಷ್ಟ್ರೀಯ ಹಾಗೂ ಪ್ರಾದೇಶಿಕ ಪಕ್ಷಗಳ ಹಾಗೂ ವಂಶ ರಾಜಕಾರಣದಿಂದ ಬೇಸತ್ತು ಹೊಸದೊಂದು ಪಕ್ಷಕ್ಕೆ ಮಣೆ ಹಾಕಿರುವುದು ಒಂದು ಹೊಸ ಬೆಳವಣಿಗೆ ಎಂದೇ ಹೇಳಬೇಕು.ಈಗಿನ ಸಂಪರ್ಕ ಕ್ರಾಂತಿಯ ಸಂದರ್ಭದಲ್ಲಿ ಜನರನ್ನು ಬೇಗ ತಲುಪುವ ಅನುಕೂಲಗಳು ಇವೆ. ಹೊಸ ಪ್ರಯೋಗಗಳಿಗೆ ಮಾದರಿಯಾಗಿ ದೇಶದಲ್ಲಿ ಕೆಲವು ಪ್ರಾದೇಶಿಕ ಪಕ್ಷಗಳು ಯಶಸ್ವಿಯಾಗಿವೆ ಅದರಲ್ಲಿ ಬಹು ಮುಖ್ಯ ಉದಾಹರಣೆ ದೆಹಲಿಯ ಅರವಿಂದ್ ಕ್ರೇಜಿವಲ್ ನೇತೃತ್ವದ ಪಾರ್ಟಿ ಇದೀಗ ವಿಜಯ್ ಅವರ ಟಿವಿಕೆ ಪಕ್ಷ ಮತ್ತು ಇತಿಹಾಸದಲ್ಲಿ ದಾಖಲಾಗಿರುವ ಕೆಲವು ಪಕ್ಷಗಳು.ನಾಯಕತ್ವದಲ್ಲಿ ಅತ್ಯಂತ ಪ್ರಾಮಾಣಿಕ ಶುದ್ಧ ಮತ್ತು ಅಧಿಕಾರ ಆಸೆಗಿಂತ ಜನರಿಗೆ ಒಳಿತು ಮಾಡುವ ವ್ಯಕ್ತಿತ್ವವನ್ನು ಹೊಂದಿರುವವರು ಎಂಬ ನಂಬಿಕೆ ಜನರಲ್ಲಿ ಬೆಳೆದರೆ ಅದು ಪರ್ಯಾಯ ರಾಜಕೀಯ ಶಕ್ತಿಯ ಯಶಸ್ಸಿನ ಮೊದಲ ಮೆಟ್ಟಿಲು.

# ಜಗದೀಶ ಹಿರೇಮನಿ ನಿಧನ



**ಬಾಗಲಕೋಟೆ:** ಕೇಂದ್ರ ಸರಕಾರದ ಸಫಾಯಿ ಕರ್ಮಚಾರಿ ಆಯೋಗದ ಮಾಜಿ ಸದಸ್ಯ ಎಸ್‌ಐಆರ್ ರಾಜ್ಯ ಸಂಚಾಲಕರಾಗಿದ್ದ ಎಬಿವಿಪಿ ಪೂರ್ಣಾವಧಿ ಕಾರ್ಯಕರ್ತ, ಬಾಗಲಕೋಟೆ ನಿವಾಸಿ ಜಗದೀಶ ಹಿರೇಮನಿ ಬುಧವಾರ ಹೃದಯಾಘಾತದಿಂದ ನಿಧನರಾಗಿದ್ದಾರೆ.

ಬಾಗಲಕೋಟ ನವನಗರದ ಸೆಕ್ಟರ್ ನಂ.33ರ ನಿವಾಸಿ ಜಗದೀಶ ಹಿರೇಮನಿ ಅವರಿಗೆ 55 ವರ್ಷ ವಯಸ್ಸಾಗಿತ್ತು.

ಮೃತರು ಪತ್ನಿ, ಓರ್ವ ಪುತ್ರಿ ಹಾಗೂ ಅಪಾರ ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯ ಸಂಸ್ಕಾರ ಮೇ. 7 ರಂದು ಮಧ್ಯಾಹ್ನ 12 ಗಂಟೆಗೆ ಬೈಪಾಸ್ ರಸ್ತೆಯಲ್ಲಿರುವ ರುದ್ರಭೂಮಿಯಲ್ಲಿ ನಡೆಯಲಿದೆ.

ಜಗದೀಶ ಹಿರೇಮನಿ ಶಾಲಾ ಅವಧಿಯಿಂದಲೇ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್‌ನಲ್ಲಿ ತಮ್ಮನ್ನು ತೊಡಗಿಸಿಕೊಂಡು ಎ.ಬಿ.ವಿ.ಪಿ ಪೂರ್ಣಾವಧಿ ಕಾರ್ಯಕರ್ತರಾಗಿ, ಕೇಂದ್ರ ಸಫಾಯಿ ಕರ್ಮಚಾರಿ ಆಯೋಗದ ಸದಸ್ಯರೂ ಆಗಿ ಸೇವೆ ಸಲ್ಲಿಸಿದ್ದರು. ಅವರು ಎಸ್.ಐ.ಆರ್ ರಾಜ್ಯ ಸಂಚಾಲಕರಾಗಿ ಕೆಲಸ ಮಾಡುತ್ತಿದ್ದರು. ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಜನ್ಮ ಶತಮಾನೋತ್ಸವ ಕಾರ್ಯಕ್ರಮವನ್ನು ರಾಜ್ಯದಲ್ಲಿ ಅತ್ಯಂತ ಸಮರ್ಥವಾಗಿ ನಿಭಾಯಿಸಿದ್ದರು. ಪಕ್ಷಕ್ಕಾಗಿ ತಮ್ಮನ್ನು ಸಮರ್ಪಿಸಿಕೊಂಡು ಸದಾ ಕ್ರಿಯಾಶೀಲರಾಗಿದ್ದರು.

# ಗ್ರಾಮೀಣ ಕುಡಿಯುವ ನೀರು ಸಹಾಯವಾಣಿ ಕೇಂದ್ರ

**ಬಾಗಲಕೋಟೆ:** ಪ್ರಸಕ್ತ ಬೇಸಿಗೆ ಕಾಲದಲ್ಲಿ ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಕೊರತೆಯಾಗದಂತೆ ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯಿತಿ ವತಿಯಿಂದ ಅಗತ್ಯಕ್ಕೆ ತಕ್ಕಂತೆ ಎಲ್ಲ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ಪ್ರಸ್ತುತ ಕಾಲದಲ್ಲಿ ಕುಡಿಯುವ ನೀರಿಗೆ ಸಂಬಂಧಿಸಿದ ಸಮಸ್ಯೆಗಳಿಗೆ ಗ್ರಾಮಸ್ಥರಿಗೆ ಶೀಘ್ರವಾಗಿ ಸ್ಪಂಧಿಸಲು ಮತ್ತು ಕುಂದುಕೊರತೆಗಳನ್ನು ಪರಿಹರಿಸಲು ಜಿಲ್ಲಾ ಹಾಗೂ ತಾಲೂಕಾ ಮಟ್ಟದಲ್ಲಿ ಸಹಾಯವಾಣಿ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ.

ಗ್ರಾಮೀಣ ಭಾಗದ ಜನರು ತಮ್ಮ ಗ್ರಾಮದಲ್ಲಿ ಕುಡಿಯುವ ನೀರು ಪೂರೈಕೆಗೆ ಸಂಬಂಧಿಸಿ ಕಂಡುಬರುವ ತೊಂದರೆಗಳನ್ನು ಜಿ.ಪಂ ಕಾರ್ಯಾಲಯ (08354-200180), ಕಾರ್ಯನಿರ್ವಾಹಕ ಇಂಜಿನೀಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ (9482273638), ಸಹಾಯಕ ಕಾರ್ಯನಿರ್ವಾಹಕ ಇಂಜಿನೀಯರ್ ಉಪವಿಭಾಗ ಕಚೇರಿ ಬಾಗಲಕೋಟೆ (9916889472), ಬಾದಾಮಿ ಮತ್ತು ಗುಳೇದಗುಡ್ಡ (9480031005), ಬೀಳಗಿ (9902436899), ಹುನಗುಂದ ಮತ್ತು ಇಳಕಲ್ಲ (9448947542), ಜಮಖಂಡಿ ಮತ್ತು ರಬಕವಿ-ಬನಹಟ್ಟಿ (9380509089), ಮುಧೋಳ (9591421346) ದೂರವಾಣಿ ಸಂಖ್ಯೆಗೆ ಕರೆ ಮಾಡಿ ತಮ್ಮ ಕುಂದುಕೊರತೆಗಳನ್ನು ದಾಖಲಿಸಬಹುದಾಗಿದೆ. ಜಿಪಂ ಸಹಾಯವಾಣಿ ಕೇಂದ್ರಗಳಲ್ಲಿ ದಾಖಲಾಗುವ ದೂರುಗಳ ಸಮಸ್ಯೆ ನಿವಾರಣೆಗೆ ತುರ್ತಾಗಿ ಅಗತ್ಯ ಪರಿಹಾರ ಕ್ರಮಗಳನ್ನು ಅನುಸರಿಸಲಾಗುತ್ತದೆ. ಆದ್ದರಿಂದ ಬಾಗಲಕೋಟೆ ಜಿಲ್ಲೆಯ ಗ್ರಾಮೀಣ ಭಾಗದ ಜನರು ಸಹಾಯವಾಣಿ ಕೇಂದ್ರಗಳ ಸದುಪಯೋಗ ಪಡಿಸಿಕೊಳ್ಳುವಂತೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿ





• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಅನಾನುಕೂಲಕರ ಹವಾಮಾನದಿಂದ ಉಂಟಾಗುವ ಬೆಳೆ ನಷ್ಟದಿಂದ ರೈತರನ್ನು ರಕ್ಷಿಸುವ ಉದ್ದೇಶದಿಂದ ಜಾರಿಗೆ ತರಲಾದ ಹವಾಮಾನ ಆಧಾರಿತ ವಿಮೆ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಂತೆ ಜಿಲ್ಲಾಧಿಕಾರಿ ಸಂಗಪ್ಪ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಬುಧವಾರ ಮರು ವಿನ್ಯಾಸಗೊಳಿಸಿದ ಹವಾಮಾನ ಆಧಾರಿತ ವಿಮೆ ಯೋಜನೆ ಕುರಿತು ಜರುಗಿದ ಜಿಲ್ಲಾ ಮಟ್ಟ ತಾಂತ್ರಿಕ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಹವಾಮಾನ ಆಧಾರಿತ ವಿಮೆ ಯೋಜನೆಯ ಮರು ವಿನ್ಯಾಸದ ಪ್ರಮುಖ ಅಂಶಗಳನ್ನು ವಿವರವಾಗಿ ಚರ್ಚಿಸಿದರು. ಇದು ಮಳೆ ತಾಪಮಾನ ಮತ್ತು ತೇವಾಂಶದಂತಹ ಪ್ರತಿಕೂಲ ಹವಾಮಾನ ವೈಪರಿತ್ಯಗಳಿಂದ ಉಂಟಾಗುವ ತೋಟಗಾರಿಕೆ ಮತ್ತು ವಾಣಿಜ್ಯ ಬೆಳೆಗಳಾದ ದಾಳಿಂಬೆ ಮತ್ತು ದ್ರಾಕ್ಷಿ ಬೆಳೆ ನಷ್ಟಕ್ಕೆ ಪರಿಹಾರ ಒದಗಿಸುವ ಯೋಜನೆಯಾಗಿದೆ ಎಂದು ತಿಳಿಸಿದರು.

ಈ ಯೋಜನೆಯಡಿ ಮುಖ್ಯವಾಗಿ ಬೆಳೆ ಕಟಾವು ಪರಿಶೀಲನೆಗೆ ಬದಲಾಗಿ ಹವಾಮಾನ ಕೇಂದ್ರಗಳ ದತ್ತಾಂಶಗಳ ಆಧರಿಸಿ ಪರಿಹಾರ ನೀಡಲಾಗುತ್ತದೆ. ಅಲ್ಲದೇ ಬೆಳೆ ಬೆಳವಣಿಗೆಯ ಹಂತಗಳನ್ನು ಗಮನಿಸಿ ವಿಮಾ ಮೊತ್ತ ನಿಗದಿಪಡಿಸಲಾಗುತ್ತದೆ. ಹವಾಮಾನ ಸೂಚ್ಯಂಕಗಳ ಆಧಾರದ ಮೇಲೆ ಸ್ವಯಂ ಚಾಲಿತವಾಗಿ ಪರಿಹಾರ ಬಿಡುಗಡೆ ಮಾಡಲಾಗುತ್ತದೆ, ಬೆಳೆ ಹಾನಿಯ ಸಂದರ್ಭದಲ್ಲಿ ನೇರ ವಿಮಾ ಪಾವತಿಯನ್ನು ಬೆಳೆ ಸಾಲ ಪಡೆದ ಮತ್ತು ಸಾಲ ಪಡೆಯದ ರೈತರಿಗೆ ಒದಗಿಸಲಾಗುತ್ತದೆ. ಈ ಯೋಜನೆ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆ ಜೊತೆ ಜಾರಿಯಲ್ಲಿರುತ್ತದೆ ಎಂದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ ಹವಾಮಾನ ವೈಪರಿತ್ಯಗಳಿಂದ ರೈತರಿಗೆ ಆಗುವ ನಷ್ಟವನ್ನು ತಗ್ಗಿಸಲು ಈ ಯೋಜನೆ ಸಹಾಯಕವಾಗಿದ್ದು, ಇದರ ಬಗ್ಗೆ ರೈತರಲ್ಲಿ ಹೆಚ್ಚಿನ ತಿಳುವಳಿಕೆ ನೀಡುವ ಕೆಲಸವಾಗಬೇಕು ಎಂದು ತಿಳಿಸಿದರು. ಎಲ್ಲ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ ಯೋಜನೆಯ ಲಾಭ ರೈತರಿಗೆ ಮುಟ್ಟಿಸುವ ಕೆಲಸವಾಗಬೇಕು. ರೈತರು ಈ ಯೋಜನೆಯ ಬಗ್ಗೆ ತಾಲೂಕಾ ಮತ್ತು ಹೋಬಳಿ ಮಟ್ಟದ ತೋಟಗಾರಿಕೆ ಅಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ ಎಂದರು.

ಸಭೆಯಲ್ಲಿ ಜಂಟಿ ಕೃಷಿ ನಿರ್ದೇಶಕ ಟಿ.ಎಸ್. ರುದ್ರೇಶಪ್ಪ, ಲೀಡ್ ಬ್ಯಾಂಕ್‌ನ ವ್ಯವಸ್ಥಾಪಕ ರಾಜಕುಮಾರ ಹೂಗಾರ, ಜಿಲ್ಲಾ ಸಾಂಖ್ಯಿಕ ಅಧಿಕಾರಿ ಗೌರಮ್ಮ ಸುಂಕದ ಸೇರಿದಂತೆ ತೋಟಗಾರಿಕೆ ವಿವಿಯ ಸಂಶೋಧನಾ ನಿರ್ದೇಶಕರು, ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರು, ಎಲ್ಲ ತಾಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಹಾಗೂ ವಿಮಾ ಪ್ರತಿನಿಧಿಗಳು ಉಪಸ್ಥಿತರಿದ್ದರು.

# ಕಾಂಗ್ರೆಸ್ಸಿಗೆ ನೈತಿಕ ಗೆಲುವಲ್ಲ: ಚರಂತಿಮಠ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ



ಬಾಗಲಕೋಟೆ ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಧಿಕಾರದ ದುರ್ಬಳಿಕೆ ಮತ್ತು ಹಣಬಲದ ಮೂಲಕ ಅನೈತಿಕ ಗೆಲುವು ಸಾಧಿಸಿದೆ ಎಂದು ಸೋಲು ಅನುಭವಿಸಿದ ಬಿಜೆಪಿ ಅಭ್ಯರ್ಥಿ ವೀರಣ್ಣ ಚರಂತಿಮಠ ಫಲಿತಾಂಶದ ಬಗ್ಗೆ ಹೀಗೆ ಪ್ರತಿಕ್ರಿಯಿಸಿದ್ದಾರೆ.

ಒಂದು ಕ್ಷೇತ್ರದ ಉಪ ಚುನಾವನೆ ಗೆಲ್ಲುವುದಕ್ಕಾಗಿ ಸ್ವತಃ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಡೀ ಸಂಪುಟದೊಂದಿಗೆ ಬಂದು ಟೀಕಾನಿ ಹೂಡಿದ್ದರು. ಇದು ಆಡಳಿತ ಪಕ್ಷ ಜನರ ವಿರೋಧಿ ಅಲೆಗೆ ಬೆಚ್ಚಿ ಬಿದ್ದಿತ್ತು ಎಂಬುದಕ್ಕೆ ಸಾಕ್ಷಿಯಾಗಿತ್ತು ಎಂದಿರುವ ಅವರು, ಸರಕಾರ ಕಳೆದ 3 ವರ್ಷಗಳಲ್ಲಿ ರಾಜ್ಯದ ಜನತೆಯ ಹಾಗೂ ಕೃಷ್ಣಾ ಯೋಜನಾ ಸಂತ್ರಸ್ತರ ಒಂದೇ ಒಂದು ಸಮಸ್ಯೆಯನ್ನು ಆಲಿಸಿ ಪರಿಹರಿಸಿಲ್ಲ ಎಂದರು.

ಕಾಂಗ್ರೆಸ್ಸಿಗೆ ಮತ ಹಾಕದಿದ್ದರೆ ಗ್ಯಾರಂಟಿ ಯೋಜನೆಗಳನ್ನು ಸ್ಥಗಿತಗೊಳಿಸುವುದಾಗಿ ಮತದಾರರಿಗೆ ಬೆದರಿಕೆ ಹಾಕಲಾಗಿತ್ತು. ಮತದಾರರ ಮೇಲೆ ಪ್ರಭಾವ ಬಿರುವುದ್ದಕ್ಕಾಗಿ ಗ್ಯಾರಂಟಿ ಯೋಜನೆಗಳ ಅನುದಾನವನ್ನು ಬಿಡುಗಡೆಗೊಳಿಸಲಾಯಿತು. ಹೀಗೆ ಕಾಂಗ್ರೆಸ್ಸಿನ ಎಲ್ಲ ಕುತಂತ್ರಗಳನ್ನು ಗಮನಿಸಿದರೆ ಅವರು ಸಾಧಿಸಿದ ಗೆಲುವು ಅನೈತಿಕ ಗೆಲುವಾಗಿದೆ ಎಂದು ಚರಂತಿಮಠ ಹೇಳಿದರು.

ಬಿಜೆಪಿ ಸರಕಾರ ಮಾಡಿರುವ ಸಾಧನೆ ಕ್ಷೇತ್ರದಲ್ಲಿ 3 ಬಾರಿ ಶಾಸಕನಾಗಿ ಮಾಡಿರುವ ಅಭಿವೃದ್ಧಿ ಕೆಲಸಗಳನ್ನು ಮುಂದಿಟ್ಟುಕೊಂಡು ಚುನಾವಣೆಯನ್ನು ಎದುರಿಸಿ ಬಿಜೆಪಿ ಕಾರ್ಯಕರ್ತರು ನೈತಿಕ ವಿಜಯ ಸಾಧಿಸಿದ್ದಾರೆ.

# ಕಂದುಕೂರು ರಾಮುಡುಗೆ ಎಕ್ಸಲೆನ್ಸಿ ಅವಾರ್ಡ್

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಬೆಂಗಳೂರಿನ ದಿ ಇಂಡಿಯನ್ ಫೋರಂ ಫರ್ ಸೋಷಿಯಲ್ ಲೀಡರ್ಸ್ ಅಂಡ್ ಅಚೀವರ್ಸ್ ಸಂಸ್ಥೆ ಯು. ಸಾರ್ವಜನಿಕ ನಾಯಕತ್ವ, ಸಾಮಾಜಿಕ ನ್ಯಾಯ ಮತ್ತು ಸಮುದಾಯ ಅಭಿವೃದ್ಧಿಗೆ ನೀಡಿದ ಕೊಡುಗೆಯನ್ನು ಪರಿಗಣಿಸಿ ಬಳ್ಳಾರಿ ನಗರದ ಕೆಪಿಸಿಸಿ ಎಸ್ಸಿ ವಿಭಾಗದ ಉಪಾಧ್ಯಕ್ಷ ಕಂದುಕೂರು ರಾಮುಡು ಅವರಿಗೆ 2026 ನೇ ಸಾಲಿನ ಡಾ.ಬಿ..ಅರ್ ಅಂಬೇಡ್ಕರ್ ನ್ಯಾಷನಲ್ ಪ್ರೈಡ್ ಎಕ್ಸಲೆನ್ಸಿ ಅವಾರ್ಡನ್ನು ನೀಡಿ ಗೌರವಿ ಸಿದೆ.



ಸಂಸ್ಥೆಯ ಗೌರವ ಅಧ್ಯಕ್ಷ, ನಿವೃತ್ತ ನ್ಯಾಯಾಧೀಶ ಡಾ.ಕೆ.ವೆಂಟೇಶನ್ ಇದನ್ನು ರಾಮುಡು ಅವರಿಗೆ ನೀಡಿ ಗೌರವಿಸಿದ್ದಾರೆ. ಪ್ರಶಸ್ತಿ ದೊರೆತಿರುವುದರ ಬಗ್ಗೆ ರಾಮುಡು ಅವರು ಬಳ್ಳಾರಿ ಜಿಲ್ಲಾಧಿಕಾರಿ ಕೆ.ನಾಗೇಂದ್ರ ಪ್ರಸಾದ್ ಅವರ ಜೊತೆ ಸಂತಸ ವಿನಮಯ ಮಾಡಿಕೊಂಡಿದ್ದಾರೆ.

# ಕನ್ನಡ ಕಟ್ಟುವ ಕೆಲಸದಲ್ಲಿ ಕಸಾಪ ಮುಂಚೂಣಿ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ



ಕನ್ನಡ ಸಾಹಿತ್ಯ ಪರಿಷತ್ತನ್ನು ಹುಟ್ಟು ಹಾಕಿದ ಮಹನೀಯರು ಅಖಂಡ ಕರ್ನಾಟಕದ ಕನಸು ಕಂಡು ಕನ್ನಡ ಭಾಷೆ, ಸಾಹಿತ್ಯ, ಸಂಸ್ಕೃತಿಯ ವಿಸ್ತರಣೆಗಾಗಿ ಅಪೂರ್ವ ಕೆಲಸ ಮಾಡಿದರು. ಅವರ ಆಶಯವನ್ನು ಮುಂದುವರೆಸಿಕೊಂಡು ಹೋಗುವ ಜವಾಬ್ದಾರಿ ಪ್ರತಿಯೊಬ್ಬ ಕನ್ನಡಿಗರ ಮೇಲಿದೆ ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ನಿಕಟಪೂರ್ವ ಅಧ್ಯಕ್ಷ ಶ್ರೀಶೈಲ ಕರಿಶಂಕರಿ ಹೇಳಿದರು.

ನಗರದ ಕಸಾಪ ಭವನದಲ್ಲಿ ಮಂಗಳವಾರ ಸಂಜೆ ಹಮ್ಮಿಕೊಂಡಿದ್ದ ಕನ್ನಡ ಸಾಹಿತ್ಯ ಪರಿಷತ್ತಿನ 112 ನೆಯ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲಾ ಕಸಾಪ ದುರಿತ ಕಾಲದಲ್ಲೂ ಜಿಲ್ಲಾ ಮತ್ತು ತಾಲೂಕು ಸಮ್ಮೇಳನಗಳನ್ನು ನಡೆಸಿಕೊಂಡು ಬಂದಿದೆ. ಪುಸ್ತಕ ಪ್ರಕಟಣೆಯಲ್ಲಿ 40ಕ್ಕೂ ಹೆಚ್ಚು ಸಾಹಿತ್ಯ ಕೃತಿಗಳನ್ನು ಪ್ರಕಟಿಸಿದೆ ಎಂದು ಕರಿಶಂಕರಿ ಹೇಳಿದರು.

ಉಪನ್ಯಾಸ ನೀಡಿದ ಸಾಹಿತಿ ಲಕ್ಷ್ಮಣ ಬದಾಮಿ, ಪರಿಷತ್ತನ್ನು ಕಟ್ಟಿದ ನಲವಡಿ ಕೃಷ್ಣರಾಜ ಒಡೆಯರು ಸಮಾಜಮುಖಿ ಕಾರ್ಯಗಳ ಮೂಲಕ ಭಾರತ ಸಂವಿಧಾನದ ಆಶಯಗಳನ್ನು ಆಗಲೇ ಜಾರಿಗೆ ತಂದಿದ್ದರು. ಕನ್ನಡ ಭಾಷೆ ಉಳಿಯಬೇಕಾದರೆ ಪ್ರಾಥಮಿಕ ಶಿಕ್ಷಣ ಹಂತದಲ್ಲಿ ಕನ್ನಡವನ್ನು ಕಡ್ಡಾಯ ಮಾಡಬೇಕು. ಕನ್ನಡವನ್ನು ಪ್ರೀತಿಸುವ ಪ್ರತಿನಿಧಿಗಳ ಅಗತ್ಯವಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಸಾಪ ಅಧ್ಯಕ್ಷ ಶಿವಾನಂದ ಶೆಲ್ಲಿಕೇರಿ ಮಾತನಾಡಿ, ಸಾಹಿತ್ಯ ಸಮ್ಮೇಳನ, ಪುಸ್ತಕ ಪ್ರಕಟಣೆ, ದತ್ತಿ ಉಪನ್ಯಾಸಗಳ ಮೂಲಕ ಪರಿಷತ್ತನ್ನು ರಾಜ್ಯದಲ್ಲಿಯೇ ಮಾದರಿಯಾಗಿ ಮಾಡುವ ಆಶಯದೊಂದಿಗೆ ನಾವು ಮುಂದಾಗಿದ್ದೇವೆ. ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳವನ್ನು ಜಿಲ್ಲೆಯಲ್ಲಿ ನಡೆಸುವ ಸಂಕಲ್ಪ ಜಿಲ್ಲಾ ಕಸಾಪದ್ದಾಗಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಶ್ರೀಶೈಲ ಕರಿಶಂಕರಿ,.ಲಕ್ಷ್ಮಣ ಬದಾಮಿ, ಮಹಾಬಳೇಶ್ವರ ಗುಡಗುಂಟಿ, ನಾರಾಯಣ ಕುಲಕರ್ಣಿ, ರಮೇಶ ನಿಡೋಣಿ ಅವರನ್ನು ಸತ್ಕರಿಸಲಾಯಿತು.

ಸಮಾರಂಭದಲ್ಲಿ ಡಾ.ಪ್ರಕಾಶ ಖಾಡೆ, ಮಲ್ಲಿಕಾರ್ಜುನ ಶೆಲ್ಲಿಕೇರಿ, ಜಿ.ಎಸ್.ಬಿಜಾಪುರ, ಶಿವಶಂಕರ ಮತ್ತಗಿ, ಎಸ್.ಎಸ್.ಹಳ್ಳೂರ, ಸಿದ್ದಪ್ಪ ಹಳ್ಳೂರ, ಸಲೀಂ ಕೊಪ್ಪದ ಉಪಸ್ಥಿತರಿದ್ದರು. ಕಲ್ಯಾಣಕುಮಾರ ಗೋಗಿ ಪ್ರಾರ್ಥಿಸಿದರು. ವಿಜಯಶ್ರೀ ಮುರನಾಳ ನಿರೂಪಿಸಿ ವಂದಿಸಿದರು.

# ಬೇಸಿಗೆ ಶಿಬಿರದ ಸಮಾರೋಪ ಸಮಾರಂಭ



• ಮಲ್ಲಮ್ಮ ನುಡಿ ವಾರ್ತೆ ಕಾರವಾರ

ರಾಜ್ಯ ಬಾಲಭವನ ಸೊಸೈಟಿ(ರಿ) ಬೆಂಗಳೂರು, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಬಾಲಭವನ ಸೊಸೈಟಿ ಉತ್ತರ ಕನ್ನಡ ಇವರ ಸಯೋಗದಲ್ಲಿ ಪ್ರಸಕ್ತ ಸಾಲಿನ ಬೇಸಿಗೆ ಶಿಬಿರದ ಸಮಾರೋಪ ಸಮಾರಂಭವು ಜಿಲ್ಲಾ ಸ್ತ್ರೀಶಕ್ತಿ ಭವನದಲ್ಲಿ ಇತ್ತಿಚಿಗೆ ನಡೆಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಪ್ರಕಾಶ ಹಾಲಮ್ಮನವರ ಮಾತನಾಡಿ, ಮಕ್ಕಳು ಮೊಬೈಲ್ ಬಳಕೆ ಕಡಿಮೆ ಮಾಡಿ ವಿದ್ಯಾರ್ಜನೆ ಕಡೆಗೆ ಗಮನ ಹರಿಸುವಂತೆ ಮತ್ತು ಸೃಜನಾತ್ಮಕ ಚಟುವಟಿಕೆಗಳಾದ ಯೋಗ, ಕರಾಟೆ, ಚಿತ್ರಕಲೆ, ಕರಕುಶಲ ಸ್ಪರ್ಧೆಗಳಲ್ಲಿ ಭಾಗವಹಿಸುವ ಮೂಲಕ ದೈಹಿಕ ಮತ್ತು ಬೌದ್ಧಿಕ ಸಾಮರ್ಥ್ಯ ಹೆಚ್ಚಿಸಿಕೊಳ್ಳಬೇಕು ಎಂದು ಹೇಳಿದರು.

ಶಿಕ್ಷಣಾಧಿಕಾರಿ ಎನ್.ಟಿ.ನಾಯಕ ಮಾತನಾಡಿ, ಮಕ್ಕಳು ಇಂತಹ ಬೇಸಿಗೆ ಶಿಬಿರಗಳಲ್ಲಿ ಹೆಚ್ಚಾಗಿ ತೊಡಗಿಕೊಳ್ಳುವ ಮೂಲಕ ತಮ್ಮ ಪ್ರತಿಭೆ, ಸಾಮರ್ಥ್ಯ ಹಾಗೂ ದೈಹಿಕ, ಮಾನಸಿಕ ಸದೃಢತೆ ಹೆಚ್ಚಿಸಿಕೊಂಡು, ಪಠ್ಯೇತರ ಚಟುವಟಿಕೆಗಳಲ್ಲಿ ಹೆಚ್ಚಾಗಿ ಭಾಗವಹಿಸುವಂತಾಗಬೇಕು ಎಂದರು.

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಪ್ರಭಾರ ಉಪ ನಿರ್ದೇಶಕ ಕುಮಾರ.ಎನ್, ತೋಟಕಾರಿಕೆ ಇಲಾಖೆ ಸಹಾಯಕ ನಿರ್ದೇಶಕ ಸುನೀಲ್ ಅಂಕೋಲೆಕರ, ಕಲ್ಪನಾ ರಶ್ಮಿ ಕಲಾ ಲೋಕದ ಅಧ್ಯಕ್ಷ ಸೂರ್ಯಪ್ರಕಾಶ ಮತ್ತಿತರರು ಉಪಸ್ಥಿತರಿದ್ದರು.

# ಜಿಟಿಟಿಸಿಯಲ್ಲಿ ವೃತ್ತಿಪರ ತರಬೇತಿಗೆ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಕಾರವಾರ

ಗದಗದ ನರಗುಂದ ಅಳಗವಾಡಿರಸ್ತೆಯಲ್ಲಿರುವ ಜಿಟಿಟಿಸಿ ಕೇಂದ್ರದಲ್ಲಿ ವೃತ್ತಿಪರ ತರಬೇತಿಗೆ ಪ್ರವೇಶಾತಿ ಪ್ರಾರಂಭವಾಗಿದ್ದು, ಟೂಲರೂಮ್ ಮಶಿನಿಸ್ಟ್, ವೆಹಿಕಲ್ ಅಸೆಂಬ್ಲಿ ಫಿಟ್ಟರ್ ಮತ್ತು ಅಟೊಮೊಬೈಲ್ ವೆಲ್ಡರ್ ವೃತ್ತಿ ತರಬೇತಿಗಳಿಗೆ ಹತ್ತನೇ ತರಗತಿ ಅಥವಾ ಪಿಯುಸಿ ಉತ್ತೀರ್ಣರಾದ ಮತ್ತು ಅನುತ್ತೀರ್ಣರಾದ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಒಂದು ವರ್ಷ ಅವಧಿಯ ಟೂಲರೂಮ್ ಮಶಿನಿಸ್ಟ್ ತರಬೇತಿಯಲ್ಲಿ ಟರ್ನರ್, ಮಿಲ್ಲರ್, ಗ್ರೈಂಡರ್, ಸಿ.ಎನ್.ಸಿ ಪ್ರಾಯೋಗಿಕ ತರಬೇತಿಯನ್ನು ನೀಡಲಾಗುವುದು. ವೆಹಿಕಲ್ ಅಸೆಂಬ್ಲಿ ಫಿಟ್ಟರ್ ಮತ್ತು ಅಟೊಮೊಬೈಲ್ ವೆಲ್ಡರ್ ವೃತ್ತಿಪರ ತರಬೇತಿಯಲ್ಲಿ ಫಿಟ್ಟರ್, ಕಾರು ಬಿಡಿ ಭಾಗಗಳ ಜೋಡಣೆ ಮತ್ತು ವೆಲ್ಡಿಂಗ್ ಪ್ರಾಯೋಗಿಕ ತರಬೇತಿಯನ್ನು ನೀಡಲಾಗುವುದು. ಜೊತೆಗೆ ಅಟೋಕ್ಯಾಡ್, ಕನ್ನಡ ಮತ್ತು ಇಂಗ್ಲಿಷ್ ಭಾಷಾ ಕೌಶಲ್ಯಗಳನ್ನು ಹಾಗೂ ಉದ್ಯೋಗ ಕೌಶಲ್ಯಗಳನ್ನು ಕಲಿಸಲಾಗುತ್ತದೆ. ಒಂದು ವರ್ಷದ ತರಬೇತಿಯ ನಂತರ ಪ್ರತಿಷ್ಠಿತ ಟೂಲಿಂಗ್ ಮತ್ತು ವಿಮಾನ ತಯಾರಿಕೆ ಕೈಗಾರಿಕೆಗಳಲ್ಲಿ ಉದ್ಯೋಗ ದೊರಕಿಸಿ ಕೊಡಲಾಗುವುದು.

ಜಿಟಿಟಿಸಿ ಸಂಸ್ಥೆಯು ಅತ್ಯಾಧುನಿಕ ಯಂತ್ರೋಪಕರಣಗಳನ್ನು ಅಳವಡಿಸಿಕೊಂಡು ಸ್ಥಳೀಯ ಕೈಗಾರಿಕೆಗಳಿಗೆ ತಾಂತ್ರಿಕ ಸೇವೆಯನ್ನು ಒದಗಿಸುತ್ತಿದ್ದು, ವಿದ್ಯಾರ್ಥಿಗಳಿಗೆ ಆನ್-ದ-ಜಾಬ್ ತರಬೇತಿ ನೀಡುತ್ತದೆ. ಆಸಕ್ತ ವಿದ್ಯಾರ್ಥಿಗಳು ಜಿಟಿಟಿಸಿ ಕೇಂದ್ರಕ್ಕೆ ಭೇಟಿ ನೀಡಿ ಮೇ 15 ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ. ತರಬೇತಿಗಳು ಜೂನ್ 1 ರಿಂದ ಪ್ರಾರಂಭವಾಗಲಿದೆ.

ಹೆಚ್ಚಿನ ಮಾಹಿತಿಗಾಗಿ ಜಿಟಿಟಿಸಿ, ಅರ್ಬನ ಗ್ರಾಮ, ಅಳಗವಾಡಿ ರಸ್ತೆ, ನರಗುಂದ, ದೂ.ಸಂ: 8088536896 ನ್ನು ಸಂಪರ್ಕಿಸುವಂತೆ ಜಿಟಿಟಿಸಿ ನರಗುಂದ ಕೇಂದ್ರದ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಸತಿ ರಹಿತರ ಪಟ್ಟಿಗೆ ಹೆಸರು ಸೇರಿಸಲು ಅವಕಾಶ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ (ಹೊಸಪೇಟೆ

ಜಿಲ್ಲೆಯ ವಸತಿ ರಹಿತ ಹಾಗೂ ನಿವೇಶನ ರಹಿತ ಅರ್ಹ ಫಲಾನುಭವಿಗಳು ಸರ್ಕಾರದ ವಿವಿಧ ವಸತಿ ಯೋಜನೆಗಳ ಲಾಭ ಪಡೆಯಲು ಮೇ 15ರೊಳಗೆ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ ಎಂದು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ನೊಂಗ್ಜಾಯ್ ಮಹ್ಮದ್ ಅಲಿ ಅಕ್ರಮ್ ಷಾ ತಿಳಿಸಿದ್ದಾರೆ.

2018ರ ಸಮೀಕ್ಷಾ ಪಟ್ಟಿಯಲ್ಲಿರುವ ಅನರ್ಹರನ್ನು ಕೈಬಿಟ್ಟು, ಬಿಟ್ಟುಹೋಗಿರುವ ಅರ್ಹ ಫಲಾನುಭವಿಗಳನ್ನು ಸೇರಿಸಲು ಅವಕಾಶ ನೀಡಿದೆ. 2026-27ನೇ ಸಾಲಿನ ಆಯವ್ಯಯದಲ್ಲಿ ರಾಜ್ಯಾದ್ಯಂತ ಃಐಅ ಆಧಾರಿತ 1 ಲಕ್ಷ ಹೊಸ ಮನೆಗಳ ಗುರಿ ಹಂಚಿಕೆಯಾಗಿದ್ದು, ಆನ್‌ಲೈನ್ ಲಾಟರಿ ಮೂಲಕ ಗ್ರಾಮ ಸಭೆಗಳಲ್ಲಿ ಫಲಾನುಭವಿಗಳ ಆಯ್ಕೆ ನಡೆಯಲಿದೆ.

ಆದ್ದರಿಂದ ಅರ್ಹ ವಸತಿ ರಹಿತರ ಹೆಸರನ್ನು ಪಟ್ಟಿಗೆ ಸೇರಿಸಲು ಇದೇ ಮೇ 15 ಕೊನೆಯ ದಿನವಾಗಿದೆ. ನಂತರ ಪಟ್ಟಿಯನ್ನು ಸ್ಥಗಿತಗೊಳಿಸಲಾಗುವುದು. ಯಾವುದೇ ಅರ್ಹ ಫಲಾನುಭವಿಗಳು ಪಟ್ಟಿಯಿಂದ ಹೊರಗುಳಿಯದಂತೆ ನೋಡಿಕೊಳ್ಳುವ ಜವಾಬ್ದಾರಿಯನ್ನು ಆಯಾ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ (ಕಆಔ) ವಹಿಸಲಾಗಿದೆ. ಒಂದು ವೇಳೆ ಅರ್ಹರನ್ನು ಕೈಬಿಟ್ಟಿರುವುದು ಕಂಡುಬಂದಲ್ಲಿ ಪಿಡಿಒಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಸಿಇಒ ಎಚ್ಚರಿಸಿದ್ದಾರೆ. ಈ ನಿಟ್ಟಿನಲ್ಲಿ ಈ ಪ್ರಕ್ರಿಯೆಯನ್ನು ಕಾಲಮಿತಿಯೊಳಗೆ ಅತ್ಯಂತ ತುರ್ತಾಗಿ ಮತ್ತು ಆಂದೋಲನದ ಮಾದರಿಯಲ್ಲಿ ಯಶಸ್ವಿಗೊಳಿಸಲು ಜಿಲ್ಲೆಯ ಎಲ್ಲಾ ತಾಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ವಸತಿ ರಹಿತ ಸಾರ್ವಜನಿಕರು ತಕ್ಷಣವೇ ತಮ್ಮ ಗ್ರಾಮ ಪಂಚಾಯಿತಿಯನ್ನು ಸಂಪರ್ಕಿಸಿ ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕಾಧಿಕಾರಿ ನೊಂಗ್ಜಾಯ್ ಮಹ್ಮದ್ ಅಲಿ ಅಕ್ರಮ್ ಷಾ ತಿಳಿಸಿದ್ದಾರೆ.

## ಬಸವರಾಜ ಬದ್ರಗೊಂಡರಗೆ ಸಂಗನಬಸವಶ್ರೀ ಪ್ರಶಸ್ತಿ



**ಬಸವನಬಾಗೇವಾಡಿ:** ಪಟ್ಟಣದ ವಿದ್ಯುತ್ ಗುತ್ತಿಗೆದಾರ ಬಸವರಾಜ ಈರಸಂಗಪ್ಪಾ ಬದ್ರಗೊಂಡ ಅವರ ಸಮಾಜ ಸೇವೆ ಗುರುತಿಸಿ ತಾಲೂಕಿನ ಮನಗೂಳಿಯ ಸಂಸ್ಥಾನ ಹಿರೇಮಠವು ಪ್ರತಿ ವರ್ಷ ಕೊಡಮಾಡುವ ರಾಜ್ಯಮಟ್ಟದ ಸಂಗನಬಸವ ಶ್ರೀ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಶ್ರೀಮಠದ ಅಭಿನವ ಸಂಗನಬಸವ ಶಿವಾಚಾರ್ಯ ಸ್ವಾಮೀಜಿ ತಿಳಿಸಿದ್ದಾರೆ.

ಶ್ರೀಯುತರು ಮೂಲತ: ಸಮೀಪದ ನಾಗೂರ ಗ್ರಾಮದ ಈರಸಂಗಪ್ಪಾ ಹಾಗೂ ಚನ್ನಬಸವ್ವಾ ಅವರ ಸುಪುತ್ರರಾದ ಇವರು ಕಳೆದ ಎರಡು ದಶಕಗಳಿಂದ ವಿದ್ಯುತ್ ಗುತ್ತಿಗೆದಾರರಾಗಿ ಸೇವೆ ಸಲ್ಲಿಸುತ್ತಿರುವ ಇವರು ಕಳೆದ 2022ರಿಂದ ಕರ್ನಾಟಕ ರಾಜ್ಯ ಅನುಮತಿ ಪಡೆದ ವಿದ್ಯುತ್ ಗುತ್ತಿಗೆದಾರರ ಸಂಘದ ಬಸವನಬಾಗೇವಾಡಿ ಹಾಗೂ ನಿಡಗುಂದಿ ತಾಲೂಕು ಘಟಕಗಳ ಅಧ್ಯಕ್ಷರಾಗಿ ಸಂಘಗಳ ಶ್ರೇಯೋಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ. ಪಟ್ಟಣದಲ್ಲಿ ಸಂಘದ ಕಛೇರಿ ಆರಂಭಿಸಿ ಸದಸ್ಯರ ಏಳಿಗೆಗಾಗಿ ಮುಂದಾಗಿದ್ದಾರೆ.

ಪ್ರತಿ ವರ್ಷ ಅದ್ದೂರಿ ಗಣೇಶ ಉತ್ಸವಕ್ಕೆ ಚಾಲನೆ ನೀಡಿದ್ದಾರೆ. ಈ ಬಾರಿ ತಮ್ಮ ಭೂಮಿಯಲ್ಲಿ ತೊಗರಿ, ಮೆಕ್ಕೆಜೋಳ ಹಾಗೂ ಕಬ್ಬು ಕೃಷಿಯಲ್ಲಿ ಯಶ ಕಾಣುತ್ತಿರುವ ಇವರ ಕೃಷಿ ಹಾಗೂ ಸಾಮಾಜಿಕ ಸೇವೆ ಗುರುತಿಸಿ ಆರೂಢನಂದಿಹಾಳದ ಆರೂಢ ಸೇವಾ ಸಮಿತಿ ಆರೂಢಶ್ರೀ ಪ್ರಶಸ್ತಿ ನೀಡಿ ಗೌರವಿಸಿದ್ದನ್ನು ಇಲ್ಲಿ ಸ್ಮರಿಸಬಹುದು.

ಸಂಗನಬಸವಶ್ರೀ ಪ್ರಶಸ್ತಿಯನ್ನು ಇದೇ 12ರಂದು ಮನಗೂಳಿ ಹಿರೇಮಠದಲ್ಲಿ ಜರುಗುವ ಧರ್ಮ ಜಾಗೃತಿ ಸಮಾರಂಭದಲ್ಲಿ ಅನೇಕ ಹರಗುರು ಚರಮೂರ್ತಿಗಳ ಹಾಗೂ ಜನಪ್ರತಿನಿಧಿಗಳ ಸಮ್ಮುಖದಲ್ಲಿ ಪ್ರದಾನ ಮಾಡಲಾಗುವುದು.

## ಜುಲೈ 11ರಂದು ರಾಷ್ಟ್ರೀಯ ಲೋಕ್ ಅದಾಲತ್

**ಬೆಂಗಳೂರು:** ರಾಜ್ಯಾದ್ಯಂತ ಜುಲೈ 11 ರಂದು "ರಾಷ್ಟ್ರೀಯ ಲೋಕ್ ಅದಾಲತ್" ಹಮ್ಮಿಕೊಳ್ಳಲಾಗಿದೆ. ಈ ಅದಾಲತ್‌ನಲ್ಲಿ ಸಾರ್ವಜನಿಕರು ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ಮತ್ತು ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಇಚ್ಚಿಸಿದಲ್ಲಿ ಮುಂಚಿತವಾಗಿ ಸಂಬಂಧಪಟ್ಟ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ತಾಲ್ಲೂಕು ಕಾನೂನು ಸೇವಾ ಸಮಿತಿಗಳನ್ನು ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದು.

ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಪ್ರಕರಣ ನಡೆಯುತ್ತಿರುವ ನ್ಯಾಯಾಲಯಕ್ಕೆ ಪ್ರಕರಣ ರಾಜಿ ಮಾಡಿಕೊಳ್ಳುವ ಕುರಿತು ತಿಳಿಸುವ ಮೂಲಕ ಅಥವಾ ಅರ್ಜಿ ಸಲ್ಲಿಸುವ ಮೂಲಕ ಪ್ರಕರಣ ಇತ್ಯರ್ಥ ಪಡಿಸಿಕೊಳ್ಳಬಹುದು.

ಹೆಚ್ಚಿನ ಮಾಹಿತಿಗಾಗಿ website:www.kslsa.kar.niv.in,, ಸಹಾಯವಾಣಿ ಸಂಖ್ಯೆ: 15100 ಅಥವಾ ನಿಮ್ಮ ಹತ್ತಿರದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಗಳು ಅಥವಾ ತಾಲ್ಲೂಕು ಕಾನೂನು ಸೇವಾ ಸಮಿತಿಯ ಸದಸ್ಯಕಾರ್ಯದರ್ಶಿಯವರನ್ನು ಸಂಪರ್ಕಿಸಬಹುದು ಎಂದು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹುಲ್ಲಿನ ಬಣವಿಗಳು ಭಸ್ಮ, ರೈತರಿಗೆ ಪರಿಹಾರ ನೀಡಲು ಒತ್ತಾಯ



**ಗಂಗಾವತಿ:** ತಾಲೂಕಿನ ವೆಂಕಟಗಿರಿ ಹೋಬಳಿಯ ಬಸಾಪಟ್ಟಣ ಗ್ರಾಮ ಪಂಚಾಯತಿಯ ಸೂರ್ಯನಾಯಕ ಲಂಬಾಣಿ ತಾಂಡಾದಲ್ಲಿನ ಕೆರೆಯ ಅಭಿವೃದ್ಧಿ ಕಾಮಗಾರಿ ಕೆಲಸಕ್ಕೆ ಬಂದಿದ್ದ ಚಿಕ್ಕಬೆಣಕಲ್ ಗ್ರಾಮ ಪಂಚಾಯತಿಯ ನರೇಗಾ ಕೂಲಿ ಕಾರ್ಮಿಕರ ಅಜಾಗರೂಕತೆಯಿಂದ ಅಲ್ಲಿನ ಕೃಷಿ ಜಮೀನುಗಳಲ್ಲಿನ 03 ಹುಲ್ಲಿನ ಬಣವಿಗಳು ಮೇ-5 ಮಂಗಳವಾರ ಬೆಳಗ್ಗೆ 11 ರ ಸುಮಾರಿಗೆ ಸುಟ್ಟು ಭಸ್ಮವಾಗಿರುವ ಘಟನೆ ಜರುಗಿದೆ ಇದರಿಂದ ರೈತರಿಗೆ ಲಕ್ಷಾಂತರ ರೂಪಾಯಿ ನಷ್ಟವಾಗಿದೆ. ಕೂಡಲೇ ಚಿಕ್ಕಬೆಣಕಲ್ ಗ್ರಾ.ಪಂ ಯಿಂದ ರೈತರಿಗೆ ಪರಿಹಾರಧನ ನೀಡಬೇಕೆಂದು ಅಖಿಲ ಕರ್ನಾಟಕ ಬಂಜಾರ್ ಲಂಬಾಣಿ ಸೇವಾಲಾಲ್ ಸಮಾಜ ಸೂರ್ಯನಾಯಕ ತಾಂಡದ ಕಾರ್ಯಾಧ್ಯಕ್ಷರಾದ ಬಾಲಾಜಿ ಚವ್ಹಾಣ್ ಒತ್ತಾಯಿಸಿದರು.

ಕೆರೆ ಅಭಿವೃದ್ಧಿ ಕೆಲಸಕ್ಕೆ ಬಂದಿದ್ದ ಕೂಲಿ ಕಾರ್ಮಿಕರು ವಿಶ್ರಾಂತಿಗಾಗಿ ಬಣವಿ ನೆರಳಿಗೆ ಕುಳಿತು ಬೀಡಿ, ಸಿಗರೇಟ್ ಸೇದುವಾಗ ಬೆಂಕಿ ಗೀರಿದ್ದರಿಂದ ಆಕಸ್ಮಿಕವಾಗಿ ಬೆಂಕಿ ತಗುಲಿ ಅಲ್ಲಿನ ಮೂರು ಬಣವಿಗಳು ಭಸ್ಮಗೊಂಡಿರುತ್ತವೆ. ಸದರಿ ಜಮೀನುಗಳ ಸಂತ್ರಸ್ಥರಾದ ಶ್ರೀನಿವಾಸ ತಂ. ಧರ್ಮಪ್ಪ, 14 ಎಕರೆ ಜಮೀನಿನ ಹುಲ್ಲಿನ ಬಣವೆ ಅಂದಾಜು ನಷ್ಟ ರೂ. 70,000, ಕೃಷ್ಣಪ್ಪ ತಂ. ಧರ್ಮಪ್ಪ, 12 ಎಕರೆ ಜಮೀನಿನ ಹುಲ್ಲಿನ ಬಣವೆ ಅಂದಾಜು ನಷ್ಟ ರೂ. 60,000 ಹಾಗೂ ಅರಮೇಶ ತಂ. ಪಕೀರಪ್ಪ, 10 ಎಕರೆ ಜಮೀನಿನ ಹುಲ್ಲಿನ ಬಣವೆ ಅಂದಾಜು ನಷ್ಟ ರೂ. 50,000 ಗಳವರೆಗೆ ನಷ್ಟವುಂಟಾಗಿರುತ್ತದೆ. ಇವರು ಕೃಷಿ ಜಮೀನನ್ನು ಗುತ್ತಿಗೆ ಪಡೆದು ಕೃಷಿ ಸಾಗುವಳಿ ಮಾಡುತ್ತಿದ್ದರು. ಈ ನಷ್ಟದಿಂದ ಇವರು ತುಂಬಾ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ಕೂಡಲೇ ಚಿಕ್ಕಬೆಣಕಲ್ ಗ್ರಾಮ ಪಂಚಾಯತಿಯಿಂದ ಸದರಿ ಗುತ್ತಿಗೆ ಕೃಷಿಕರಿಗೆ ಪರಿಹಾರಧನ ನೀಡಬೇಕೆಂದು ಒತ್ತಾಯಿಸಿದೆ ಎಂದರು.ಈ ಸಂದರ್ಭದಲ್ಲಿ ಬಸಾಪಟ್ಟಣ ಗ್ರಾ.ಪಂ ಮಾಜಿ ಸದಸ್ಯರಾದ ಗೌರಮ್ಮ ಶಂಕರ ನಾಯಕ, ತಾಂಡಾದ ಪ್ರಮುಖರಾದ ಹನುಮಂತಪ್ಪ ರಾಠೋಡ್, ಸಕ್ರಪ್ಪ ಕಾರಭಾರಿ, ಶಂಕ್ರಪ್ಪ ಡಾವು, ವಲ್ಲಭ ವೇಣುಗೋಪಾಲಕೃಷ್ಣ, ಅಗ್ನಿಶಾಮಕ ಸಿಬ್ಬಂದಿಗಳು, ಗ್ರಾಮ ಆಡಳಿತಾಧಿಕಾರಿ ಹಾಗೂ ತಾಂಡಾದ ಹಿರಿಯರು, ಯುವಕರು, ಮಹಿಳೆಯರು ಉಪಸ್ಥಿತರಿದ್ದರು.

# ವೈಜ್ಞಾನಿಕವಾಗಿ ಘನತ್ಯಾಜ್ಯ ವಿಲೇವಾರಿಗೆ ಜಿಲ್ಲಾಧಿಕಾರಿ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ



ಜಿಲ್ಲೆಯ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಉತ್ಪತ್ತಿಯಾಗುತ್ತಿರುವ ಘನತ್ಯಾಜ್ಯವನ್ನು ಸುಪ್ರೀಂ ಕೋರ್ಟ್ ಆದೇಶದ ಅನ್ವಯ ಅತ್ಯಂತ ವೈಜ್ಞಾನಿಕವಾಗಿ ಮತ್ತು ಸಮರ್ಪಕವಾಗಿ ವಿಲೇವಾರಿ ಮಾಡಲು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಅವರು ಕಟ್ಟುನಿಟ್ಟಿನ ಆದೇಶ ಹೊರಡಿಸಿದ್ದಾರೆ.

ಜಿಲ್ಲಾಧಿಕಾರಿಗಳ ಕಚೇರಿಯ ವಿಸಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು,

ಕಸ ವಿಲೇವಾರಿಯಲ್ಲಿ ನಿರ್ಲಕ್ಷ್ಯ ತೋರುವ ಸಂಸ್ಥೆಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ಈ ಯೋಜನೆಯು ಕೇವಲ ಕಸದ ವಿಲೇವಾರಿಯನ್ನಷ್ಟೇ ಗುರಿಯಾಗಿಟ್ಟುಕೊಳ್ಳದೆ, ಪರಿಸರ ಸಮತೋಲನ ಕಾಪಾಡಿಕೊಳ್ಳುವುದು ಯೋಜನೆಯ ಉದ್ದೇಶವಾಗಿದೆ. ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕಸ ಎಲ್ಲೆಂದರಲ್ಲಿ ಎಸೆಯದೇ, ಕಸವನ್ನು ಸುಡುವುದಾಗಲಿ ಅಥವಾ ಭೂಮಿಯಲ್ಲಿ ಹೂಳುವುದಾಗಲಿ ಮಾಡದೆ, ವೈಜ್ಞಾನಿಕ ವಿಲೇವಾಡು ಮಾಡುವ ಮೂಲಕ ತ್ಯಾಜ್ಯ ಮುಕ್ತ ಪರಿಸರ ನಿರ್ಮಿಸಬೇಕು. ಒಮ್ಮೆ ಬಳಸಿ ಬಿಸಾಡುವ ಪ್ಲಾಸ್ಟಿಕ್ ತ್ಯಾಜ್ಯವನ್ನು ಮರುಬಳಕೆಗೆ ನೀಡಬೇಕು. ಹಸಿ ಕಸದಿಂದ ಕಾಂಪೋಸ್ಟ್ ನಂತಹ ಗೊಬ್ಬರ ತಯಾರಿಸಿ ಮಣ್ಣಿನ ಫಲವತ್ತತೆ ಹೆಚ್ಚಿಸುವುದು ಮತ್ತು ಪ್ಲಾಸ್ಟಿಕ್‌ನಂತಹ ವಸ್ತುಗಳನ್ನು ಮರುಬಳಕೆಗೆ ಒಳಪಡಿಸುವುದು ಸೂಕ್ತ ಎಂದರು. ಬೃಹತ್ ತ್ಯಾಜ್ಯ ಉತ್ಪಾದಕರಿಗೆ ಹೊಸ ನಿಯಮ ಅನ್ವಯ ದಿನಕ್ಕೆ 100 ಕೆ.ಜಿಗಿಂತ ಹೆಚ್ಚು ತ್ಯಾಜ್ಯ ಉತ್ಪಾದಿಸುವ ಸಂಸ್ಥೆಗಳು ಅಥವಾ 20,000 ಚದರ ಮೀಟರ್‌ಗಿಂತ ಹೆಚ್ಚಿನ ವಿಸ್ತೀರ್ಣ ಹೊಂದಿರುವ ಅಪಾರ್ಟ್‌ಮೆಂಟ್ ಮತ್ತು ವಾಣಿಜ್ಯ ಮಳಿಗೆಗಳು ತಮ್ಮ ಆವರಣದಲ್ಲೇ ತ್ಯಾಜ್ಯ ಸಂಸ್ಕರಣಾ ಘಟಕಗಳನ್ನು ಹೊಂದುವುದು ಕಡ್ಡಾಯವಾಗಿದೆ. ತಪ್ಪಿದಲ್ಲಿ ಅಂತಹ ಸಂಸ್ಥೆಗಳು ಬೃಹತ್ ತ್ಯಾಜ್ಯ ಉತ್ಪಾದಕ ಜವಾಬ್ದಾರಿ ಪ್ರಮಾಣಪತ್ರ ಪಡೆಯುವುದು ಕಡ್ಡಾಯವಾಗಿದೆ. ಈ ನಿಯಮ ಉಲ್ಲಂಘಿಸಿ ಎಲ್ಲೆಂದರಲ್ಲಿ ಕಸ ಎಸೆಯುವವರಿಗೆ ಸ್ಥಳದಲ್ಲೇ ದಂಡ ವಿಧಿಸುವ ವ್ಯವಸ್ಥೆ ಜಾರಿಗೆ ತರಲು ಚಿಂತನೆ ನಡೆಸಲಾಗಿದೆ ಎಂದರು.

ತ್ಯಾಜ್ಯ ನಿರ್ವಹಣೆಯು ಕೇವಲ ಸರ್ಕಾರದ ಜವಾಬ್ದಾರಿಯಲ್ಲ, ಇದು ಸಾರ್ವಜನಿಕರ ಸಹಕಾರವು ಅತ್ಯಗತ್ಯ. ಈ ನಿಟ್ಟಿನಲ್ಲಿ ಮೂಲದಲ್ಲಿಯೇ ಹಸಿ ಕಸ ಮತ್ತು ಒಣ ಕಸವನ್ನು ಮನೆಯಲ್ಲೇ ಪ್ರತ್ಯೇಕಿಸಿ ಕಸ ವಿಲೇವಾರಿ ವಾಹನಗಳಿಗೆ ನೀಡಬೇಕು. ಇದರಿಂದ ಕಾರ್ಮಿಕರ ಶ್ರಮ ಮತ್ತು ಸಮಯ ಎರಡೂ ಉಳಿತಾಯವಾಗಲಿದೆ. ಈ ಕುರಿತು ಅಭಿಯಾನಗಳ ಮೂಲಕ ಸಾರ್ವಜನಿಕರಲ್ಲಿ ತ್ಯಾಜ್ಯ ಎಲ್ಲೆಂದರಲ್ಲಿ ಎಸೆಯದಂತೆ ಜಾಗೃತಿ ಮೂಡಿಸಿಬೇಕು.

ತ್ಯಾಜ್ಯ ನಿರ್ವಹಣೆಯಲ್ಲಿ ತೊಡಗಿರುವ ಕಾರ್ಮಿಕರಿಗೆ ತರಬೇತಿ ಮತ್ತು ಸ್ವ-ಸುರಕ್ಷತಾ ಸಾಧನ ಸಲಕರಣೆ ಒದಗಿಸಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದ ಅವರು, ಪ್ರತಿ ವರ್ಷ ಜೂನ್ 30ರೊಳಗೆ ತ್ಯಾಜ್ಯ ಸಂಸ್ಕರಣೆಯ ಸಂಪೂರ್ಣ ಮಾಹಿತಿಯನ್ನು ಆನ್‌ಲೈನ್ ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡುವುದು ಕಡ್ಡಾಯವಾಗಿದೆ ಎಂದು ತಿಳಿಸಿದರು.

ಈ ವೇಳೆ ಜಿಲ್ಲಾ ನಗರಾಭಿವೃದ್ಧಿ ಯೋಜನಾ ನಿರ್ದೇಶಕ ಮನೋಹರ್, ನಗರಸಭೆ ಪೌರಾಯುಕ್ತ ಶಿವಕುಮಾರ್, ಉಪವಿಭಾಗಾಧಿಕಾರಿ ವಿವೇಕ್, ತಹಶೀಲ್ದಾರ್ ಶೃತಿ.ಎಂ, ಸೇರಿದಂತೆ ನಗರ ಮತ್ತು ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು ಇದ್ದರು.

## ಅರಿವು ಕೇಂದ್ರದಲ್ಲಿ ಮಕ್ಕಳ ಬೇಸಿಗೆ ಶಿಬಿರ

• ಮಲ್ಲಮ್ಮ ನುಡಿ ವಾರ್ತೆ ಬಸವಕಲ್ಯಾಣ



ತಾಲ್ಲೂಕಿನ ಕಿಟ್ಟಾ ಗ್ರಾಮ ಪಂಚಾಯತ ಅರಿವು ಕೇಂದ್ರದಲ್ಲಿ ಮಕ್ಕಳ ಬೇಸಿಗೆ ಶಿಬಿರ ಪ್ರಾರಂಭಿಸಲಾಯಿತು. ಕಾರ್ಯಕ್ರಮವನ್ನು ತಾ.ಪಂ.ಕಾ.ನಿ.ಅ. ರಮೇಶ್ ಸುಲ್ಪಿ ಅವರು ಬೇಸಿಗೆ ಶಿಬಿರ ಉದ್ಘಾಟಿಸಿ ಮಾತನಾಡಿ ಮಕ್ಕಳಿಗೆ ಮಕ್ಕಳ ಶಾಲೆ ರಜೆ ಇರುವುದರಿಂದ ಸರ್ಕಾರ ಆದೇಶ ಹೊರಡಿಸಿದಂತೆ ಪ್ರತಿ ಗ್ರಾಮ ಪಂಚಾಯತಿಯಲ್ಲಿ ಬೇಸಿಗೆ ಶಿಬಿರ ಕಡ್ಡಾಯವಾಗಿ ಹಮ್ಮಿಕೊಳ್ಳಲಾಗಿದೆ.

ಇದರಿಂದ ಮಕ್ಕಳಿಗೆ ಆಟದಿಂದ ಪಾಠ ಹಾಗೂ ಮಕ್ಕಳಲ್ಲಿ ಕ್ರಿಯಾತ್ಮಕ ಚಟುವಟಿಕೆಗಳು ಕಲಿಸುವಂತಹ ಕೇಂದ್ರವಾಗಿದೆ ಮಕ್ಕಳು ಮನೆಯಲ್ಲಿ ಮೊಬೈಲ್ ನೋಡುವುದು ಬಿಡಬೇಕು ಇದರಿಂದ ನಿಮ್ಮ ಆರೋಗ್ಯಕ್ಕೆ ಹಾನಿಯಾಗುತ್ತದೆ ಹಾಗೂ ಮಕ್ಕಳು ಕ್ರಿಯಾತ್ಮಕ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವುದರಿಂದ ದೈಹಿಕವಾಗಿ ಹಾಗೂ ಮಾನಸಿಕವಾಗಿ ಸದೃಢರಾಗುತ್ತಾರೆ ಎಂದು ತಿಳಿಸಿದರು.

ರಾಜೀವ್ ಗಾಂಧಿ ಪೆಲ್ಲೋ ಶ್ರುತಿ ರವರು ಮಾತನಾಡಿ ಮಕ್ಕಳಿಗೆ ಬೇಸಿಗೆಯಲ್ಲಿ ಶಾಲೆ ರಜೆ ಇರುವುದರಿಂದ ಕೇಂದ್ರದಲ್ಲಿ ಹಲವಾರು ರೀತಿಯ ಚಟುವಟಿಕೆಗಳು ಹೇಳಿಕೊಡುತ್ತಾರೆ ಈ ಒಂದು ಅರಿವು ಕೇಂದ್ರದಲ್ಲಿ ತಮಗೆ ಇಷ್ಟ ಇರುವಂತಹ ಆಟಗಳನ್ನು ಆಡಿಸುತ್ತಾರೆ ವೈಜ್ಞಾನಿಕ ಚಟುವಟಿಕೆ, ಒಳಾಂಗಣ ಕ್ರೀಡೆ ಹಾಗೂ ಸಮಾಜಕ್ಕೆ ಸಂಬಂಧ ಪಟ್ಟಂತಹ ವಿಷಯಗಳು ಕಲಿಸುತ್ತಾರೆ ಎಂದರು. ಈ ಸಂದರ್ಭದಲ್ಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿ ರೇವಣಸಿದ್ದಪ್ಪ ಜಮಾದಾರ್. ಅರಿವು ಕೇಂದ್ರದ ಮೇಲ್ವಿಚಾರಕಿ ಲಕ್ಷ್ಮಿ ಬಾಯಿ, ಗ್ರಾ ಪಂ ಸಿಬಂದಿ, ಸ್ವ ಸಹಾಯ ಸಂಘದ ಮಹಿಳೆಯರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಮಹಿಳಾ ಕಾಲೇಜಿನಲ್ಲಿ ದೇಸಿ ಮೇಳ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ



ಗಂಗಾವತಿ ಕಲ್ಮಠ ಮಹಿಳಾ ಕಾಲೇಜಿನಲ್ಲಿ ದೇಸಿ ಮೇಳ ನಗರದ ಶ್ರೀ ಕೊಟ್ಟೂರೇಶ್ವರ ವಿದ್ಯಾವರ್ಧಕ ಸಂಘದ ಕಲ್ಮಠ ಶ್ರೀ ಚನ್ನಬಸವ ಸ್ವಾಮಿ ಮಹಿಳಾ ಮಹಾವಿದ್ಯಾಲಯದಲ್ಲಿ ಇಂದು ದೇಸಿ ಮೇಳ ಅದ್ದೂರಿಯಾಗಿ, ಸಂಭ್ರಮ ಸಡಗರಗಳಿಂದ ನೆರವೇರಿತು.

ಮಹಾವಿದ್ಯಾಲಯದ ವಿಶ್ವಚೇತನ ವಿದ್ಯಾರ್ಥಿನಿ ಒಕ್ಕೂಟವು ಗುರುವಂದನಾ ಕಾರ್ಯಕ್ರಮದ ಅಂಗವಾಗಿ ದೇಸಿ ಮೇಳವನ್ನು ಆಯೋಜಿಸಿತ್ತು. ಸದರಿ ಮೇಳವು ಅಲಂಕೃತ ಚಕ್ಕಡಿಯಲ್ಲಿ ಇಳಕಲ್ ಸೀರೆಯನ್ನು ಧರಿಸಿದ ಉಪನ್ಯಾಸಕಿಯರು ಮತ್ತು ವಿದ್ಯಾರ್ಥಿನಿಯರ ಜಾನಪದೀಯ ಮೆರವಣಿಗೆಯೊಂದಿಗೆ ಪ್ರಾರಂಭವಾಯಿತು. ಭಾರತವು ಕೃಷಿ ಪ್ರಧಾನ ದೇಶವಾಗಿದ್ದು ಕೃಷಿ ಕಾರ್ಯದ ಬೆನ್ನೆಲುಬು ಎತ್ತು ಮತ್ತು ಚಕ್ಕಡಿ. ಕಳೆದುಹೋಗುತ್ತಿರುವ ಈ ಜಾನಪದೀಯ ಪರಂಪರೆಯನ್ನು ಆಧುನಿಕ ಪೀಳಿಗೆಗೆ ಪರಿಚಯಿಸುವ ಉದ್ದೇಶದಿಂದ ಮಹಾವಿದ್ಯಾಲಯದಲ್ಲಿ ಚಕ್ಕಡಿಯೊಂದಿಗೆ ಸವಾರಿ ಎಂಬ ಕಲ್ಪನೆಯಲ್ಲಿ ವಿದ್ಯಾರ್ಥಿನಿಯರಿಗೆ ಚಕ್ಕಡಿಯಲ್ಲಿ ಕುಳಿತು ಸಂಚರಿಸುವ ಆ ಮೂಲಕ ವಿಶೇಷ ಅನುಭವ ದಕ್ಕಿಸಿಕೊಡುವ ಅವಕಾಶ ಕಲ್ಪಿಸಲಾಗಿತ್ತು. ತದನಂತರ ವೇದಿಕೆ ಕಾರ್ಯಕ್ರಮ ಜರಗಿ ವಿದ್ಯಾರ್ಥಿನಿಯರು ಗುರುವಂದನೆ ಸಲ್ಲಿಸಿದರು. ಅದಕ್ಕೆ ಪ್ರತಿಯಾಗಿ ಎಲ್ಲ ಉಪನ್ಯಾಸಕರು ವಿದ್ಯಾರ್ಥಿನಿಯರಿಗೆ ಸುಂದರ ಭವಿಷ್ಯಕ್ಕಾಗಿ ಶುಭಹಾರೈಸಿದರು. ಕೊನೆಯಲ್ಲಿ ಗ್ರಾಮೀಣ ಸೊಗಡಿನ ಭಕ್ಷ ಬೋಜ್ಯಗಳನ್ನೊಳಗೊಂಡ ದೇಸಿ ಊತಣಕೂಟ ಜರುಗಿತು. ವಿದ್ಯಾರ್ಥಿನಿಯರು ತಾವೇ ಮನೆಯಿಂದ ತಯಾರಿಸಿ ತಂದ ಹಳ್ಳಿ ಸೊಗಡಿನ ರೊಟ್ಟಿ, ಪಲ್ಲೆ ಕಾಳು, ಹೋಳಿಗೆ, ಚಿತ್ರಾನ್ನ ಮೊಸರನ್ನ ಮುಂತಾದ ಭೋಜ್ಯಗಳನ್ನು ಗುರುಗಳೊಂದಿಗೆ ಕುಳಿತು ಸಹಭೋಜನ ಮಾಡಿದರು.

# ನೂತನವಾಗಿ ನೇತ್ರ ಚಿಕಿತ್ಸೆ ಸೇವೆಯ ಚಿಕಿತ್ಸಾಲಯ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ ಪಿರಿಯಾಪಟ್ಟಣ



ನಗರ ಪ್ರದೇಶದ ಸೇವೆಯಲ್ಲಿ ತೃಪ್ತಿಯಿದ್ದು ಗ್ರಾಮೀಣ ಪ್ರದೇಶದಲ್ಲೂ ತಮ್ಮ ಸೇವೆಯನ್ನು ವಿಸ್ತರಿಸಬೇಕೆಂಬ ಉದ್ದೇಶದಿಂದ ನೇತ್ರ ಚಿಕಿತ್ಸಾ ಸೇವೆಯನ್ನು ಸ್ಥಾಪನೆ ಮಾಡುತ್ತಿರುವುದಾಗಿ ಅಂಬಿಕಾ ಕಣ್ಣಿನ ಚಿಕಿತ್ಸಾಲಯದ ವೈದ್ಯರಾದ ಡಾ. ನವನೀತ್ ತಿಳಿಸಿದರು.

ಪಟ್ಟಣದ ಗೋಣಿಕೊಪ್ಪ ರಸ್ತೆಗೆ ಹೊಂದಿಕೊಂಡಂತೆ ಇರುವ ಸ್ಯಾಂಟ್ ಮೇರಿಸ್ ಆಸ್ಪತ್ರೆಯಲ್ಲಿ ನೂತನವಾಗಿ ನೇತ್ರ ಚಿಕಿತ್ಸೆ ಸೇವೆಯ ಚಿಕಿತ್ಸಾಲಯ ಚಾಲನೆ ಮತ್ತು ಕಾರ್ಯಕ್ರಮವನ್ನು ಬುಧವಾರ ಉದ್ಘಾಟಿಸಿ ಮಾತನಾಡಿದರು.

ಕಳೆದ ಕೇವಲ ಐದು ವರ್ಷಗಳಲ್ಲಿ ಹದಿನೈದು ಸಾವಿರಕ್ಕೂ ಹೆಚ್ಚು ಕಣ್ಣಿನ ಶಸ್ತ್ರಚಿಕಿತ್ಸೆ ಮಾಡಿ ಯಶಸ್ವಿಯಾಗಿದ್ದು ಇಲ್ಲಿಯವರೆಗೆ ಕೇವಲ ನಗರ ಪ್ರದೇಶದಲ್ಲಿ ಸೇವೆ ಸೀಮಿತವಾಗಿದೆ ಆದರೆ ತಮ್ಮ ಸೇವೆಯನ್ನು ಗ್ರಾಮೀಣ ಪ್ರದೇಶದ ಜನರಿಗೂ ತಲುಪಿಸುವ ಉದ್ದೇಶದಿಂದ ಎಲ್ಲಾ ರೀತಿಯ ಆಧುನಿಕ ಉಪಕರಣಗಳಿಂದ ಕಡಿಮೆ ದರದಲ್ಲಿ ಸೇವೆ ಸಲ್ಲಿಸುವುದಾಗಿ ಭರವಸೆ ನೀಡಿದರು.

ಐದು ಮಂದಿಯ ತಂಡ ಸೇರಿ ಗ್ರ್ಯಾಂಡ್ ಸೈಕರ್ ಎಂಬ ಹೆಸರಿನೊಂದಿಗೆ ಈ ನೇತ್ರ ಚಿಕಿತ್ಸಾ ಸೇವೆಯನ್ನು ಆರಂಭಿಸುತ್ತಿದ್ದು ನಗರ ಪ್ರದೇಶದಂತೆ ಇಲ್ಲಿಯೂ ಸಹ ಗುಣಮಟ್ಟದ ಸೇವೆ ಎಲ್ಲರಿಗೂ ದೊರಕಿಸಿ ಕೊಡುವುದಾಗಿ ತಿಳಿಸಿದ ಅವರು ಇದರ ಸದುಪಯೋಗಪಡಿಸಿಕೊಳ್ಳುವಂತೆ ಮನವಿ ಮಾಡಿದರು. ಮಾಜಿ ತಾಪಂ ಸ್ಥಾಯಿ ಸಮಿತಿ ಅಧ್ಯಕ್ಷ ಟಿ ಈರಯ್ಯ ಮಾತನಾಡಿ ಗ್ರಾಮೀಣ ಪ್ರದೇಶದಲ್ಲಿರುವ ರೈತಾಪಿ ವರ್ಗ ಮತ್ತು ಜನಸಾಮಾನ್ಯರು ಆರಂಭಿಕವಾಗಿ ಯಾವುದೇ ಅನಾರೋಗ್ಯದ ಸಮಸ್ಯೆಯನ್ನು ಲೆಕ್ಕಿಸದೆ ಉದಾಸಿನ ಮಾಡುವವರೇ ಹೆಚ್ಚು ಇದ್ದು ತೀವ್ರ ಅನುರಾಗಕ್ಕೆತುತ್ತಾದ ಸಂದರ್ಭದಲ್ಲಿ ಮಾತ್ರ ಆಸ್ಪತ್ರೆಯ ವೈದ್ಯರುಗಳನ್ನು ಸಂಪರ್ಕ ಮಾಡುತ್ತಿರುವುದನ್ನು ಕಾಣಬಹುದಾಗಿದೆ.

ಇದರಿಂದ ಚೇತರಿಕೆ ಆಗುವುದು ಬಹಳಷ್ಟು ಕಷ್ಟದ ವಿಷಯವಾಗಿದೆ ಆದ್ದರಿಂದ ತಮಗಿರುವ ತೊಂದರೆಗಳನ್ನು ಆದಷ್ಟು ಬದಿಗೆಟ್ಟು ವೈದ್ಯರ ಸಲಹೆಗಳನ್ನು ಅಗತ್ಯವಾಗಿ ಪಡೆಯಬೇಕು ಅದರಲ್ಲೂ ಕಣ್ಣಿನ ದೃಷ್ಟಿಯನ್ನು ಸರಿಯಾದ ರೀತಿಯಲ್ಲಿ ಕಾಪಾಡಿಕೊಳ್ಳಲು ಎಚ್ಚರ ವಹಿಸಬೇಕೆಂದು ಸಲಹೆ ನೀಡಿದ ಅವರು ನುರಿತ ವೈದ್ಯರ ಸಲಹೆ ಸಹಕಾರ ಪಡೆಯಬೇಕು ಎಂದಿಗೂ ನಿರ್ಲಕ್ಷ ವಹಿಸಬಾರದು ಎಂದು ಕರೆ ನೀಡಿದರು.

ಹೋಲಿ ಸಿಸ್ಟರ್ ಸಂಸ್ಥೆಯ ಅಧ್ಯಕ್ಷರಾದ ಸಿಸ್ಟರ್ ಐಡ ಮಾತನಾಡಿ ಸೆಂಟ್ ಮೇರಿಸ್ ಆಸ್ಪತ್ರೆಯು ಉತ್ತಮ ಸೇವೆಯನ್ನು ನೀಡುತ್ತಿದ್ದು ಪ್ರಸ್ತುತವಾಗಿ ಆಸ್ಪತ್ರೆಯಲ್ಲಿ ನೇತ್ರ ಚಿಕಿತ್ಸೆ ಸೇವೆಯನ್ನು ಆರಂಭಿಸುತ್ತಿರುವ ಬಗ್ಗೆ ಅತ್ಯಂತ ಸಂತಸ ತಂದಿದೆ ಎಂದು ತಮ್ಮ ಅನಿಸಿಕೆ ವ್ಯಕ್ತಪಡಿಸಿದರು.



ಭೋಗ-ಐಭೋಗ

•ಕಸ್ತೂರಿ ಡಿ. ಪತ್ತಾರ
ಬೆಂಗಳೂರು

# ಪ್ರಯತ್ನವೇ ಪ್ರಗತಿಗೆ ದಾರಿ



ಪ್ರಯತ್ನ ಎಂದರೆ ಒಂದೇ ಸಲ ಮಾಡಿಬಿಡುವುದಲ್ಲ. ಯಾವ ಮನುಷ್ಯ ಸತತ ಪ್ರಯತ್ನದಲ್ಲಿ ನಿರತನಾಗಿರುತ್ತಾನೆಯೋ, ಅಂತಹವರು ಒಂದಿಲ್ಲ ಒಂದು ದಿನ ಗುರಿ ತಲುಪುವುದು ಖಂಡಿತ. ಸಾಧನೆಯ ಹಾದಿಯಲ್ಲಿ ಇರುವವರು ಸದಾ ಜಾಗೃತವಾಗಿ ಸತತ ಪ್ರಯತ್ನದಲ್ಲಿ ಇರಬೇಕಾಗುತ್ತದೆ. ಸಾಧಕರ ಬದುಕು ಅಷ್ಟು ಸುಲಲಿತವಾಗಿರುವುದಿಲ್ಲ; ಮತ್ತೆ ಮತ್ತೆ ಗುರಿಯೆಡೆಗೆ ಅವರ ಹಂಬಲ ತುಡಿಯುತ್ತಿದ್ದಾಗ ಮಾತ್ರ ಸಫಲ ಸಾಧ್ಯವಾಗುತ್ತದೆ.

ಪ್ರಯತ್ನಗಳು ಹೇಗೆಂದರೆ ನೀರನ್ನು ಪಡೆಯಲು ಬಾವಿ ತೋಡಿದಂತೆ. ಜಲ ಸಿಗುವವರೆಗೆ ನಾವು ಹೇಗೆ ನಿರಂತರವಾಗಿ ಶ್ರಮಿಸುತ್ತೇವೆಯೋ ಹಾಗೆ, ಅಷ್ಟು ಆಳವಾಗಿ ತೋಡಿದ ಮೇಲೆ ನಮ್ಮ ಶ್ರದ್ಧೆಗೆ ದೈವವು ಯಾವತ್ತೂ ಮೋಸ ಮಾಡುವುದಿಲ್ಲ, ನೀರು ಕರುಣಿಸುತ್ತಾನೆ. ಹಾಗೆಯೇ ನಮ್ಮ ಜೀವನದಲ್ಲಿ ಸವಾಲುಗಳನ್ನು ಪುನಃ ಎದುರಿಸುವ ಸಮಯ ಬರುತ್ತದೆ, ಅದನ್ನು ಧೈರ್ಯವಾಗಿ ಎದುರಿಸಲೇಬೇಕು. ವಿದ್ಯಾರ್ಥಿಗಳು ಕಲಿಕೆಯಲ್ಲಿ ಇರುವಾಗ ಪರೀಕ್ಷೆಗಳನ್ನು ಎದುರಿಸಲು ಮರಳಿ ಮರಳಿ ಪ್ರಯತ್ನ ಪಡಬೇಕಾಗುತ್ತದೆ. ಉನ್ನತ ಹುದ್ದೆಯ ಪರೀಕ್ಷೆಗಳಲ್ಲಿ ಮೊದಲ ಪ್ರಯತ್ನದಲ್ಲೇ ಉತ್ತೀರ್ಣರಾಗುವವರು ಕೆಲವೇ ಜನರಿರಬಹುದು. ಆದರೆ ಮರಳಿ ಮರಳಿ ಪ್ರಯತ್ನಿಸಿ ಉನ್ನತ ಹುದ್ದೆ ಏರಿದವರು ಅನೇಕರಿದ್ದಾರೆ.

ಒಂದು ಬೀಜ ಮಣ್ಣಿನಲ್ಲಿ ಹುದುಗಿದರೂ ಅದರ ಪ್ರಯತ್ನ ನಿರಂತರವಾಗಿರುತ್ತದೆ. ಆ ಪ್ರಯತ್ನದ ಫಲವೇ ಸಸಿಯಾಗಿ, ಗಿಡವಾಗಿ, ಮುಂದೆ ಹೆಮ್ಮರವಾಗಿ ಬೆಳೆಯುತ್ತದೆ. ಬಿಸಿಲು, ಬಿರುಗಾಳಿ, ಬಿರುಮಳೆ – ಎಲ್ಲವನ್ನೂ ಸಹಿಸಿಕೊಂಡು ಅದರ ಗುರಿ ಎಲೆಯಿಂದ ಹಿಡಿದು ಹೂ-ಹಣ್ಣು ಕೊಡುವುದರ ಕಡೆಗೆ ಇರುತ್ತದೆ. ಈ ನಿರಂತರ ಪ್ರಕ್ರಿಯೆಯ ಫಲವಾಗಿ ಅದು ಹೂ-ಹಣ್ಣುಗಳೊಂದಿಗೆ ಸಂಭ್ರಮಿಸಿ, ಎಲ್ಲವನ್ನೂ ಜಗತ್ತಿಗೆ ನೀಡಿ ಸಂತೃಪ್ತಿಯ ಭಾವವನ್ನು ಹೊಂದುತ್ತದೆ.

"ಜ್ಞಾನದ ಬಲದಿಂದ ಅಜ್ಞಾನದ ಕೇಡು ನೋಡಯ್ಯ" ಎನ್ನುವ ಅಪ್ಪ ಬಸವಣ್ಣನವರ ವಚನದಂತೆ, ಜ್ಞಾನವನ್ನು ಪಡೆಯಬೇಕಾದರೆ ನಿತ್ಯ ಅಭ್ಯಾಸ ಮತ್ತು ಪ್ರಯತ್ನವನ್ನು ಬೆಳೆಸಿಕೊಳ್ಳಬೇಕು. ಕೇವಲ ವಿದ್ಯಾಭ್ಯಾಸವಷ್ಟೇ ಅಲ್ಲದೆ, ಜೀವನದ ಬೇರೆ ಬೇರೆ ವಿಷಯಗಳನ್ನು ತಿಳಿಯಲು ಹಲವಾರು ಪ್ರಯತ್ನಗಳು ಬೇಕಾಗುತ್ತವೆ. ಸ್ಪಷ್ಟವಾದ ಗುರಿ, ದೃಢ ಮನಸ್ಸು ಹಾಗೂ ಗಟ್ಟಿ ನಿರ್ಧಾರದಿಂದ ಕಾರ್ಯಶೀಲರಾಗುವುದು ಸಾಧಕರ ಲಕ್ಷಣವಾಗಿದೆ. ಜಗದ ಬದುಕಿನಲ್ಲಿ ಬದುಕಲಿಕ್ಕಾಗಿ ಜನರು ನಾನಾ ಕೆಲಸಗಳನ್ನು ಮಾಡಿ ಜೀವನ ಸಾಗಿಸುತ್ತಾರೆ; ಇದರಿಂದ ಜೀವನವಂತೂ ನಡೆಯುತ್ತದೆ. ಆದರೆ ಇದು ಎಲ್ಲರಂತೆ ಸಹಜ ಜೀವನವಷ್ಟೇ ಆಗುತ್ತದೆ. ಒಬ್ಬ ವಿಶೇಷ ವ್ಯಕ್ತಿಯಾಗಬೇಕಾದರೆ, ಛಲಬಿಡದ ನಿರಂತರ ಪ್ರಯತ್ನದ ಸಾಧನೆಯಿಂದ ಮಾತ್ರ ಅದು ಸಾಧ್ಯ.

ನಾವು ಶ್ರಮವಹಿಸಿ ಪ್ರಯತ್ನಿಸುವುದನ್ನು ಪ್ರಕೃತಿಯಲ್ಲಿನ ಸಣ್ಣ ಸಣ್ಣ ಪಕ್ಷಿ-ಪ್ರಾಣಿಗಳನ್ನು ನೋಡಿ ಕಲಿಯಬಹುದು. ಒಂದು ಚಿಕ್ಕ ಗಾತ್ರದ ಗುಬ್ಬಿ ತನ್ನ ಪರಿವಾರಕ್ಕಾಗಿ ಗೂಡನ್ನು ಕಟ್ಟಲು ಪಡುವ ಪ್ರಯತ್ನ ಬಹಳ ದೊಡ್ಡದು. ಒಂದೊಂದೇ ಕಡ್ಡಿಯನ್ನು ತಂದು, ಬಹಳ ಭದ್ರವಾಗಿ ಗೂಡು ಕಟ್ಟಿ ತನ್ನ ಮರಿಗಳಿಗೆ ಆಶ್ರಯ ನೀಡುತ್ತದೆ. ಅದರ ನಿರಂತರ ಪ್ರಯತ್ನದಿಂದಲೇ ಇದು ಸಾಧ್ಯವಲ್ಲವೇ? ಎಲ್ಲಾ ಪ್ರಯತ್ನಗಳು ತಕ್ಷಣವೇ ಯಶಸ್ಸನ್ನು ತಂದುಕೊಡುತ್ತವೆ ಎಂದು ಹೇಳಲಾಗದು. ಪ್ರಯತ್ನ ಮಾಡುವುದು ನಮ್ಮ ಕೆಲಸ, ಫಲಿತಾಂಶ ದೈವೇಚ್ಛೆ. ಆದರೆ ನಮ್ಮ ದೃಢ ನಿರ್ಧಾರಗಳ ಮೇಲೆ ಯಶಸ್ಸು ನಿಂತಿರುತ್ತದೆ.

ಎಷ್ಟೋ ವಿಷಯಗಳು ನಮ್ಮ ಕಣ್ಣಮುಂದೆ ಕಾಣುತ್ತವೆ, ಅದನ್ನು ಅರಿಯುವ ಮನಸ್ಸಿರಬೇಕು ಅಷ್ಟೇ. ಇರುವೆ ತುಂಬಾ ಚಿಕ್ಕದಾದರೂ ಅದರಿಂದ ತಿಳಿದುಕೊಳ್ಳುವುದು ಬಹಳಷ್ಟಿದೆ. ಅದರ ಶ್ರಮ ಹಾಗೂ ಒಗ್ಗಟ್ಟಿನ ಜೀವನಕ್ರಮವನ್ನು ನಮ್ಮ ಜೀವನದಲ್ಲಿ ಸ್ವಲ್ಪ ಅಳವಡಿಸಿಕೊಂಡರೂ ಸಾಕು. ಅದು ತನ್ನ ದೇಹಕ್ಕಿಂತ ಹತ್ತರಷ್ಟು ಭಾರವನ್ನು ಹೊತ್ತು ಮಳೆಗಾಲಕ್ಕಾಗಿ ಆಹಾರ ಸಂಗ್ರಹ ಮಾಡುತ್ತದೆ. ಆಹಾರವನ್ನು ಬಾಯಿಂದ ಹಿಡಿದು ಸಾಗುವಾಗ, ಮಧ್ಯದಲ್ಲಿ ಅದು ಬಿದ್ದರೂ ಧೃತಿಗೆಡದೆ ಮರಳಿ ಹಿಡಿದುಕೊಂಡು ಗುರಿ ಸೇರುತ್ತದೆ. ನಾವೆಲ್ಲರೂ ಇದನ್ನು ನೋಡಿರುತ್ತೇವೆ, ಆದರೆ ಅದರ ಬಾಳಿನ ಅರ್ಥವನ್ನು ಗಮನಕ್ಕೆ ತೆಗೆದುಕೊಳ್ಳುವುದಿಲ್ಲ ಅಷ್ಟೆ. ಪ್ರಯತ್ನ ಎನ್ನುವುದು ಹಾಗೆಯೇ ಇರಬೇಕು. ಪ್ರಯತ್ನದಿಂದಲೇ ಪ್ರಗತಿ ಸಾಧ್ಯವಲ್ಲವೇ? ನಾವೆಲ್ಲರೂ ಪ್ರಯತ್ನಶೀಲರಾಗಿ ಆದರ್ಶದ ಬದುಕನ್ನು ಕಾಣೋಣ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)